24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 32 | ನವದೆಹಲಿ | ಬೆಲೆ ₹10 | ಜುಲೈ 28 2026, ಮಂಗಳವಾರ

## ಒಳಪುಟಗಳಲ್ಲಿ

ಮಾನಹಾನಿಕರ ಸಂದೇಶ: ಮೆಟಾ, ಗೂಗಲ್, ಎಕ್ಸ್ ವಿರುದ್ಧ ದಾವೆ ಹೂಡಲು ನಿತಿನ್ ಗಡ್ಕರಿಗೆ ಬಾಂಬೆ ಹೈಕೋರ್ಟ್ ಅನುಮತಿ - ಪು.4

ಜೆಡಿಎಸ್ ಕಚೇರಿಯಲ್ಲಿ ಚೆನ್ನಮ್ಮಗೆ ಶ್ರದ್ಧಾಂಜಲಿ - ಪು.5

## ಈ ವಾರ ಸಂಪುಟ ವಿಸ್ತರಣೆ ಪೂರ್ಣ: ಡಿ.ಕೆ. ಶಿವಕುಮಾರ್



ಬೆಂಗಳೂರು, ಜು.27: ಈ ವಾರದೊಳಗೆ ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ದೆಹಲಿಗೆ ಪ್ರಯಾಣ ಬೆಳೆಸುವ ಮುನ್ನ ಸುದ್ದಿಗಾರರ ಜೊತೆ ಮಾತನಾಡಿದ ಅವರು, "ಸಚಿವ ಸಂಪುಟ ವಿಸ್ತರಣೆ ವಿಚಾರದಲ್ಲಿ ನೀವು (ಮಾಧ್ಯಮಗಳು) ಆತುರದಲ್ಲಿದ್ದೀರಿ. ಈ ವಾರದಲ್ಲಿ ಅದು ಪೂರ್ಣವಾಗಲಿದೆ" ಎಂದು ತಿಳಿಸಿದರು. ನಾನು ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ಯಾವ ವಿಚಾರದಲ್ಲಿ ಎಲ್ಲರನ್ನು ಒಟ್ಟಾಗಿ ತೆಗೆದುಕೊಂಡು ಹೋಗಬೇಕು. ಬೆಂಗಳೂರಿನಲ್ಲಿ ಸರ್ವಪಕ್ಷ ಸಭೆ ಕರೆಯಲಾಗುವುದು. ರಾಜ್ಯದ ಹಿರಿಯ ನಾಯಕರ ಜೊತೆಗೂ ಪ್ರಮುಖ ವಿಚಾರಗಳನ್ನು ಚರ್ಚಿಸಲಾಗುವುದು ಎಂದರು.

# ರಾಜ್ಯದ ಹಿತಾಸಕ್ತಿ ಕಾಪಾಡಲು ಒಟ್ಟಾಗಿ ಕಾರ್ಯನಿರ್ವಹಿಸೋಣ

### ರಾಜ್ಯದ ಯೋಜನೆಗಳಿಗೆ ಅನುಮತಿ ದೊರಕಿಸಿಕೊಡಲು ಸಂಸದರ ಸಹಕಾರ ಮುಖ್ಯ ಎಂದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್





**ನವದೆಹಲಿ, ಜು.27: ರಾಜ್ಯದ ಹಿತಾಸಕ್ತಿ ಕಾಪಾಡಲು ನಾವೆಲ್ಲ ಒಟ್ಟಾಗಿ ಕೆಲಸ ಮಾಡೋಣ. ರಾಜ್ಯದ ಜನರ ಕಲ್ಯಾಣಕ್ಕಾಗಿ ರಾಜಕಾರಣವನ್ನು ಪಕ್ಕಕ್ಕೆ ಇಡೋಣ ಎಂದು ಸಿಎಂ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ.**

ನವದೆಹಲಿಯ ಕರ್ನಾಟಕ ಭವನದಲ್ಲಿ ಕರ್ನಾಟಕದ ಸಂಸದರ ಜತೆ ಸೋಮವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಪ್ರಗತಿಗೆ ನಿಮ್ಮ ಸಹಕಾರ ಬಯಸುತ್ತೇನೆ. ಕೇಂದ್ರ ಸರಕಾರದ ಮುಂದೆ ಬಾಕಿ ಉಳಿದಿರುವ ರಾಜ್ಯದ ನಾನಾ ಯೋಜನೆಗಳಿಗೆ ಅನುಮತಿ ದೊರಕಿಸಿಕೊಡಲು ನಿಮ್ಮ ಸಹಕಾರ ಬಹು ಮುಖ್ಯ ಎಂದು ಹೇಳಿದರು.

ನಾನು ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದಾಗ ಈ ವರ್ಷ ತೀವ್ರ ಬರ ಪರಿಸ್ಥಿತಿ ಎದುರಾಗುವ ಬಗ್ಗೆ ಮುನ್ಸೂಚನೆ ನೀಡಿದ್ದರು. ಕೊಟ್ಟಿದ್ದರು. ಕರ್ನಾಟಕದಲ್ಲಿ ಆಲಮಟ್ಟಿ, ಹಾರಂಗಿ ಜಲಾಶಯ ಬಿಟ್ಟು ಉಳಿದ ಅಣೆಕಟ್ಟೆಗಳು ಬಹುತೇಕ ಖಾಲಿಯಾಗಿವೆ. ಇದೇ ಪರಿಸ್ಥಿತಿ ಮುಂದುವರಿದರೆ ಜನ, ಜಾನುವಾರಿಗೆ ಕುಡಿಯುವ ನೀರಿಗೂ ಸಮಸ್ಯೆ ಆಗುವ ಲಕ್ಷಣಗಳು ಇವೆ. ರಾಜ್ಯದ ಪರಿಸ್ಥಿತಿ ಬಗ್ಗೆ ಪ್ರಧಾನಿ ಅವರಿಗೆ ಪತ್ರ ಬರೆದಿದ್ದೇನೆ. ಸೂಕ್ತ ನೆರವು ಕೋರಿದ್ದೇನೆ. ನೆರವು ಸಿಗಲು ನಿಮ್ಮೆಲ್ಲರ ಸಹಕಾರ ಅಗತ್ಯವಾಗಿದೆ. ರಾಜ್ಯದಲ್ಲಿ ಗಂಭೀರ ಬರ ಪರಿಸ್ಥಿತಿ ಇದೆ. ಅಣೆಕಟ್ಟೆಗಳಲ್ಲಿ ನೀರಿನ ಪ್ರಮಾಣ ನೋಡಿ ಬೆಳೆ ಹಾಕಿ ಅಂತ ರೈತರಿಗೆ ಮನವಿ ಮಾಡಿದ್ದೇನೆ. ಹೇಳಿದ್ದೇನೆ. ಜತೆಗೆ ಈ ಬಗ್ಗೆ ರೈತರಿಗೆ ಅರಿವು ಮೂಡಿಸುವಂತೆ ಅಧಿಕಾರಿಗಳಿಗೂ ಸೂಚನೆ ಕೊಟ್ಟಿದ್ದೇನೆ ಎಂದರು.

**ರಾಜ್ಯ ಯೋಜನೆಗಳ ಫಾಲೋಅಪ್‌ಗೆ ಪ್ರತ್ಯೇಕ ರೆಸಿಡೆಂಟ್ ಕಮಿಷನರ್:** ಕೃಷ್ಣಾ ನ್ಯಾಯಮಂಡಳಿಯ ನೀರು ಹಂಚಿಕೆ ತೀರ್ಮಾನ ಗೆಜೆಟ್ ನೋಟಿಫಿಕೇಶನ್ ಆಗಬೇಕಿತ್ತು. ಈ ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಉಳಿದಿತ್ತು. ಅದನ್ನು ಇತ್ಯರ್ಥ ಪಡಿಸಲು ವಿಶೇಷ ಪೀಠ ಸ್ಥಾಪನೆ ಕುರಿತು ಇವತ್ತು ಸುಪ್ರೀಂ ಕೋರ್ಟ್‌ನಲ್ಲಿ ತೀರ್ಮಾನ ಆಗಿದೆ. ಮಹದಾಯಿ ಯೋಜನೆ ಅಡೆತಡೆ ನಿವಾರಣೆಗೆ ನ್ಯಾಯವಾದಿಗಳ ಜತೆ ಸಮಾಲೋಚನೆ ನಡೆಸಿ, ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ಕರ್ನಾಟಕದ ಬಾಕಿ ಯೋಜನೆಗಳ ನಿರ್ವಹಣೆಗೆ ಕರ್ನಾಟಕ ಭವನದಲ್ಲಿ ಹೊಸ ವ್ಯವಸ್ಥೆ ಜಾರಿಗೆ ತರಲಾಗುವುದು. ನಮ್ಮ ಯೋಜನೆ ಫಾಲೋಅಪ್ ಮಾಡಲು ಪ್ರತ್ಯೇಕ ನಿವಾಸಿ ಆಯುಕ್ತರು ಸೇರಿದಂತೆ ಹೊಸತಂಡ ರಚಿಸಲಾಗುವುದು. ನಿಮಗೆ ಪೂರಕ ಮಾಹಿತಿ ಒದಗಿಸಲು ಈ ತಂಡ ಕೆಲಸ ಮಾಡಲಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

### ಕನಸು ನನಸು: ಕೇಂದ್ರಕ್ಕೆ ಧನ್ಯವಾದ

ತಮಿಳುನಾಡು ಸಿಎಂ ವಿಜಯ್ ಅವರು ನನ್ನನ್ನು ಭೇಟಿ ಮಾಡಲು ಬಯಸಿದ್ದಾರೆ. ಮೇಕೆದಾಟು ಯೋಜನೆ ಕುರಿತು ಸುಪ್ರೀಂ ಕೋರ್ಟ್ ಎರಡೂ ರಾಜ್ಯಗಳಿಗೆ ಅನುಕೂಲ ಆಗುವ ತೀರ್ಪು ಕೊಟ್ಟಿದೆ. ಕರ್ನಾಟಕದ ಜಾಗದಲ್ಲಿ ಕರ್ನಾಟಕ ಸಮತೋಲನ ಅಣೆಕಟ್ಟೆ ಕಟ್ಟಲು ಬೇರೆ ರಾಜ್ಯಗಳ ಅನುಮತಿ ಅನಗತ್ಯ, ಆಕ್ಷೇಪ ವ್ಯಕ್ತಪಡಿಸಲು ಹಕ್ಕು ಇಲ್ಲ ಎಂದು ಸ್ಪಷ್ಟವಾಗಿ ಹೇಳಿದೆ. ಇವತ್ತು ರಾಜ್ಯಸಭೆಯಲ್ಲಿ ಕೂಡ ಜಲಶಕ್ತಿ ಸಚಿವರು ತಮಿಳುನಾಡಿನ ಅನ್ಬುಮಣಿ ರಾಮದಾಸ್ ಪ್ರಶ್ನೆಗೆ ಉತ್ತರ ಕೊಡುವಾಗ ಇದೇ ಮಾತನ್ನು ಪುನರುಚ್ಚರಿಸಿದ್ದಾರೆ. ನನ್ನ ಕನಸು ನನಸಾಗುತ್ತಿರುವುದಕ್ಕೆ ಕರ್ನಾಟಕದ ಪರವಾಗಿ ಕೇಂದ್ರ ಸರ್ಕಾರಕ್ಕೆ ಧನ್ಯವಾದ ಎಂದು ಡಿ.ಕೆ.ಶಿವಕುಮಾರ್ ನುಡಿದರು.

### ನದಿಗಳ ಜೋಡಣೆಗೆ ಆಂಧ್ರ, ತೆಲಂಗಾಣ ಸಿಎಂಗಳ ಒಪ್ಪಿಗೆ

ತುಂಗಭದ್ರಾ ಕ್ರಸ್ಟ್ ಗೇಟ್ ಅಳವಡಿಕೆ ನೆಪದಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಎಸ್. ಪಾಟೀಲ್ ಅವರ ಸಮ್ಮುಖದಲ್ಲಿ ನಾನು, ಆಂಧ್ರಪ್ರದೇಶ ಸಿಎಂ ಚಂದ್ರಬಾಬು ನಾಯ್ಡು, ತೆಲಂಗಾಣ ಸಿಎಂ ರೇವಂತ್ ರೆಡ್ಡಿ ಮೂವರೂ ಒಂದೆಡೆ ಸೇರಿದ್ದೆವು. ನಮ್ಮ ಮನವಿಗೆ ಓಗೊಟ್ಟು ಕೇಂದ್ರ ಸಚಿವರು ಈ ಕಾರ್ಯಕ್ರಮಕ್ಕೆ ಬಂದಿದ್ದರು. 30 ಟಿಎಂಸಿ ನೀರು ಉಳಿಸಲು ತುಂಗಭದ್ರಾಕ್ಕೆ ನವಿಲೆ ಸಮತೋಲನ ಜಲಾಶಯ ಕಟ್ಟಲು ಕೇಂದ್ರ ಸಚಿವರ ಸಮ್ಮುಖದಲ್ಲಿ ಮೂವರು ಸಿಎಂಗಳು ಒಪ್ಪಿದ್ದೇವೆ. ಜತೆಗೆ ಗೋದಾವರಿ, ಕೃಷ್ಣಾ, ಪಿನಾಕಿನಿ, ಕಾವೇರಿ ನದಿಗಳ ಜೋಡಣೆ ಯೋಜನೆಗೂ ಒಪ್ಪಿದ್ದೇವೆ. ಇದೊಂದು ಐತಿಹಾಸಿಕ ತೀರ್ಮಾನವಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.





ಜು.20ರಂದು ಕಾಕ್ರೋಚ್ ಜನತಾಪಾರ್ಟಿ ನೇತೃತ್ವದ ಪ್ರತಿಭಟನೆ ವೇಳೆ ವಿದ್ಯಾರ್ಥಿಗಳ ಮೇಲಿನ ಪೊಲೀಸರ ಕಾರ್ಯಕ್ಕೆ ಕೇಂದ್ರ ಗೃಹ ಸಚಿವ ಹೊಣೆಗಾರಿಕೆ ಹೊರುವಂತೆ ಆಗ್ರಹಿಸಿ ಸಂಸತ್ ಭವನದ ಮಕರ ದ್ವಾರದಲ್ಲಿ ವಿಪಕ್ಷಗಳ ಸಂಸತ್ ಸದಸ್ಯರು ಸೋಮವಾರ ಪ್ರತಿಭಟನೆ ನಡೆಸಿದರು.

## ಪ್ರಶ್ನೆಪತ್ರಿಕೆ ಸೋರಿಕೆ ತಡೆ ಮಸೂದೆ ಮಂಡನೆ: ಇಂದು ಚರ್ಚೆ ಸಾಧ್ಯತೆ

**ನವದೆಹಲಿ, ಜು. 27:** ಜಂತರ್ ಮಂತರ್‌ನಲ್ಲಿ ನಡೆದ ವಿದ್ಯಾರ್ಥಿಗಳ ಮೇಲಿನ ಲಾಠಿ ಚಾರ್ಜ್ ಬಗ್ಗೆ ಚರ್ಚಿಸಬೇಕೆಂದು ಒತ್ತಾಯಿಸಿ ವಿಪಕ್ಷಗಳು ಗದ್ದಲ ಮಾಡ್ತಿರುವ ನಡುವೆಯೂ ಕೇಂದ್ರ ಸರ್ಕಾರ ಸೋಮವಾರ (ಜು. 27) ಲೋಕಸಭೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ತಡೆ ಮಸೂದೆ–2026 ಮಂಡನೆ ಮಾಡಿದ್ದು, ಮಂಗಳವಾರ ಈ ಕುರಿತು ಉಭಯ ಸದನಗಳಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದೆ.

ಲೋಕಸಭೆಯಲ್ಲಿ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಅವರು ಈ ಪ್ರಸ್ತಾವಿತ ಮಸೂದೆಯನ್ನು ಮಂಡಿಸಿದ್ದಾರೆ. ಈ ನೂತನ ಮಸೂದೆಯೂ ಪರೀಕ್ಷೆಯಲ್ಲಿ ಅಕ್ರಮ ಎಸಗಿದ್ರೆ ಅಂತಹ ಅಪರಾಧಿಗಳಿಗೆ 3 ತಿಂಗಳೊಳಗೆ ಕ್ರಮ, 10 ಕೋಟಿ ರೂ. ದಂಡ, 10 ವರ್ಷ ಜೈಲು ಶಿಕ್ಷೆ ವಿಧಿಸುವ ಪ್ರಸ್ತಾಪವನ್ನೊಳಗೊಂಡಿದೆ.

ಇನ್ನೂ ಉಭಯ ಸದನಗಳಲ್ಲಿ ವಿಪಕ್ಷಗಳು ಜುಲೈ 20ರಂದು ಸಂಸತ್ತಿಗೆ ಸಿಜೆಪಿ ನೇತೃತ್ವದ ಮೆರವಣಿಗೆ ಮತ್ತು ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಕ್ರಮದ ಸರ್ಕಾರದ ಪ್ರತಿಕ್ರಿಯೆ ನೀಡಬೇಕು ಮತ್ತು ಆ ಕುರಿತು ಚರ್ಚೆ ನಡೆಯಬೇಕೆಂದು ಒತ್ತಾಯಿಸಿ ವಿಪಕ್ಷಗಳ ಸಂಸದರು ಪ್ರತಿಭಟನೆ ನಡೆಸಿದ್ದರಿಂದ ಎರಡೂ ಸದನಗಳನ್ನು ನಾಳೆಗೆ ಮುಂದೂಡಲಾಗಿದೆ.

ಇನ್ನೂ ಸೋಮವಾರ ಸಂಜೆ 5 ಗಂಟೆಗೆ ಸರ್ಕಾರ ಮತ್ತು ವಿಪಕ್ಷಗಳ ನಾಯಕರ ಜೊತೆ ಸ್ಪೀಕರ್ ಓಂ ಬಿರ್ಲಾ ಸಭೆ ನಡೆಸಿದ್ದರು. ಸಭೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ತಡೆ ಮಸೂದೆ–2026 ಕುರಿತು ಚರ್ಚೆ ನಡೆಸಲು ಎಲ್ಲಾ ರಾಜಕೀಯ ಪಕ್ಷಗಳ ನಾಯಕರ ಒಪ್ಪಿಗೆ ನೀಡಿದ್ದಾರೆ ಎನ್ನಲಾಗಿದೆ.

ಮಂಗಳವಾರ(ಜು. 28) ಓಂ ಬಿರ್ಲಾ ಅವರ ನಿರ್ಧಾರ ಮತ್ತು ನಿರಂತರ ಸಂವಾದದ ಬಳಿಕ ಎಲ್ಲಾ ರಾಜಕೀಯ ಪಕ್ಷಗಳ ನಾಯಕರು ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿ ಮಸೂದೆಯನ್ನು ಚರ್ಚಿಸಲು ಒಪ್ಪಿಕೊಂಡಿದ್ದಾರೆ ಎಂದು ವರದಿಗಳು ಉಲ್ಲೇಖಿಸಿವೆ.

## ಕರ್ನಾಟಕದ ಪಾಲಿನ ನೀರಿಗೆ ಕನ್ನ ಹಾಕಲು ಮಹಾರಾಷ್ಟ್ರ ಹುನ್ನಾರ

**ಬೆಳಗಾವಿ, ಜು.27:** ಕರ್ನಾಟಕಕ್ಕೆ ಸೇರಬೇಕಾದ ಹಕ್ಕಿನ ನೀರಿಗೆ ಮಹಾರಾಷ್ಟ್ರ ಸರ್ಕಾರ ಕನ್ನ ಹಾಕಲು ಮತ್ತೆ ಆಟ ಶುರು ಮಾಡಿದೆ. ಕೃಷ್ಣಾ ನದಿಯ ನೀರನ್ನು ಕಾನೂನುಬಾಹಿರವಾಗಿ ತನ್ನತ್ತ ಸೆಳೆದುಕೊಳ್ಳಲು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹೊಸ 'ಮಾಸ್ಟರ್ ಪ್ಲಾನ್' ಘೋಷಿಸಿದ್ದು, ಗಡಿ ಭಾಗದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣ ವಾಗಿದೆ. ಮಹಾರಾಷ್ಟ್ರದ ಕೊಲ್ಹಾಪುರ ಜಿಲ್ಲೆಯ ಶಿರೋಳ ತಾಲೂಕಿನ 'ಇಚಲಕರಂಜಿ' ನಗರಕ್ಕೆ ನೀರು ಪೂರೈಸುವ ನೆಪದಲ್ಲಿ 'ರಾಧಾಕೃಷ್ಣ ನೀರಾವರಿ ಯೋಜನೆ'ಯನ್ನು ರೂಪಿಸಲಾಗಿದೆ. ಈ ಯೋಜನೆಯಡಿ ಕೃಷ್ಣಾ ನದಿಯಿಂದ ಅಂದಾಜು 4 ಟಿಎಂಸಿ ನೀರನ್ನು ಎತ್ತಿ ಒಯ್ಯಲು ಮಹಾರಾಷ್ಟ್ರ ಸರ್ಕಾರ ತಂತ್ರ ಹೆಣೆದಿದ್ದು, ಅಂತರರಾಜ್ಯ ನದಿ ನೀರು ಹಂಚಿಕೆ ಕಾಯ್ದೆ ಹಾಗೂ ಜಲವಿವಾದ ನ್ಯಾಯಾಧಿಕರಣದ ನಿಯಮಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಲಾಗಿದೆ. ಕರ್ನಾಟಕದ ಗಡಿ ತಾಲೂಕುಗಳಿಗೆ ಹಾಗೂ ಕೃಷ್ಣಾ ನದಿಪಾತ್ರದ ರೈತರಿಗೆ ಇದರಿಂದ ಭಾರಿ ಹೊಡೆತ ಬೀಳುವ ಆತಂಕ ಎದುರಾಗಿದೆ. ಬೇಸಿಗೆಯಲ್ಲಿ ಈಗಾಗಲೇ ಕೃಷ್ಣಾ ನದಿಯಲ್ಲಿ ನೀರಿನ ಅಭಾವ ತಲೆದೋರುತ್ತಿದ್ದು, ಮಹಾರಾಷ್ಟ್ರದ ಈ ಕುತಂತ್ರ ಯೋಜನೆ ಯಿಂದಾಗಿ ಕರ್ನಾಟಕದ ಭಾಗಕ್ಕೆ ಹರಿಯುವ ನೀರಿನ ಪ್ರಮಾಣದಲ್ಲಿ ತೀವ್ರ ಕುಸಿತ ವಾಗಲಿದೆ. ಇಂತಹ ಕಾನೂನುಬಾಹಿರ ಯೋಜನೆಯ ವಿರುದ್ಧ ರಾಜ್ಯ ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು, ಸುಪ್ರೀಂ ಕೋರ್ಟ್ ಹಾಗೂ ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣದ ಮೆಟ್ಟಿಲೇರಿ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಗಡಿಭಾಗದ ರೈತರು ಹಾಗೂ ಕನ್ನಡಪರ ಸಂಘಟನೆಗಳು ಆಗ್ರಹಿಸಿವೆ.

## ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯಗಳಿಗೆ ಹಣಕಾಸು ನೆರವು



**ನವದೆಹಲಿ, ಜು.27:** ಖೇಲೋ ಇಂಡಿಯಾ ಹಾಗೂ ರಾಷ್ಟ್ರೀಯ ಕ್ರೀಡಾ ಅಭಿವೃದ್ಧಿ ನಿಧಿ ಮೂಲಕ ಬೇಡಿಕೆ ಆಧಾರಿತವಾಗಿ ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯಗಳಿಗೆ ಹಣಕಾಸು ನೆರವು ನೀಡುತ್ತದೆ. ರಾಜ್ಯ ಸರ್ಕಾರಗಳು ಹಾಗೂ ಇತರೆ ಅರ್ಹ ಸಂಸ್ಥೆಗಳಿಂದ ಸಲ್ಲಿಸಲಾದ ಪ್ರಸ್ತಾವನೆಗಳನ್ನು ತಾಂತ್ರಿಕ ಕಾರ್ಯಸಾಧ್ಯತೆ, ಸಂಪೂರ್ಣತೆ ಮತ್ತು ಅನುದಾನದ ಲಭ್ಯತೆ ಆಧರಿಸಿ ಪರಿಶೀಲಿಸಿ ಅನುಮೋದಿಸಲಾಗುತ್ತದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಬಗ್ಗೆ ಲೋಕಸಭೆಯಲ್ಲಿ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದಿಂದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮಾಹಿತಿ ಕೋರಿದ್ದರು. ಕರ್ನಾಟಕ ಸೇರಿ ದೇಶಾದ್ಯಂತ ಅನುಮೋದಿಸಲಾದ ಕ್ರೀಡಾ ಮೂಲಸೌಕರ್ಯ ಯೋಜನೆಗಳು, ಮಂಜೂರಾದ ವೆಚ್ಚ, ಬಿಡುಗಡೆಯಾದ ಅನುದಾನ ಹಾಗೂ ಕಾಮಗಾರಿಗಳ ಪ್ರಗತಿ ಕುರಿತ ಮಾಹಿತಿ ಸಚಿವಾಲಯದ ಖೇಲೋ ಇಂಡಿಯಾ ಮತ್ತು ಎನ್‌ಎಸ್‌ಡಿಎಫ್ ಸಾರ್ವಜನಿಕ ಡ್ಯಾಶ್‌ಬೋರ್ಡ್‌ಗಳಲ್ಲಿ ಲಭ್ಯವಿದೆ ಎಂದು ಕೇಂದ್ರ ಉತ್ತರದಲ್ಲಿ ತಿಳಿಸಿದೆ.

## ಕೇಂದ್ರದಿಂದ 40 ಸಾವಿರ ಕೋಟಿಗೂ ಹೆಚ್ಚಿನ ಅನುದಾನ ಬಾಕಿ: ಡಿಸಿಎಂ ಪರಮೇಶ್ವರ್



**ನವದೆಹಲಿ, ಜು.27:** ಕೇಂದ್ರ ಸರ್ಕಾರವೇ ಕೊಡುತ್ತೇವೆ ಎಂದು ಹೇಳಿ, ಈವರೆಗೂ ರೂ. 40000 ಕೋಟಿಗೂ ಹೆಚ್ಚಿನ ಅನುದಾನ ಬಾಕಿ ಉಳಿಸಿಕೊಂಡಿದ್ದು, ರಾಜ್ಯಕ್ಕೆ ಕೊಡಿಸುವ ನಿಟ್ಟಿನಲ್ಲಿ ಎಲ್ಲ ಸಂಸದರು ಶ್ರಮಿಸಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ.ಪರಮೇಶ್ವರ ಅವರು ಮನವಿ ಮಾಡಿದರು. ದೆಹಲಿಯ ಕರ್ನಾಟಕ ಭವನದಲ್ಲಿ ಸೋಮವಾರ ಕರ್ನಾಟಕದ ಸರ್ವಪಕ್ಷ ಸಂಸದರೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಮುಖ್ಯವಾಗಿ 15ನೇ ಹಣಕಾಸು ಆಯೋಗದಲ್ಲಿ ಹೇಳಿದ್ದ ವಿಶೇಷ ಅನುದಾನ ರೂ.5495 ಕೋಟಿ, ಬೆಂಗಳೂರಿನ ಹೊರ ವರ್ತುಲ ರಸ್ತೆಗೆ ರೂ3000, ಕೋಟಿ, ಜಲಜೀವನ್ ಮಿಶನ್ ನಡಿ ಬಾಕಿ ಇರುವ ರೂ.17554 ಕೋಟಿ, 15ನೇ ಹಣಕಾಸು ಆಯೋಗವು ಗ್ರಾಮೀಣ ಪ್ರದೇಶ ಕ್ರಿಟಿಕಲ್ ಇನ್ಫ್ರಾಸ್ಟ್ರಕ್ಚರ್‌ಗೆ ರೂ.2860 ಕೋಟಿ ಕೊಡಬೇಕೆಂದು ಹೇಳಿತ್ತು. ಕೇಂದ್ರ ಸರ್ಕಾರವೇ ಭದ್ರ ಮೇಲ್ದಂಡೆ ಯೋಜನೆಗಾಗಿ ರೂ 5400 ಕೋಟಿ ಕೊಡುತ್ತೇವೆಂದು ಬಜೆಟ್‌ನಲ್ಲಿ ಹೇಳಿತ್ತು. ಆದರೆ, ಈವರೆಗೆ ಕೊಡಲಿಲ್ಲ. ಎಂಎಸ್‌ಪಿಯಡಿ ಖರೀದಿಸಿದ ಕೃಷಿ ಉತ್ಪನ್ನಗಳಿಗೆ ಬಾಕಿ ಇರುವ ಮೊತ್ತ ರೂ1500 ಕೋಟಿ ಸೇರಿ ರಾಜ್ಯಕ್ಕೆ ನೀಡಬೇಕಾದ ಒಟ್ಟು ರೂ. 40000 ರೂ. ಗಳಿಗೂ ಹೆಚ್ಚಿನ ಅನುದಾನ ನೀಡಿಲ್ಲ. ಇದರ ಜೊತೆಗೆ 60ಕ್ಕಿಂತ ಹೆಚ್ಚಿನ ಪ್ರಸ್ತಾವನೆಗಳು ಕೇಂದ್ರದಲ್ಲಿ ಬಾಕಿ ಇವೆ ಎಂದು ಡಿಸಿಎಂ ಜಿ.ಪರಮೇಶ್ವರ ಅವರು ವಿವರಿಸಿದರು.


# ಕರ್ನಾಟಕಕ್ಕೆ ಸಿಹಿಸುದ್ದಿ: ಮೇಕೆದಾಟು ಯೋಜನೆಗೆ ನೆರೆ ರಾಜ್ಯಗಳ ಸಮ್ಮತಿ ಅಗತ್ಯವಿಲ್ಲ

**ನವದೆಹಲಿ, ಜು.27: ಮೇಕೆದಾಟು ಜಲಾಶಯ ನಿರ್ಮಾಣಕ್ಕೆ ಕರ್ನಾಟಕ ಸರ್ಕಾರವು ತಮಿಳುನಾಡು, ಕೇರಳ ಹಾಗೂ ಪುದುಚೇರಿ ಸೇರಿದಂತೆ ನೆರೆ ರಾಜ್ಯಗಳ ಸಮ್ಮತಿ ಪಡೆಯುವ ಅಗತ್ಯವಿಲ್ಲ ಎಂದು ಕೇಂದ್ರ ಜಲಶಕ್ತಿ ಸಚಿವಾಲಯ ಸ್ಪಷ್ಟಪಡಿಸಿದೆ. ಸುಪ್ರೀಂ ಕೋರ್ಟ್ 2018ರಲ್ಲಿ ನೀಡಿರುವ ಕಾವೇರಿ ಜಲವಿವಾದ ಕುರಿತ ತೀರ್ಪಿನ ಆಧಾರದ ಮೇಲೆ ಈ ಸ್ಪಷ್ಟನೆ ನೀಡಲಾಗಿದೆ.**

ರಾಜ್ಯಸಭೆಯಲ್ಲಿ ಸೋಮವಾರ ನಡೆದ ಪ್ರಶ್ನೋತ್ತರ ಅವಧಿಯಲ್ಲಿ ತಮಿಳುನಾಡಿನ ಸದಸ್ಯ ಡಾ. ಎ. ರಾಮದಾಸ್ ಕೇಳಿದ ಪ್ರಶ್ನೆಗೆ ಜಲಶಕ್ತಿ ಖಾತೆ ರಾಜ್ಯ ಸಚಿವ ರಾಜ್ ಭೂಷಣ್ ಚೌಧರಿ ಲಿಖಿತ ಉತ್ತರ ನೀಡಿದರು.

ಸಚಿವರ ಉತ್ತರದ ಪ್ರಕಾರ, ಕಾವೇರಿ ನದಿಗೆ ಅಡ್ಡಲಾಗಿ ಯಾವುದೇ ಅಣೆಕಟ್ಟೆ ನಿರ್ಮಿಸುವ ವಿಚಾರದಲ್ಲಿ ಕರ್ನಾಟಕವು ನದಿ ತೀರದ ಇತರ ರಾಜ್ಯಗಳಾದ ತಮಿಳುನಾಡು, ಕೇರಳ ಮತ್ತು ಪುದುಚೇರಿಯ ಒಪ್ಪಿಗೆ ಪಡೆಯಬೇಕೆಂದು ಸುಪ್ರೀಂ ಕೋರ್ಟ್ ತನ್ನ 2018ರ ತೀರ್ಪಿನಲ್ಲಿ ಎಲ್ಲಿಯೂ ಹೇಳಿಲ್ಲ. ಹೀಗಾಗಿ ಮೇಕೆದಾಟು ಯೋಜನೆಗೆ ನೆರೆ ರಾಜ್ಯಗಳ ಸಮ್ಮತಿ ಕಡ್ಡಾಯವಲ್ಲ ಎಂದು ಕೇಂದ್ರ ಸ್ಪಷ್ಟಪಡಿಸಿದೆ.

ಮೇಕೆದಾಟು ಬಹುಉದ್ದೇಶದ ಜಲಾಶಯ ನಿರ್ಮಾಣಕ್ಕಾಗಿ



### ತಮಿಳುನಾಡಿನ ಸದಸ್ಯ ಡಾ. ಅನ್ಬುಮಣಿ ರಾಮದಾಸ್ ಪ್ರಶ್ನೆಗೆ ಜಲಶಕ್ತಿ ಖಾತೆ ರಾಜ್ಯ ಸಚಿವ ರಾಜ್‌ಭೂಷಣ್ ಚೌಧರಿ ಉತ್ತರ

ಕರ್ನಾಟಕ ಸರ್ಕಾರವು 2019ರಲ್ಲಿ ವಿಸ್ತೃತ ಯೋಜನಾ ವರದಿ (ಡಿಪಿಆರ್)ಯನ್ನು ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಿತ್ತು. ಆದರೆ, ಕೇಂದ್ರ ಜಲ ಆಯೋಗದ ಮಾರ್ಗಸೂಚಿಗಳು ಹಾಗೂ ಕಾವೇರಿ ಜಲವಿವಾದ ನ್ಯಾಯಮಂಡಳಿಯ ತೀರ್ಪಿನ ಅನ್ವಯ ಕೆಲವು ತಿದ್ದುಪಡಿಗಳ ಅಗತ್ಯವಿರುವುದರಿಂದ ಪರಿಷ್ಕೃತ ಡಿಪಿಆರ್ ಸಲ್ಲಿಸುವಂತೆ ಸೂಚಿಸಿ, ಮೂಲ ವರದಿಯನ್ನು ರಾಜ್ಯ ಸರ್ಕಾರಕ್ಕೆ ಹಿಂದಿರುಗಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಇದೇ ವೇಳೆ, ಕಾವೇರಿ ನೀರು ಹಂಚಿಕೆ ಕುರಿತು ಕೇಳಲಾದ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವರು, ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ಜೂನ್ ಮತ್ತು ಜುಲೈ ತಿಂಗಳುಗಳಲ್ಲಿ ಒಟ್ಟು 40 ಟಿಎಂಸಿ ನೀರನ್ನು ತಮಿಳುನಾಡಿಗೆ ಹರಿಸಬೇಕಾಗಿದ್ದರೂ, ಕರ್ನಾಟಕವು ಈ ವರ್ಷದ ಜೂನ್‌ನಲ್ಲಿ 2.195 ಟಿಎಂಸಿ ಹಾಗೂ ಜುಲೈನಲ್ಲಿ 0.45 ಟಿಎಂಸಿ ನೀರನ್ನು ಮಾತ್ರ ಬಿಡುಗಡೆ ಮಾಡಿದೆ ಎಂದು ಮಾಹಿತಿ ನೀಡಿದರು.

ಹಿಂದಿನ ವರ್ಷಗಳ ನೀರು ಬಿಡುಗಡೆ ಅಂಕಿಅಂಶಗಳನ್ನೂ ಸಚಿವರು ಸದನಕ್ಕೆ ತಿಳಿಸಿದರು. ಕರ್ನಾಟಕವು 2023–24ರಲ್ಲಿ 81 ಟಿಎಂಸಿ, 2024–25ರಲ್ಲಿ 305 ಟಿಎಂಸಿ ಹಾಗೂ 2025–26ರಲ್ಲಿ 330 ಟಿಎಂಸಿ ನೀರನ್ನು ತಮಿಳುನಾಡಿಗೆ ಹರಿಸಿದೆ. ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ಪ್ರತಿವರ್ಷ ತಮಿಳುನಾಡಿಗೆ 177.25 ಟಿಎಂಸಿ ನೀರು ಹರಿಸುವುದು ಕರ್ನಾಟಕದ ಹೊಣೆಗಾರಿಕೆಯಾಗಿದೆ ಎಂದು ಅವರು ವಿವರಿಸಿದರು.

ಕೇಂದ್ರದ ಈ ಸ್ಪಷ್ಟನೆಯಿಂದ ಮೇಕೆದಾಟು ಯೋಜನೆಗೆ ಸಂಬಂಧಿಸಿದ ಕಾನೂನು ವ್ಯಾಖ್ಯಾನದ ಬಗ್ಗೆ ಮಹತ್ವದ ಬೆಳವಣಿಗೆ ಕಂಡುಬಂದಿದ್ದು, ಯೋಜನೆಯ ಮುಂದಿನ ಪ್ರಕ್ರಿಯೆ ಹಾಗೂ ಪರಿಷ್ಕೃತ ಡಿಪಿಆರ್ ಸಲ್ಲಿಕೆ ಮೇಲೆ ಈಗ ಗಮನ ಕೇಂದ್ರೀಕೃತವಾಗಿದೆ.

## ನೀರಾವರಿ ಯೋಜನೆಗಳ ಬಗ್ಗೆ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಚರ್ಚೆ

**ಬೆಂಗಳೂರು, ಜು.27:** ಮೇಕೆದಾಟು , ಮಹದಾಯಿ ಸೇರಿದಂತೆ ರಾಜ್ಯದ ಕುಡಿಯುವ ನೀರು, ಜಲಸಂಪನ್ಮೂಲ ಯೋಜನೆಗಳ ಸ್ಥಿತಿಗತಿ, ರಾಜ್ಯದ ಜಲಾಶಯದಲ್ಲಿನ ನೀರಿನ ಪರಿಸ್ಥಿತಿ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಯಲ್ಲಿಂದು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ದೆಹಲಿಯ ಕರ್ನಾಟಕ ಭವನದಲ್ಲಿ ನಡೆದ ಸಭೆಯಲ್ಲಿ ಕಾನೂನು ಮತ್ತು ಜಲಸಂಪನ್ಮೂಲ ಇಲಾಖೆ ಅಧಿಕಾರಿಗಳೊಂದಿಗೆ ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಸಮಗ್ರ ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ, ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ನಿತ್ಯ ಪಂಚಾಂಗ 28.07.2026 ಮಂಗಳವಾರ

ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ,
ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ

ಆಷಾಢ ಶುದ್ಧ, ಚತುರ್ದಶಿ,
ಪೂರ್ವಾಷಾಢ ನಕ್ಷತ್ರ, ಗುರು ಚಾತುರ್ಮಾಸ್ಯ ಸಂಕಲ್ಪ,
ಹೊಸಹೊಳಲು ಶಯನೋತ್ಸವ,
ಹರಿಹರ ನಾರಾಯಣಾಶ್ರಮ ಸಮರ್ಥ ನಾರಾಯಣ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಕೆಪಿಎಸ್‌ಸಿ ನೇಮಕಾತಿ ಅಕ್ರಮ ಸಿಬಿಐ ತನಿಖೆಗೆ ವಹಿಸುವಂತೆ ಆರ್.ಅಶೋಕ್ ಆಗ್ರಹ

## ದೊಡ್ಡ ಹಗರಣವೇ ನಡೆದಿದ್ದು, ಸತ್ಯಾಸತ್ಯತೆ ಹೊರಬರಬೇಕಾದರೆ ಉನ್ನತಮಟ್ಟದ ತನಿಖೆಗೆ ಒತ್ತಾಯ



**ಬೆಂಗಳೂರು, ಜು.27:** ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಇತ್ತೀಚೆಗೆ ನಡೆದಿರುವ ನೇಮಕಾತಿಯಲ್ಲಿ ಭಾರೀ ಅಕ್ರಮಗಳು ನಡೆದಿರುವ ಹಿನ್ನೆಲೆಯಲ್ಲಿ ರಾಜ್ಯಸರ್ಕಾರ ಕೂಡಲೇ ಸಿಬಿಐ ತನಿಖೆಗೆ ವಹಿಸಬೇಕೆಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಶುವೈದ್ಯಾಧಿಕಾರಿ ನೇಮಕಾತಿ ಸೇರಿದಂತೆ ಕೆಪಿಎಸ್ಸಿಯಲ್ಲಿ ನಡೆದಿರುವ ಪ್ರತಿಯೊಂದೂ ನೇಮಕಾತಿಯಲ್ಲಿ ದೊಡ್ಡ ಹಗರಣವೇ ನಡೆದಿದೆ. ಇದರ ಸತ್ಯಾಸತ್ಯತೆ ಹೊರಬೇಕೆಂದರೆ ಸಿಬಿಐ ತನಿಖೆಯೇ ಸೂಕ್ತ ಎಂದು ಒತ್ತಾಯಿಸಿದರು.

ಕೆಪಿಎಸ್ಸಿ ಹಗರಣ ದಿನದಿಂದ ದಿನಕ್ಕೆ ಹೊಸ ಸ್ವರೂಪ ಪಡೆಯುತ್ತಿದೆ. ಕಳೆದ ಬಾರಿ ನಾನೇ ವಿಧಾನಸಭೆಯಲ್ಲಿ ದಾಖಲೆಗಳ ಸಮೇತ ಇದರ ಬ್ರಹಾಂಡ ಭ್ರಷ್ಟಾಚಾರವನ್ನು ಬಯಲು ಮಾಡಿದ್ದೆ. ಪಶು ಇಲಾಖೆಯಲ್ಲಿ 400 ಹುದ್ದೆಗಳಿಗೆ 80 ಲಕ್ಷ ಹಣವನ್ನು ಕೇಳಿದ್ದಾರೆ. ಒಂದೊಂದು ಪೋಸ್ಟ್‌ಗೆ ಒಂದೊಂದು ಕೋಟಿ ರೂ. ನಿಗದಿ ಪಡಿಸಿದ್ದಾರೆ ಎಂದು ಆರೋಪಿಸಿದರು.

ಐಎಎಸ್ ಅಧಿಕಾರಿ ಇದ್ದಾರೆ. ಅಲ್ಲಿ ಕೆಲಸ ಮಾಡಿಕೊಡುತ್ತಾರೆ ಎಂದು ಆಕಾಂಕ್ಷಿಗಳಿಗೆ ಮಧ್ಯವರ್ತಿಗಳು ಹೇಳಿದ್ದಾರೆ. ಇದು ಆಡಿಯೋದಲ್ಲಿ ಸಂಪೂರ್ಣವಾಗಿ ಬಹಿರಂಗವಾಗಿದೆ. ಹಾಗಾದರೆ ಐಎಎಸ್ ಅಧಿಕಾರಿ ಯಾರು ಎಂದು ಪ್ರಶ್ನಿಸಿದರು.

ವಿಧಾನಸೌಧದಲ್ಲಿ ಇಬ್ಬರಿಗೆ ಕೆಲಸ ಕೊಡಿಸಿದ್ದೇನೆ ಎಂದು ಮಧ್ಯವರ್ತಿ ಹೇಳಿದ್ದಾರೆ. ಹೀಗಿದ್ದರೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ. 80 ಲಕ್ಷ ರೂ. ಕೊಟ್ಟರೆ ಹುದ್ದೆ ಕೊಡಿಸುವುದಾಗಿ ಆಡಿಯೋದಲ್ಲಿ ಬಹಿರಂಗಗೊಂಡಿದೆ. ಕೇಂದ್ರದಲ್ಲಿ ಕಾಂಗ್ರೆಸ್ ನಾಯಕರು ಪ್ರಶ್ನೆಪತ್ರಿಕೆ ಸೋರಿಕೆಯಾದರೆ ಸಚಿವರು ಹೊಣೆ ಎನ್ನುತ್ತಾರೆ. ಕರ್ನಾಟಕದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನೆಪತ್ರಿಕೆ ಸೋರಿಕೆಗೆ ಜಿಲ್ಲಾಧಿಕಾರಿಗಳು ಹೊಣೆ ಎನ್ನುತ್ತಾರೆ. ಈ ದ್ವಂದ್ವ ನೀತಿ ಏಕೆ? ಎಂದು ಅಶೋಕ್ ಪ್ರಶ್ನಿಸಿದರು.

ತಾವು ಹಾಗೂ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಇಬ್ಬರೂ ಶೀಘ್ರದಲ್ಲೇ ಕೆಪಿಎಸ್ಸಿಗೆ ನೇರವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದೇವೆ. ವಿಧಾನಸಭೆ ಅಧಿವೇಶನದಲ್ಲಿ ಚರ್ಚೆ: ಮುಂಬರುವ ವಿಧಾನಸಭೆ ಅಧಿವೇಶನದಲ್ಲಿ ಈ ಹಗರಣವನ್ನು ಗಂಭೀರವಾಗಿ ಪ್ರಸ್ತಾಪಿಸಿ, ಸರ್ಕಾರದ ವಿರುದ್ಧ ಸಮರ ಸಾರಿ ಚಳಿ ಬಿಡಿಸಲಾಗುವುದು ಎಂದು ಆರ್. ಅಶೋಕ್ ಎಚ್ಚರಿಕೆ ನೀಡಿದ್ದಾರೆ.

ಕಳೆದ ಅಧಿವೇಶನದಲ್ಲೇ ಕೆಪಿಎಸ್‌ಸಿ ಭ್ರಷ್ಟಾಚಾರದ ಬಗ್ಗೆ ಧ್ವನಿ ಎತ್ತಿದ್ದೆ. ಆಗ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ನನ್ನ ಮಾತು ಸತ್ಯ ಎಂದಿದ್ದರು.

ಆದರೂ, ಪಶುವೈದ್ಯರ 400 ಹುದ್ದೆಗಳ ನೇಮಕಾತಿ ಪರೀಕ್ಷೆಯಲ್ಲಿ ದೊಡ್ಡ ಮಟ್ಟದ ಅಕ್ರಮ ನಡೆದಿದೆ. ಹುದ್ದೆ ಕೊಡಿಸುವುದಾಗಿ ಹೇಳಿ ಏಜೆಂಟ್ ಒಬ್ಬ 80 ಲಕ್ಷ ರೂಪಾಯಿಗೆ ಬೇಡಿಕೆ ಇಟ್ಟಿರುವ ಆಡಿಯೋ ತನ್ನ ಬಳಿಯಿದೆ ಎಂದು ಅಶೋಕ್ ತಿಳಿಸಿದರು.

ಐಎಎಸ್ ಅಧಿಕಾರಿಯೊಬ್ಬರ ಮೂಲಕ ಕೆಲಸ ಮಾಡಿಸಿಕೊಡುವುದಾಗಿ ಹಾಗೂ ತನ್ನ ಮಕ್ಕಳಿಗೂ ಇದೇ ರೀತಿ ಕೆಲಸ ಕೊಡಿಸಿರುವುದಾಗಿ ಆ ವ್ಯಕ್ತಿ ಆಡಿಯೋದಲ್ಲಿ ಮಾತನಾಡಿದ್ದಾನೆ ಎಂದು ಗಂಭೀರ ಆರೋಪ ಮಾಡಿದರು.

ವಸೂಲಿ ಮಾಡುವ ಈ ಕೋಟ್ಯಂತರ ಹಣ ಯಾವ ಯಾವ ಸಚಿವರಿಗೆ ತಲುಪುತ್ತಿದೆ. ಹಂಗಾಮಿ ಅಧ್ಯಕ್ಷರಿಂದ ಆಂತರಿಕ ತನಿಖೆ ನಡೆಸಿದರೆ ಸತ್ಯ ಹೊರಬರಲು ಸಾಧ್ಯವಿಲ್ಲ. ಇದರ ಹಿಂದೆ ಸರ್ಕಾರವೇ ಭಾಗಿಯಾಗಿರುವ ಅನುಮಾನವಿದೆ ಎಂದು ಅವರು ಕಿಡಿಕಾರಿದರು.

### ಕೆಪಿಎಸ್‌ಸಿ ಹಗರಣದ ಬಗ್ಗೆ ರಾಹುಲ್ ಮೌನವೇಕೆ?

ರಾಷ್ಟ್ರಮಟ್ಟದಲ್ಲಿ ನೀಟ್ ಪರೀಕ್ಷೆ ಬಗ್ಗೆ ರಾಹುಲ್ ಗಾಂಧಿ ನಿರಂತರವಾಗಿ ಹೋರಾಟ ಮಾಡುತ್ತಾರೆ. ಆದರೆ ಈಗ ತಮ್ಮದೇ ಪಕ್ಷ ಅಧಿಕಾರದಲ್ಲಿರುವ ಕರ್ನಾಟಕದಲ್ಲಿ ಕೆಪಿಎಸ್ಸಿ ಹಗರಣದ ಬಗ್ಗೆ ಅವರು ಏಕೆ ಮೌನವಾಗಿದ್ದಾರೆ? ಪ್ರಿಯಾಂಕಾ ಗಾಂಧಿ, ಸೋನಿಯಾ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರು ಈ ವಿಷಯದಲ್ಲಿ ಬಾಯಿ ಬಿಡಬೇಕು ಎಂದು ಒತ್ತಾಯಿಸಿದರು.

ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಯಾವುದೇ ಪರೀಕ್ಷೆಯಲ್ಲಿ ಅಕ್ರಮ ನಡೆದರೆ ಜಿಲ್ಲಾಧಿಕಾರಿಗಳೇ ಹೊಣೆ ಎಂದಿದ್ದಾರೆ. ನೀಟ್ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಲೀಕ್ ಆದರೆ ಮಂತ್ರಿಗಳೇ ಹೊಣೆ ಎನ್ನುವ ಕಾಂಗ್ರೆಸ್ ನಾಯಕರು, ರಾಜ್ಯದಲ್ಲಿ ಬಂದಾಗ ಮಾತ್ರ ಡಿಸಿಗಳ ಮೇಲೆ ಜವಾಬ್ದಾರಿ ಹಾಕಿ ನುಣುಚಿಕೊಳ್ಳುತ್ತಿದ್ದಾರೆ. ಇದು ಅವರ ದ್ವಂದ್ವನೀತಿಯನ್ನು ತೋರಿಸುತ್ತದೆ ಎಂದು ಅಶೋಕ್ ಟೀಕಿಸಿದರು.

### ತನಿಖೆಗೆ ಆಗ್ರಹಿಸಿ ಕೆಪಿಎಸ್‌ಸಿ ಕಾರ್ಯದರ್ಶಿಗೆ ಮನವಿ

ಕೆಪಿಎಸ್‌ಸಿಯ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ 80 ಲಕ್ಷದವರೆಗೆ ಲಂಚ ಪಡೆದಿರುವ ಗಂಭೀರ ಆರೋಪಗಳಿದ್ದು, ಸಿಬಿಐ ಅಥವಾ ಕರ್ನಾಟಕ ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿಯವರ ನೇತೃತ್ವದ ಸ್ವತಂತ್ರ ನ್ಯಾಯಾಂಗ ತನಿಖೆಗೆ ಒಪ್ಪಿಸುವಂತೆ ಬಿಜೆಪಿ ನಿಯೋಗವು ಒತ್ತಾಯಿಸಿದೆ. ಈ ಸಂಬಂಧ ಮನವಿ ಸಲ್ಲಿಸಿ ಆಗ್ರಹಿಸಿದೆ.

ಈ ಹಗರಣವು ಕರ್ನಾಟಕದ ಲಕ್ಷಾಂತರ ಉದ್ಯೋಗಾಕಾಂಕ್ಷಿಗಳ ನಂಬಿಕೆಗೆ ದೊಡ್ಡ ಆಘಾತ ನೀಡಿವೆ. ಇಂತಹ ಸಂದರ್ಭದಲ್ಲಿ ಕೆಪಿಎಸ್‌ಸಿಯೇ ತನ್ನ ವಿರುದ್ಧದ ಆರೋಪಗಳನ್ನು ಆಂತರಿಕವಾಗಿ ತನಿಖೆ ನಡೆಸುವುದರಿಂದ ಸತ್ಯ ಹೊರಬರುವುದಿಲ್ಲ; ಸಾರ್ವಜನಿಕರ ವಿಶ್ವಾಸವೂ ಮೂಡುವುದಿಲ್ಲ ಎಂದು ಮನವಿ ತಿಳಿಸಿದೆ.

ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್, ವಿಧಾನ ಪರಿಷತ್ ಪ್ರತಿಪಕ್ಷ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಹಾಗೂ ಹಿರಿಯ ಶಾಸಕ ಸುರೇಶ್ ಕುಮಾರ್ ಅವರೊಂದಿಗೆ ಕೆಪಿಎಸ್‌ಸಿ ಕಾರ್ಯದರ್ಶಿ ಅವರನ್ನು ಭೇಟಿ ಮಾಡಿ, ಈ ಆಂತರಿಕ ತನಿಖೆಯನ್ನು ತಕ್ಷಣವೇ ರದ್ದುಗೊಳಿಸಲು ಒತ್ತಾಯಿಸಲಾಯಿತು. ಅಲ್ಲದೇ, ಪ್ರಕರಣವನ್ನು ಸಿಬಿಐ ಅಥವಾ ಕರ್ನಾಟಕ ಹೈಕೋರ್ಟ್‌ನ ಹಾಲಿ ನ್ಯಾಯಮೂರ್ತಿಯವರ ನೇತೃತ್ವದ ಸ್ವತಂತ್ರ ನ್ಯಾಯಾಂಗ ತನಿಖೆಗೆ ಒಪ್ಪಿಸುವಂತೆ ಒತ್ತಾಯಿಸಿ ಮನವಿ ಸಲ್ಲಿಸಲಾಯಿತು. ಉದ್ಯೋಗಾಕಾಂಕ್ಷಿ ಯುವಜನರ ಹಕ್ಕುಗಳಿಗಾಗಿ ನಮ್ಮ ಹೋರಾಟ ನಿರಂತರ ಎಂದು ಛಲವಾದಿ ನಾರಾಯಣಸ್ವಾಮಿ ಮತ್ತು ಸುರೇಶ್ ಕುಮಾರ್ ಅವರು ತಿಳಿಸಿದ್ದಾರೆ.

# ಜು.೩೦ರವರೆಗೆ ರಾಜ್ಯಪಾಲರು ಅಲಭ್ಯ ಸಂಪುಟ ವಿಸ್ತರಣೆ ಮತ್ತೆ ವಿಳಂಬ ಸಾಧ್ಯತೆ

**ಬೆಂಗಳೂರು, ಜು.27:** ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಸಚಿವರ ಅಂತಿಮಪಟ್ಟಿ ಸಿದ್ಧವಾಗಿದ್ದರೂ, ಹೊಸ ಸಚಿವರ ಪ್ರಮಾಣವಚನ ಸಮಾರಂಭ ವಿಳಂಬವಾಗುವ ಸಾಧ್ಯತೆ ಇದೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಜು.30ರವರೆಗೆ ರಾಜ್ಯದಲ್ಲಿ ಲಭ್ಯವಿಲ್ಲದಿರುವುದು ಇದಕ್ಕೆ ಕಾರಣ. ಈ ನಡುವೆ, ಮುಖ್ಯಮಂತ್ರಿ ನೇತೃತ್ವದಲ್ಲಿ ಹೊಸ ಸಚಿವರ ಆಯ್ಕೆ ಪ್ರಕ್ರಿಯೆ ಬಹುತೇಕ ಪೂರ್ಣಗೊಂಡಿದ್ದು, ಸಚಿವರ ಅಂತಿಮ ಪಟ್ಟಿಯೂ ಸಿದ್ಧವಾಗಿದೆ ಎನ್ನಲಾಗಿದೆ. ಆದರೆ, ಹೊಸ ಸಚಿವರಿಗೆ ರಾಜ್ಯಪಾಲರ ಸಮ್ಮುಖದಲ್ಲಿಯೇ ಪ್ರಮಾಣವಚನ ಬೋಧಿಸಬೇಕಿರುವುದರಿಂದ, ರಾಜ್ಯಪಾಲರು ವಾಪಸಾದ ನಂತರವೇ ಕಾರ್ಯಕ್ರಮ ಆಯೋಜಿಸುವ ಸಾಧ್ಯತೆ ಹೆಚ್ಚಿದೆ. ಹೀಗಾಗಿ, ಸಚಿವ ಸ್ಥಾನಕ್ಕಾಗಿ ಕಾಯುತ್ತಿರುವ ಶಾಸಕರು ಮತ್ತು ರಾಜಕೀಯ ವಲಯದಲ್ಲಿ ಕುತೂಹಲ ಮತ್ತಷ್ಟು ಹೆಚ್ಚಿದ್ದು, ಜುಲೈ 30ರ ಬಳಿಕವೇ ಸಂಪುಟ ವಿಸ್ತರಣೆಯ ದಿನಾಂಕ ಅಂತಿಮಗೊಳ್ಳುವ ಸಾಧ್ಯತೆ ಇದೆ. ಸರ್ಕಾರದ ಅಧಿಕೃತ ಘೋಷಣೆಯತ್ತ ಎಲ್ಲರ ಗಮನ ನೆಟ್ಟಿದೆ.

# ಕೃಷ್ಣಾ ಜಲವಿವಾದ: ಸೆಪ್ಟೆಂಬರ್ ಮೊದಲ ವಾರದಿಂದ ಸುಪ್ರೀಂನಲ್ಲಿ ವಿಸ್ತೃತ ವಿಚಾರಣೆ, ಗೆಜೆಟ್ ಅಧಿಸೂಚನೆಗೆ ರಾಜ್ಯದ ಮನವಿ



**ನವದೆಹಲಿ, ಜು.27:** ಕೃಷ್ಣಾ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದ ಮಹತ್ವದ ಪ್ರಕರಣದ ವಿಚಾರಣೆಯನ್ನು ಸುಪ್ರೀಂಕೋರ್ಟ್ ಸೆಪ್ಟೆಂಬರ್ ಮೊದಲ ವಾರಕ್ಕೆ ಮುಂದೂಡಿದ್ದು, ಈ ವೇಳೆ ವಿಸ್ತೃತ ವಿಚಾರಣೆ ನಡೆಸಲು ಹೊಸ ತ್ರಿಸದಸ್ಯ ಪೀಠವನ್ನು ರಚಿಸುವುದಾಗಿ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ತಿಳಿಸಿದ್ದಾರೆ.

ವಿಚಾರಣೆ ವೇಳೆ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ಈ ಪ್ರಕರಣವನ್ನು ಪೂರ್ಣ ಗಮನಿಸದೇ ನಾನು ನಿರ್ಗಮನದ ಬಾಗಿಲು ನೋಡುವುದಿಲ್ಲ. ಸೆಪ್ಟೆಂಬರ್ ಮೊದಲ ವಾರದಲ್ಲಿ ಪ್ರಕರಣವನ್ನು ಶೀಘ್ರ ವಿಚಾರಣೆ ನಡೆಸಬಲ್ಲ ಪೀಠದ ಮುಂದೆ ಪಟ್ಟಿ ಮಾಡುತ್ತೇವೆ ಎಂದು ಹೇಳಿದರು.

ಸದ್ಯ ಏಳು ನ್ಯಾಯಮೂರ್ತಿಗಳ ಪೀಠಗಳ ರಚನೆ ಪ್ರಕ್ರಿಯೆ ನಡೆಯುತ್ತಿರುವುದರಿಂದ, ಈ ಪ್ರಕರಣವನ್ನು ಶೀಘ್ರ ವಿಚಾರಣೆ ನಡೆಸುವ ಸೂಕ್ತ ಸಂಯೋಜನೆಯ ಪೀಠದ ಮುಂದೆ ಪಟ್ಟಿ ಮಾಡುವುದಾಗಿ ನ್ಯಾಯಾಲಯ ತಿಳಿಸಿತು. ಈ ಪ್ರಕರಣದಲ್ಲಿ ಆಂಧ್ರಪ್ರದೇಶ ಸರ್ಕಾರವು ಕೇಂದ್ರ ಸರ್ಕಾರದ 2023ರ ಕೃಷ್ಣಾ ನದಿ ನೀರು ಹಂಚಿಕೆ ಕುರಿತ ಗೆಜೆಟ್ ಅಧಿಸೂಚನೆಯನ್ನು ಪ್ರಶ್ನಿಸಿದೆ. ಆಂಧ್ರಪ್ರದೇಶ ಮರು ಸಂಘಟನೆ ಕಾಯ್ದೆ–2014ರ ನಿಯಮಗಳನ್ನು ಕಡೆಗಣಿಸಿ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿದೆ ಎಂದು ಆಂಧ್ರಪ್ರದೇಶ ವಾದಿಸಿದೆ. ಕರ್ನಾಟಕ ಮತ್ತು ಮಹಾರಾಷ್ಟ್ರದ ಪಾಲು ಈಗಾಗಲೇ ಅಂತಿಮ ಗೊಂಡಿದ್ದರೂ, ಆಂಧ್ರಪ್ರದೇಶ ಮತ್ತು ತೆಲಂಗಾಣದ ನಡುವಿನ ನೀರು ಹಂಚಿಕೆ ವಿವಾದ ಇನ್ನೂ ಬಗೆಹರಿದಿಲ್ಲ ಎಂಬುದು ಪ್ರಕರಣದ ಪ್ರಮುಖ ಅಂಶವಾಗಿದೆ.

ವಿಚಾರಣೆ ವೇಳೆ ಕರ್ನಾಟಕ ಸರ್ಕಾರದ ಪರ ವಕೀಲರು, 2010–11ರಲ್ಲಿ ಕೃಷ್ಣಾ ಜಲ ವಿವಾದ ನ್ಯಾಯಮಂಡಳಿಯು ತೀರ್ಪು ನೀಡಿದ್ದರೂ, ಇದುವರೆಗೆ ಅದರ ಗೆಜೆಟ್ ಅಧಿಸೂಚನೆ ಹೊರಡಿಸಿಲ್ಲ ಎಂದು ನ್ಯಾಯಾಲಯದ ಗಮನಕ್ಕೆ ತಂದರು. ರಾಜ್ಯಕ್ಕೆ ನಿಗದಿಯಾಗಿರುವ ನೀರಿನ ಪಾಲು ಮುಂದುವರಿಯುವಂತೆ ಹಾಗೂ ನ್ಯಾಯಮಂಡಳಿಯ ತೀರ್ಪಿನ ಆಧಾರದ ಮೇಲೆ ಕೇಂದ್ರ ಸರ್ಕಾರ ಶೀಘ್ರ ಗೆಜೆಟ್ ಅಧಿಸೂಚನೆ ಹೊರಡಿಸಲು ನಿರ್ದೇಶನ ನೀಡುವಂತೆ ಮನವಿ ಮಾಡಿದರು.

ಕರ್ನಾಟಕದ ಪಾಲಿನ ಬಗ್ಗೆ ಯಾವುದೇ ಅನಿಶ್ಚಿತ ಪರಿಸ್ಥಿತಿ ಉಂಟಾಗ ಬಾರದು ಹಾಗೂ ಆಂಧ್ರಪ್ರದೇಶ–ತೆಲಂಗಾಣ ನಡುವಿನ ವಿವಾದವನ್ನು ಪ್ರತ್ಯೇಕವಾಗಿ ಇತ್ಯರ್ಥಪಡಿಸಬೇಕು ಎಂಬ ವಾದವನ್ನೂ ರಾಜ್ಯ ಸರ್ಕಾರ ಮಂಡಿಸಿತು. ಈ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಸೆಪ್ಟೆಂಬರ್ ಮೊದಲ ವಾರದಿಂದ ಪ್ರಕರಣದ ಸಮಗ್ರ ವಿಚಾರಣೆ ನಡೆಸಲಿದ್ದು, ಆಂಧ್ರಪ್ರದೇಶ–ತೆಲಂಗಾಣ ನಡುವಿನ ನೀರು ಹಂಚಿಕೆ, ಕರ್ನಾಟಕಕ್ಕೆ ನಿಗದಿಯಾದ ಪಾಲಿನ ಮುಂದುವರಿಕೆ ಹಾಗೂ ಗೆಜೆಟ್ ಅಧಿಸೂಚನೆ ಹೊರಡಿಸುವ ವಿಷಯಗಳ ಕುರಿತು ಮಹತ್ವದ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

# ಸಂಪುಟ ವಿಸ್ತರಣೆಗೆ ಮೂರು ದಿನಗಳಲ್ಲಿ ಸ್ಪಷ್ಟನೆ ಸಿಗಲಿದೆ: ಶಾಸಕ ಸಂತೋಷ್ ಲಾಡ್

**ಬೆಂಗಳೂರು, ಜು.27:** ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಕಸರತ್ತು ತೀವ್ರಗೊಂಡಿರುವ ಬೆನ್ನಲ್ಲೇ, ಮುಂದಿನ ಮೂರು ದಿನಗಳಲ್ಲಿ ಎಲ್ಲಾ ಪ್ರಕ್ರಿಯೆಗಳು ಅಂತಿಮಗೊಳ್ಳುವ ಸಾಧ್ಯತೆಯಿದೆ ಎಂದು ಶಾಸಕ ಸಂತೋಷ್ ಲಾಡ್ ಹೇಳಿದ್ದಾರೆ.

ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಂಪುಟ ವಿಸ್ತರಣೆ ಹಾಗೂ ಹಿರಿಯ ನಾಯಕ ಸಿದ್ದರಾಮಯ್ಯ ಅವರ ರಾಜಕೀಯ ನಿರ್ಧಾರದ ಕುರಿತು ಪ್ರತಿಕ್ರಿಯಿಸಿದರು.

ದೆಹಲಿ ಪ್ರವಾಸದ ಕುರಿತು ಮಾತನಾಡಿ, ಮುಖ್ಯಮಂತ್ರಿಗಳು ಹಾಗೂ ಮಾಜಿ ಮುಖ್ಯಮಂತ್ರಿಗಳು ಈಗಾಗಲೇ ದೆಹಲಿಗೆ ತೆರಳಿದ್ದಾರೆ. ಎಐಸಿಸಿ ಹೈಕಮಾಂಡ್ ನೇತೃತ್ವದಲ್ಲಿ ಮಹತ್ವದ ಸಭೆ ನಡೆಸಿ ಸಚಿವ ಸಂಪುಟದ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ.

ಸಚಿವ ಸ್ಥಾನದ ಆಕಾಂಕ್ಷಿಗಳಾಗಿರುವವರು ದೆಹಲಿಗೆ ಹೋಗಿದ್ದಾರೆ. ರಾಜಕೀಯದಲ್ಲಿ ಪ್ರತಿಯೊಬ್ಬರಿಗೂ ಆಸೆ ಇರುವುದು ಸಹಜ, ಹೀಗಾಗಿ ಅವರು ಪ್ರಯತ್ನಕ್ಕಾಗಿ ಹೋಗಿದ್ದಾರೆ. ಆದರೆ ಅಂತಿಮವಾಗಿ ಪಾರ್ಟಿ ಹೈಕಮಾಂಡ್ ನಿರ್ಧಾರವೇ ಫೈನಲ್. ಮುಂದಿನ ಮೂರು ದಿನಗಳಲ್ಲಿ ಎಲ್ಲವೂ ಸ್ಪಷ್ಟವಾಗಲಿದೆ ಎಂದು ತಿಳಿಸಿದರು.

# ರಾಜ್ಯದ ಕಾಳಜಿ ಇದ್ದರೆ ಬಿಜೆಪಿ ನಾಯಕರು ಕೇಂದ್ರದಿಂದ ಬಾಕಿ ಹಣ ಕೊಡಿಸಲಿ: ಸಚಿವ ಈಶ್ವರ ಖಂಡ್ರೆ



**ಬೆಂಗಳೂರು, ಜು.27:** ರಾಜ್ಯದ ಬಿಜೆಪಿ ನಾಯಕರಿಗೆ ರೈತರ ಬಗ್ಗೆಯೂ ಕಾಳಜಿ ಇಲ್ಲ, ವಿದ್ಯಾರ್ಥಿಗಳ ಬಗ್ಗೆಯೂ ಕಾಳಜಿ ಇಲ್ಲ, ಕಾಟಾಚಾರಕ್ಕೆ ಬರ ಅಧ್ಯಯನ ಮಾಡುತ್ತಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಿಜೆಪಿ ನಾಯಕರು ಬರ ಪರಿಸ್ಥಿತಿಯ ಅಧ್ಯಯನ ಮಾಡಲು ತೆರಳುತ್ತಿರುವ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಅವರಿಗೆ ಬರ, ನೆರೆ ಪೀಡಿತರ ಬಗ್ಗೆ ಯಾವುದೇ ಕಾಳಜಿ ಇಲ್ಲ, ಅಧಿಕಾರದ ಹಪಾಹಪಿಗೆ ಹೀಗೆ ಮಾಡುತ್ತಿದ್ದಾರೆ ಎಂದರು.

ನಿಜಕ್ಕೂ ರಾಜ್ಯದ ಹಿತಕಾಯುವ ಮನಸ್ಸಿದ್ದರೆ, ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾಗಿರುವ ಬಾಕಿ ಹಣ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಿ, ಸುಪ್ರೀಂಕೋರ್ಟ್ ಯಾವುದೇ ತಡೆ ನೀಡಿದ್ದರೂ, ಮಹಾದಾಯಿ, ಕಳಸ ಬಂಡೂರಿ ನಾಲಾ ಯೋಜನೆಗೆ ಅನುಮತಿ ನೀಡದೆ ವಿಳಂಬದ್ರೋಹ ಮಾಡುತ್ತಿರುವ ಕೇಂದ್ರದ ಮೇಲೆ ಒತ್ತಡ ಹೇರಿ ಯೋಜನೆಗೆ ಅನುಮೋದನೆ ಕೊಡಿಸಲಿ ಎಂದು ಸವಾಲು ಹಾಕಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ, ಕೇಂದ್ರದಿಂದ ವಿಶೇಷ ಅನುದಾನ ಕೊಡಿಸುವ ಕಾರ್ಯವನ್ನು ರಾಜ್ಯ ಬಿಜೆಪಿ ನಾಯಕರು ಏಕೆ ಮಾಡುತ್ತಿಲ್ಲ. ತೋರಿಕೆಯ ಅಧ್ಯಯನ ಬಿಟ್ಟು, ರಾಜ್ಯಕ್ಕೆ ಒಳಿತನ್ನು ಮಾಡುವ ಬಗ್ಗೆ ಚಿಂತಿಸಲಿ ಎಂದು ಈಶ್ವರ ಖಂಡ್ರೆ ಹೇಳಿದರು.

ಜುಲೈ 1ರಿಂದ ಜಾರಿಗೆ ತರಲಾಗಿರುವ ವಿಬಿಜಿ ರಾಮ್‌ಜಿಗೆ ಹಣದ ಕೊರತೆ ಇಲ್ಲ. ಪ್ರಥಮ ತ್ರೈಮಾಸಿಕಕ್ಕೆ 2900 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. 60:40ರ ಅನುಪಾತದಲ್ಲಿ ಕೇಂದ್ರ ಸರ್ಕಾರ ಮೊದಲ ತ್ರೈಮಾಸಿಕಕ್ಕೆ 1700 ಕೋಟಿ ರೂ., ರಾಜ್ಯ ಸರ್ಕಾರ 1200 ಕೋಟಿ ಹಣವನ್ನು ನೀಡಿದೆ. ಪ್ರತಿ ತಿಂಗಳು 5 ಲಕ್ಷ ಗ್ರಾಮೀಣರಿಗೆ ಉದ್ಯೋಗ ನೀಡಿ, 1.5 ಕೋಟಿ ಮಾನವದಿನ ಉದ್ಯೋಗ ಸೃಷ್ಟಿ ಮಾಡುವಷ್ಟು ಅನುದಾನವಿದೆ ಎಂದರು.

ಕೃಷಿ ಹೊಂಡ ನಿರ್ಮಾಣ, ಹನಿ ನೀರಾವರಿ, ಕೆರೆ ಕಾಲುವೆ ಅಭಿವೃದ್ಧಿ, ಚೆಕ್ ಡ್ಯಾಂ ಇತ್ಯಾದಿ ವೈಯಕ್ತಿಕ ಮತ್ತು ಸಮುದಾಯ ಕಾಮಗಾರಿ ಕೈಗೊಳ್ಳಲು ಅವಕಾಶವಿದ್ದು, ಉದ್ಯೋಗ ಕೇಳಿ ಬರುವ ಪ್ರತಿಯೊಬ್ಬರಿಗೂ, ಇರುವಲ್ಲೇ ಉದ್ಯೋಗ ನೀಡುವಂತೆ ಸಿಇಓಗಳಿಗೆ ಮತ್ತು ಗ್ರಾಮ ಮಟ್ಟದ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದರು.

ರಾಜ್ಯದಲ್ಲಿ ಕುಡಿಯುವ ನೀರು ಪೂರೈಕೆಗೆ 341 ಕೋಟಿ ರೂ. ಲಭ್ಯವಿದ್ದು, ಹಣಕಾಸಿನ ಕೊರತೆ ಇಲ್ಲ. ಗ್ರಾಮೀಣ ಕುಡಿಯುವ ನೀರು ಪೂರೈಕೆಗೆ 117 ಕೋಟಿ ರೂ.ಗಳನ್ನು ಮುಂಗಡವಾಗಿ ಬಿಡುಗಡೆ ಮಾಡಲಾಗಿದೆ. ಇದರ ಜೊತೆಗೆ ಮುಖ್ಯಮಂತ್ರಿಗಳು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂ. ಘೋಷಿಸಿದ್ದು ನೀರು ಪೂರೈಕೆಗೆ ಹಣದ ಕೊರತೆ ಇಲ್ಲ ಎಂದರು.

ಸಾಂಪ್ರದಾಯಿಕ ಜಲ ಮೂಲ ಬತ್ತಿ ಹೋಗಿರುವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನೀರು ಪೂರೈಕೆಗೆ ತೊಡಕಾಗದಂತೆ ಪರ್ಯಾಯ ಜಲ ಮೂಲ ಗುರುತಿಸಲು, ಖಾಸಗಿ ಕೊಳವೆಬಾವಿ, ತೆರೆದ ಬಾವಿ ಬಾಡಿಗೆಗೆ ಪಡೆದು, ನೀರು ಪರೀಕ್ಷಿಸಿ, ಟ್ಯಾಂಕರ್ ಮೂಲಕ ನೀರು ಪೂರೈಸಲು ಸ್ಪಷ್ಟ ಸೂಚನೆ ನೀಡಲಾಗಿದೆ. ಅಧಿಕಾರಿಗಳು ಜನರ ಸಂಕಷ್ಟ ಅರಿತು ಕಾರ್ಯ ನಿರ್ವಹಿಸಬೇಕು ಎಂದರು.

ತೀರಾ ಅನಿವಾರ್ಯವಿದ್ದಲ್ಲಿ ಮಾತ್ರ ಕೊಳವೆ ಬಾವಿ ಕೊರೆಸಿ, ಅದಕ್ಕೆ ಪಂಪ್ ಸೆಟ್ ಅಳವಡಿಸಿ, ವಿದ್ಯುತ್ ಸಂಪರ್ಕ ಕಲ್ಪಿಸಿ ಎಂದು ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.

### ಕನ್ನಡ ಪುಸ್ತಕ ಪ್ರಾಧಿಕಾರದ 2025ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪ್ರಕಟ

**ಬೆಂಗಳೂರು, ಜು.27:** ಕನ್ನಡ ಪುಸ್ತಕ ಪ್ರಾಧಿಕಾರದ 2025ನೇ ಸಾಲಿನ ವಾರ್ಷಿಕ ಪ್ರಶಸ್ತಿಗಗಳಿಗೆ ಇಂದು ಅರ್ಹ ಗಣ್ಯರನ್ನು ಆಯ್ಕೆ ಮಾಡಲಾಗಿದೆ. ಜೊತೆಗೆ ಇದೇ ಮೊದಲ ಬಾರಿಗೆ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಎರಡು ದತ್ತಿ ಬಹುಮಾನಗಳನ್ನು ಸಹ ನೀಡಲಾಗುತಿದ್ದು, ಪ್ರತಿವರ್ಷ ಇಬ್ಬರು ಚುಟುಕು ಸಾಹಿತಿಗಳಿಗೆ ಈ ದತ್ತಿ ಬಹುಮಾನವನ್ನು ನೀಡಲಾಗುವುದು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಮಾನಸ ಹೇಳಿದ್ದಾರೆ.

**ಪ್ರಶಸ್ತಿ ವಿವರ:** ಅತ್ಯುತ್ತಮ ಪ್ರಕಾಶನ ಪ್ರಶಸ್ತಿಗೆ ಹೊಸಪೇಟೆಯ ಪಲ್ಲವ ಪ್ರಕಾಶನ ಆಯ್ಕೆಯಾಗಿದ್ದು, ಪ್ರಶಸ್ತಿ ಮೊತ್ತ 1 ಲಕ್ಷ ರೂ ಆಗಿದೆ. ಡಾ. ಎಂ. ಎಂ. ಕಲಬುರ್ಗಿ ಮಾನವಿಕ ಅಧ್ಯಯನ ಪ್ರಶಸ್ತಿಗೆ ಮೈಸೂರಿನ ಡಾ. ರಾಮೇಗೌಡ ಆಯ್ಕೆಯಾಗಿದ್ದು, ಪ್ರಶಸ್ತಿ ಮೊತ್ತ 75 ಸಾವಿರ ರೂ.

# ನಿಂದಿಸಿದವರನ್ನೇ ನೆಚ್ಚಿಕೊಳ್ಳುವುದು ಪ್ರಧಾನಿ, ಬಿಜೆಪಿಗೆ ಹೊಸದೇನಲ್ಲ

### ನಂದನ್ ನಿಲೇಕಣಿ ಗುರುತು ಈಗ ದೊರಕಿದೆಯೇ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಪ್ರಶ್ನೆ

**ಬೆಂಗಳೂರು, ಜು.27:** ನಿಂದಿಸಿದವರನ್ನೇ ನೆಚ್ಚಿಕೊಳ್ಳುವುದು ಪ್ರಧಾನಿ ನರೇಂದ್ರ ಮೋದಿ, ಬಿಜೆಪಿಗೂ ಹೊಸದೇನಲ್ಲ. ಗುರುತೇ ಇಲ್ಲದ ಕೋಟ್ಯಧಿಪತಿ' ಎಂದು ಚುನಾವಣಾ ವೇದಿಕೆಯಲ್ಲಿ ನಂದನ್ ನಿಲೇಕಣಿಯವರನ್ನು ವೈಯಕ್ತಿಕವಾಗಿ ಅವಹೇಳನ ಮಾಡಿದ್ದನ್ನು ಪ್ರಧಾನಿ ಮರೆತಿರಬಹುದು, ದೇಶದ ಜನ ಮರೆತಿಲ್ಲ. ನಂದನ್ ನಿಲೇಕಣಿಯವರಿಗೆ ಈಗ ಏಕಾಏಕಿ 'ಗುರುತು' ದೊರಕಿದೆಯೇ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

ಈ ಬಗ್ಗೆ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಅವರು, ನಿಲೇಕಣಿ ರೂಪಿಸಿದ ಆಧಾರ್ ಯೋಜನೆಯನ್ನು 'ಸಾರ್ವಜನಿಕ ಹಣದ ಲೂಟಿ', 'ವ್ಯರ್ಥ ಯೋಜನೆ', 'ರಾಷ್ಟ್ರೀಯ ಭದ್ರತೆಗೆ ಅಪಾಯ' ಎಂದು ಅಪಪ್ರಚಾರ ಮಾಡಿದ್ದವರು ಇದೇ ಬಿಜೆಪಿ ನಾಯಕರು. ಆದರೆ, ಇಂದು ದೇಶದ ಪರೀಕ್ಷಾ ವ್ಯವಸ್ಥೆಯನ್ನು ಸರಿಪಡಿಸುವ ಉನ್ನತಾಧಿಕಾರ ಸಮಿತಿಯ ಚುಕ್ಕಾಣಿಯನ್ನು ಅದೇ ನಂದನ್ ನಿಲೇಕಣಿಯವರ ಕೈಗೆ ಒಪ್ಪಿಸಿದ್ದಾರೆ ಎಂದು ಹೇಳಿದರು.

### ಸಿ.ಟಿ. ರವಿ ವಿರುದ್ಧ ಎಫ್‌ಐಆರ್ ದಾಖಲಿಸದಿದ್ದರೆ ಪೊಲೀಸರ ವಿರುದ್ಧವೇ ಹೋರಾಟ



ದ್ವೇಷ ಭಾಷಣ ಆರೋಪಕ್ಕೆ ಸಂಬಂಧಿಸಿ ಎಫ್‌ಐಆರ್ ಆಗಿರುವುದರಿಂದ ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಲು ತೆರಳಿದ್ದ ಪೊಲೀಸರ ಕರ್ತವ್ಯಕ್ಕೆ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅಡ್ಡಿಪಡಿಸಿದ್ದಾರೆ. ಆದ್ದರಿಂದ ಅವರ ವಿರುದ್ಧ ಪೊಲೀಸರು ಕೇಸು ದಾಖಲಿಸಬೇಕು. ಇಲ್ಲವಾದಲ್ಲಿ ಪೊಲೀಸರ ವಿರುದ್ಧ ಖುದ್ದು ತಾನೇ ಹೋರಾಟ ಮಾಡಬೇಕಾಗುತ್ತದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಎಚ್ಚರಿಸಿದ್ದಾರೆ.ಪೊಲೀಸರಿಗೆ ಅಡ್ಡಿಪಡಿಸಿದರೆ ಸರಕಾರಿ ನೌಕರರ ಕರ್ತವ್ಯಕ್ಕೆ ಅಡ್ಡಿಪಡಿಸಿದ ವಿಚಾರದಲ್ಲಿ ಕೇಸು ದಾಖಲಿಸಲು ಅವಕಾಶ ಇದೆ. ಆದ್ದರಿಂದ ಸಿ.ಟಿ.ರವಿ ವಿರುದ್ಧ ಕೇಸು ದಾಖಲಿಸದಿದ್ದಲ್ಲಿ ಪೊಲೀಸರು ವಿರುದ್ಧ ನಾನೇ ಹೋರಾಟ ಮಾಡಬೇಕಾಗುತ್ತೆ ಎಂದು ಹೇಳಿದರು.ಮಾಧ್ಯಮದವರ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿ ಬಿ.ಕೆ.ಹರಿಪ್ರಸಾದ್, ಸಿ.ಟಿ.ರವಿಗೆ ಮುಸ್ಲಿಮ್, ಪಾಕಿಸ್ತಾನ್, ಮಟನ್, ಮಚ್ಲಿ ಅನ್ನೋದನ್ನು ಬಿಟ್ಟು, ದೇಶದ ಬಗ್ಗೆ, ರಾಜ್ಯ ಬಗ್ಗೆ ಏನೂ ಬೇರೆ ಗೊತ್ತಿಲ್ಲ ಎಂದು ಟೀಕಿಸಿದರು. ಎಫ್‌ಐಆರ್ ಆದಾಗ ಅದನ್ನು ಸ್ವೀಕಾರ ಮಾಡಿ, ನ್ಯಾಯಾಲಯದಲ್ಲಿ ವಾದ ವಿವಾದ ಮಾಡಲು ತಯಾರಿರಬೇಕು, ಅವರಿಗೆ ಆ ಸಿದ್ಧಾಂತದಲ್ಲಿ ನಂಬಿಕೆ ಇದ್ದರೆ FIR ಆದರೂ ಪರವಾಗಿಲ್ಲ ಹೋರಾಟ ಮಾಡ್ತೇವೆ ಎನ್ನಬೇಕು ಎಂದು ಬಿ.ಕೆ.ಹರಿಪ್ರಸಾದ್ ಸವಾಲು ಹಾಕಿದರು.

ವಿರೋಧ ಪಕ್ಷದೊಂದಿಗೆ ಗುರುತಿಸಿಕೊಂಡಾಗ ದೇಶದ ಪ್ರತಿಭೆಯನ್ನು ಅವಮಾನಿಸುವುದು; ತಮ್ಮ ಆಡಳಿತದ ವೈಫಲ್ಯವನ್ನು ಸರಿಪಡಿಸಬೇಕಾದಾಗ ಅದೇ ಪ್ರತಿಭೆಯ ಬಾಗಿಲು ತಟ್ಟುವುದು ಇದು ನಾಯಕತ್ವವಲ್ಲ, ಅವಕಾಶವಾದದ ಅಶ್ಲೀಲ ಪ್ರದರ್ಶನ. ನಂದನ್ ನಿಲೇಕಣಿಯವರ ಸಾಮರ್ಥ್ಯದ ಬಗ್ಗೆ ನಮಗೆ ಪ್ರಶ್ನೆಯಿಲ್ಲ. ಪ್ರಶ್ನೆ ಇರುವುದು ನರೇಂದ್ರ ಮೋದಿಯವರ ರಾಜಕೀಯ ಪ್ರಾಮಾಣಿಕತೆಯ ಬಗ್ಗೆ. ದೇಶದ ಪರೀಕ್ಷಾ ವ್ಯವಸ್ಥೆಯನ್ನು ಸರಿಪಡಿಸಲು ಸಮಿತಿ ನೇಮಿಸುವ ಮೊದಲು, ನಿಮ್ಮ ಹಿಂದಿನ ಆರೋಪಗಳ ಪರೀಕ್ಷೆಗೆ ಉತ್ತರಿಸಿ ಪ್ರಧಾನಿಗಳೇ ಎಂದು ಬಿ.ಕೆ.ಹರಿಪ್ರಸಾದ್ ಸವಾಲು ಹಾಕಿದರು.


# ಕೃಷ್ಣಾ ಮೇಲ್ದಂಡೆ ಯೋಜನೆ: ಮುಂಗಾರು ಹಂಗಾಮಿನ ಬೆಳೆಗಳಿಗೆ ನೀರು ಬಿಡುಗಡೆ



**ಬೆಂಗಳೂರು, ಜು.27:** ರಾಜ್ಯದ ಜೀವನಾಡಿಯಾದ ಕೃಷ್ಣಾ ಮೇಲ್ದಂಡೆ ಯೋಜನೆ (ಕೃಷ್ಣಾ ಭಾಗ್ಯ ಜಲ ನಿಗಮ) ವ್ಯಾಪ್ತಿಯ ಅಚ್ಚುಕಟ್ಟು ಪ್ರದೇಶದ ರೈತರಿಗೆ ಸಿಹಿ ಸುದ್ದಿಯನ್ನು ಜಲಸಂಪನ್ಮೂಲ ಸಚಿವ ರಾಮಲಿಂಗ ರೆಡ್ಡಿ ಅವರು ನೀಡಿದ. ಜೂನ್ ಮತ್ತು ಜುಲೈ ತಿಂಗಳುಗಳಲ್ಲಿ ವಾಡಿಕೆ ಮಳೆ ಬಾರದೆ ಹಿನ್ನಡೆಯಾಗಿದ್ದ ಮುಂಗಾರು ಹಂಗಾಮಿನ ಬಿತ್ತನೆ ಕಾರ್ಯಕ್ಕೆ ನೆರವಾಗಲು, ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯ ಗಳಿಂದ ಜುಲೈ 28, ( ಮಂಗಳವಾರ) ರಿಂದ ಕಾಲುವೆಗಳಿಗೆ ಅಧಿಕೃತವಾಗಿ ನೀರು ಹರಿಸಲು ತೀರ್ಮಾನಿಸಲಾಗಿದೆ. 2026–27 ನೇ ಸಾಲಿನ ಮುಂಗಾರು ಹಂಗಾಮಿಗೆ ಒಟ್ಟು 65 ಟಿ.ಎಂ.ಸಿ. ಹಾಗೂ 2027ರ ಜೂನ್ ಅಂತ್ಯದವರೆಗೆ ಕುಡಿಯುವ ನೀರು ಸೇರಿದಂತೆ ಇತರೆ ಅವಶ್ಯ ಬಳಕೆಗಾಗಿ 58 ಟಿ.ಎಂ.ಸಿ. ಸೇರಿದಂತೆ ಒಟ್ಟು 124 ಟಿ.ಎಂ.ಸಿ. ನೀರಿನ ಅವಶ್ಯಕತೆ ಇದೆ ಎಂದು ಅಂದಾಜಿಸಲಾಗಿದೆ. ಆಲಮಟ್ಟಿ ಜಲಾಶಯಕ್ಕೆ ಜುಲೈ 06, 2026 ರಂದೇ ಒಳಹರಿವು ಪ್ರಾರಂಭವಾಗಿದ್ದು, ಜಲಾಶಯಕ್ಕೆ ಒಳಹರಿವು ಇರುವವರೆಗೆ ಜುಲೈ 28 ರಿಂದ ಕಾಲುವೆ ಜಾಲಗಳಿಗೆ ಸತತವಾಗಿ ನೀರು ಪೂರೈಸಲಾಗುವುದು. ಮುಂಬರುವ ದಿನಗಳಲ್ಲಿ ಜಲಾಶಯಕ್ಕೆ ಒಳಹರಿವು ಕಡಿಮೆಯಾದಲ್ಲಿ, ಲಭ್ಯವಿರುವ ನೀರನ್ನು ಆಧರಿಸಿ ಈ ಹಿಂದೆ ಅನುಸರಿಸಿದ '14 ದಿನ ಚಾಲು ಹಾಗೂ 10 ದಿನ ಬಂದ್' ಪದ್ಧತಿಯನ್ನು ಅಳವಡಿಸಿ ಕೊಂಡು ನೀರು ಹರಿಸಲು ತೀರ್ಮಾನಿಸಲಾಗಿದೆ.

ನವೆಂಬರ್ 2026 ರಲ್ಲಿ ಜಲಾಶಯಗಳ ನೀರಿನ ಸಂಗ್ರಹಣೆಯನ್ನು ಪರಿಶೀಲಿಸಿ, ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆಯನ್ನು ಕರೆಯಲಾಗುವುದು. ಕೃ ಭಾ ಜ ನಿ ನಿ, ಭೀಮರಾಯನಗುಡಿ ಹಾಗೂ ಸದಸ್ಯ ಕಾರ್ಯದರ್ಶಿಗಳು, ನೀರಾವರಿ ಸಲಹಾ ಸಮಿತಿ, ಕೃಷ್ಣಾ ಮೇಲ್ದಂಡೆ ಯೋಜನೆಯ ಮುಖ್ಯ ಎಂಜಿನಿಯರ್ ಅವರು,ಪತ್ರಿಕಾ ಪ್ರಕಟಣೆಯಲ್ಲಿ ಸಚಿವ ರಾಮಲಿಂಗ ರೆಡ್ಡಿ ಅವರ ನಿರ್ದೇಶನದ ಮೇರೆಗೆ ಈ ಕ್ರಮವನ್ನು ತೆಗೆದುಕೊಂಡಿರುವುದಾಗಿ ತಿಳಿಸಿವೆ. ಅಚ್ಚುಕಟ್ಟು ಪ್ರದೇಶದ ಸಮಸ್ತ ರೈತ ಬಾಂಧವರು ಮುಂಗಾರು ಹಂಗಾಮಿನಲ್ಲಿ ಲಘು ನೀರಾವರಿ ಬೆಳೆಗಳನ್ನು ಮಾತ್ರ ಬೆಳೆಯುವಂತೆ ಹಾಗೂ ನೀರು ಪೋಲಾಗದಂತೆ ಹಿತವಾಗಿ ಮತ್ತು ಮಿತವಾಗಿ ಬಳಸಲು ಕೋರಲಾಗಿದೆ. ನೀರಾವರಿ ನಿರ್ವಹಣೆ ಯಲ್ಲಿ ರೈತರು ಕೃಷ್ಣಾ ಭಾಗ್ಯ ಜಲ ನಿಗಮದ ಅಧಿಕಾರಿಗಳೊಂದಿಗೆ ಸಹಕರಿಸುವಂತೆ ಅವರು ವಿನಂತಿಸಿದ್ದಾರೆ.

# ಉಪ್ಪು ತಿಂದಿದ್ದೀರಿ, ನೀರು ಕುಡಿಯಿರಿ: ಸಿ.ಟಿ. ರವಿಗೆ ಪ್ರಿಯಾಂಕ್ ಖರ್ಗೆ ಎಚ್ಚರಿಕೆ



**ಬೆಂಗಳೂರು, ಜು.27:** ಬಿಜೆಪಿಗರ ಎದೆ ಸೀಳಿದರೆ ನಾಲ್ಕಕ್ಷರಗಳೂ ಸಿಗುವುದಿಲ್ಲ. ಜೊತೆಗೆ ನೈತಿಕತೆ, ಲಜ್ಜೆ, ಸತ್ಯ, ಬದ್ಧತೆ, ಆತ್ಮಸಾಕ್ಷಿಗಳೂ ಕಾಣುವುದಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, "ಕಾನೂನಿಗೆ ಸವಾಲು ಹಾಕುತ್ತೇನೆ" ಎಂಬ ನಿಮ್ಮ ದಾಷ್ಟ್ಯ ನಡೆಯುವುದಿಲ್ಲ, ಉಪ್ಪು ತಿಂದಿದ್ದೀರಿ, ನೀರು ಕುಡಿಯಲು ತಯಾರಾಗಿರಿ? ಎಂದು ಸಿ.ಟಿ. ರವಿ ಅವರಿಗೆ ಎಚ್ಚರಿಕೆ ನೀಡಿದ್ದಾರೆ.

ತಮ್ಮ ದ್ವೇಷದ ಹೇಳಿಕೆಯನ್ನು ಸಮರ್ಥಿಸಲು ಒಂದು ಸುಳ್ಳಿಗೆ ಮತ್ತೊಂದು ಸುಳ್ಳನ್ನು ಪೋಣಿಸುತ್ತಾ ಸುಳ್ಳಿನ ಹಾರವನ್ನೇ ಹಾಕಿಕೊಳ್ಳುವ ಸಿ.ಟಿ ರವಿ ಅವರಂತಹವರು ರಾಜಕೀಯ ವ್ಯವಸ್ಥೆಗೆ ಅಂಟಿರುವ ಕಳಂಕ.

ಕಳೆದ 3 ವರ್ಷಗಳಲ್ಲಿ ಯಾವುದೇ ಒಂದು ದೊಡ್ಡ ಮಟ್ಟದ ಕೋಮುಗಲಭೆ ಸೃಷ್ಟಿಸಲು ಸಾಧ್ಯವಾಗದ ಕಾರಣ ಬಿಜೆಪಿಯವರು ಅಸಹನೀಯರಾಗಿ ವರ್ತಿಸುತ್ತಿದ್ದಾರೆ. ಯಾವುದೇ ವಿಷಯವಿರಲಿ, ಅದಕ್ಕೆ ಪಾಕಿಸ್ತಾನ ಮತ್ತು ಹಿಂದೂ – ಮುಸ್ಲಿಂ ವಿಷಯವನ್ನು ಜೋಡಿಸುವುದು ದ್ವೇಷಸಂಜಾತ ಬಿಜೆಪಿಯ ಹುಟ್ಟುಗುಣ. ಬಿಜೆಪಿಯವರ ಅಸ್ತಿತ್ವ ಇರುವುದೇ ಸಮಾಜ ವಿಭಜನೆಯಲ್ಲಿ ಎನ್ನುವುದನ್ನು ಪದೇ ಪದೇ ಹೇಳಬೇಕಿಲ್ಲ ಎಂದಿದ್ದಾರೆ. ನೀಟ್ ವಿದ್ಯಾರ್ಥಿಗಳ ಹೋರಾಟದ ವಿಷಯದಲ್ಲೂ ಧರ್ಮಗಳನ್ನು ಎಳೆದುತಂದ ಸಿ.ಟಿ ರವಿಯವರು ತಮ್ಮ ದ್ವೇಷದ ಹೇಳಿಕೆಯನ್ನು ಸಮರ್ಥಿಸಲು ನೀಟ್ ಹೋರಾಟಕ್ಕೆ ಸಂಬಂಧವೇ ಇಲ್ಲದ ವಿಡಿಯೋ ಒಂದನ್ನ ತೋರಿಸಿ ದಿಕ್ಕುತಪ್ಪಿಸುವ ವಿಫಲ ಯತ್ನ ಮಾಡಿದ್ದಾರೆ.

ಸಿ.ಟಿ. ರವಿಯವರೇ ಸತ್ಯ ಹೇಳಲು ಹಿಂಜರಿಕೆ ಬೇಕಿಲ್ಲ. ಆದರೆ ಸುಳ್ಳು ಹೇಳಲು ಹಿಂಜರಿಕೆ, ನೈತಿಕ ಭಯ, ಸಾಮಾಜಿಕ ಭಯ ಇರಬೇಕಾಗುತ್ತದೆ, ಅಂತಹದ್ದು ಯಾವುದೂ ತಮಗೆ ಇಲ್ಲ ಎನ್ನುವುದನ್ನು ನಿರೂಪಿಸುತ್ತಲೇ ಇದ್ದೀರಿ.

ಈ ಹಿಂದೆ ಸದನದಲ್ಲಿ ತಾವು ಆಡಿದ ಮಾತಿನಿಂದಲೇ ನಿಮ್ಮ ಗುಣ ಏನೆಂದು ರಾಜ್ಯಕ್ಕೆ ತಿಳಿದಿದೆ. ಅಂದು ತಾವು ಆಡಿದ್ದ ಮಾತಿನ ತನಿಖೆಗೆ ಇಂದಿಗೂ ಧ್ವನಿ ಮಾದರಿ ಕೊಡದಿರುವುದು ತಮ್ಮ ಪಲಾಯನವಾದ ಮತ್ತು ಅನೈತಿಕತೆಯನ್ನು ತೋರಿಸುತ್ತದೆ. "ಕಾನೂನಿಗೆ ಸವಾಲು ಹಾಕುತ್ತೇನೆ" ಎಂಬ ನಿಮ್ಮ ದಾರ್ಷ್ಟ್ಯ ನಡೆಯುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363


29.07.2026
ಕರ್ನಾಟಕ ಸರ್ಕಾರದ
ದೆಹಲಿ ವಿಶೇಷ
ಪ್ರತಿನಿಧಿ, ಶಿರಾ
ವಿಧಾನಸಭಾ ಕ್ಷೇತ್ರದ
ಜನಪ್ರಿಯ ಶಾಸಕರಾದ
ಟಿ.ಬಿ.ಜಯಚಂದ್ರ
ಅವರಿಗೆ...
ಜನುಮದಿನದ
ಶುಭಾಶಯಗಳು
ಸಂತೋಷ್ ಜಯಚಂದ್ರ
ಕೆಪಿಸಿಸಿ ಸದಸ್ಯರು
ಸಂಜಯ್ ಜಯಚಂದ್ರ
ಕಾಂಗ್ರೆಸ್ ಯುವ ನಾಯಕ
ಶುಭಕೋರುವವರು :
ಅಭಿಮಾನಿಗಳು ಹಾಗೂ ಹಿತೈಷಿಗಳು
ಶಿರಾ ವಿಧಾನಸಭಾ ಕ್ಷೇತ್ರ,
ತುಮಕೂರು ಜಿಲ್ಲೆ, ಕರ್ನಾಟಕ

# ನೀಟ್–ಯುಜಿ ಫಾಸ್ಟ್‌ಟ್ರ್ಯಾಕ್ ವಿಚಾರಣೆಗೆ ಸಿಬಿಐ ಗೈರುಹಾಜರಿ




■ ಮಾತಿಗೆ ತಪ್ಪಿದ ಕೇಂದ್ರ ಸರ್ಕಾರ: ಜೈರಾಂ ರಮೇಶ್ ಆರೋಪ

**ನವದೆಹಲಿ, ಜು.27:** ನೀಟ್–ಯುಜಿ 2026 ಪತ್ರಿಕೆ ಸೋರಿಕೆ ಪ್ರಕರಣದ ವಿಚಾರಣೆ ನಡೆಸುತ್ತಿರುವ ವಿಶೇಷ ಫಾಸ್ಟ್‌ಟ್ರ್ಯಾಕ್ ನ್ಯಾಯಾಲಯದ ಮುಂದೆ ನಡೆದ ಉದ್ಘಾಟನಾ ವಿಚಾರಣೆಗೆ ಕೇಂದ್ರ ತನಿಖಾ ದಳ (ಸಿಬಿಐ) ಕಾನೂನು ಪ್ರತಿನಿಧಿಯನ್ನು ಕಳುಹಿಸಲಿಲ್ಲ ಎಂಬ ಆರೋಪದ ನಂತರ, ಪರೀಕ್ಷಾ ಪತ್ರಿಕೆ ಸೋರಿಕೆಯ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಕೇಂದ್ರ ಸರ್ಕಾರ ತನ್ನ ಹೇಳಿಕೆ ಪೂರೈಸಲು ವಿಫಲವಾಗಿದೆ ಎಂದು ಕಾಂಗ್ರೆಸ್ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಸೋಮವಾರ ಆರೋಪಿಸಿದ್ದಾರೆ.

ನೀಟ್–ಯುಜಿ 2026 ಪತ್ರಿಕೆ ಸೋರಿಕೆ ಪ್ರಕರಣದ ವಿಚಾರಣೆಗಾಗಿ ದೆಹಲಿ ಹೈಕೋರ್ಟ್ ಜುಲೈ 23ರಂದು ದೆಹಲಿಯ ರೌಸ್ ಅವೆನ್ಯೂ ನ್ಯಾಯಾಲಯದ ಸಂಕೀರ್ಣದಲ್ಲಿ ವಿಶೇಷ ಫಾಸ್ಟ್ ಟ್ರ್ಯಾಕ್ ನ್ಯಾಯಾಲಯ ಸ್ಥಾಪಿಸಿದೆ ಎಂದು ರಮೇಶ್ ಹೇಳಿದರು. ನ್ಯಾಯಾಲಯದ ಮೊದಲ ವಿಚಾರಣೆಗೆ ಕಾನೂನು ಪ್ರತಿನಿಧಿ ನಿಯೋಜಿಸಲು ಸಿಬಿಐ ವಿಫಲವಾದ ಕಾರಣ ವಿಚಾರಣೆಯನ್ನು ತಕ್ಷಣ ಮುಂದೂಡಲಾಯಿತು ಎಂದು ಆರೋಪಿಸಿದ್ದಾರೆ.

ಪರೀಕ್ಷಾ ಪತ್ರಿಕೆ ಸೋರಿಕೆಗೆ ಪರಿಹಾರವಾಗಿ ತ್ವರಿತ ನ್ಯಾಯಾಲಯಗಳ ಮೇಲೆ ಸರ್ಕಾರ ಪದೇಪದೆ ಒತ್ತು ನೀಡುತ್ತಿರುವುದನ್ನು ಪ್ರಶ್ನಿಸಿದ್ದಾರೆ, ತನಿಖಾ ಸಂಸ್ಥೆಯೇ ಅಂತಹ ಪ್ರಕರಣಗಳನ್ನು ವಿಚಾರಣೆ ನಡೆಸಲು ಅಗತ್ಯವಾದ ಉತ್ಸುಕತೆ ಪ್ರದರ್ಶಿಸುತ್ತಿಲ್ಲ ಎಂದು ಆರೋಪಿಸಿದ್ದಾರೆ. ಪ್ರಕಟಣಾ ಪತ್ರ ಸೋರಿಕೆಯ ಬಿಕ್ಕಟ್ಟಿಗೆ ಪರಿಹಾರವಾಗಿ ಮೋದಿ ಸರ್ಕಾರ ಯಾವ ಮುಖದೊಂದಿಗೆ ಫಾಸ್ಟ್ ಟ್ರ್ಯಾಕ್ ನ್ಯಾಯಾಲಯಗಳನ್ನು ಸ್ಥಗಿತಗೊಳಿಸುತ್ತಿದೆ? ತನ್ನದೇ ಆದ ಸಿಬಿಐ ಈ ಪ್ರಕರಣಗಳ ತನಿಖೆ ಮತ್ತು ವಿಚಾರಣೆಯಲ್ಲಿ ಶೂನ್ಯ ಉಪಕ್ರಮವನ್ನು ತೋರಿಸುತ್ತಿದೆ" ಎಂದು ಜೈರಾಮ್ ಹೇಳಿದರು.

# ಇ20 ಪೆಟ್ರೋಲ್ ವಿರೋಧಿಸಿ ಆ.1ಕ್ಕೆ ದೆಹಲಿಯಲ್ಲಿ ಬೃಹತ್ ಸಭೆ



**ನವದೆಹಲಿ, ಜು. 27:** ಎಥನಾಲ್ ಮಿಶ್ರಿತ ಇ20 ಪೆಟ್ರೋಲ್ ಬಳಕೆಯನ್ನು ಕಡ್ಡಾಯಗೊಳಿಸುವ ಸರ್ಕಾರದ ನೀತಿ ವಿರುದ್ಧ ಸಾರ್ವಜನಿಕ ಬೆಂಬಲವನ್ನು ಕ್ರೋಡೀಕರಿಸಲು ಎಎಪಿ ಮುಂದಾಗಿದೆ. ಆಗಸ್ಟ್ 1ರಂದು ನವದೆಹಲಿಯಲ್ಲಿ ಇ20 ವಿರುದ್ಧ ರಾಷ್ಟ್ರೀಯ ಟೌನ್ ಹಾಲ್ ಹಮ್ಮಿಕೊಳ್ಳುವುದಾಗಿ ನಾಯಕ ಅರವಿಂದ್ ಕೇಜ್ರಿವಾಲ್ ಘೋಷಿಸಿದ್ದಾರೆ.

ದೆಹಲಿಯ ಕಾನ್ಸ್ಟಿಟ್ಯೂಷನ್ ಕ್ಲಬ್ ಆಫ್ ಇಂಡಿಯಾದಲ್ಲಿ ನಡೆಯಲಿರುವ ಈ ಸಭೆಯಲ್ಲಿ ವಿಷಯ ತಜ್ಞರು, ವಾಹನ ಮಾಲೀಕರು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದಾರೆ. ಇ20 ಇಂಧನದಿಂದ ವಾಹನಗಳಿಗೆ ಆಗುತ್ತಿರುವ ಹಾನಿ ಮತ್ತು ಸಮಸ್ಯೆಗಳ ಕುರಿತು ಚರ್ಚೆ ನಡೆಯಲಿದೆ. ದೆಹಲಿ–ಎನ್‌ಸಿಆರ್ ವ್ಯಾಪ್ತಿಯ ಜನರು ನೇರವಾಗಿ ಸಭೆಗೆ ಆಗಮಿಸಬಹುದು ಮತ್ತು ದೇಶದ ಇತರ ಭಾಗಗಳ ಜನರು 8588833212 ಸಂಖ್ಯೆಗೆ ಸಂದೇಶ ಕಳುಹಿಸುವ ಮೂಲಕ ಆನ್ಲೈನ್‌ನಲ್ಲಿ ಸಭೆಯಲ್ಲಿ ಭಾಗಿಯಾಗಬಹುದು ಎಂದು ಕೇಜ್ರಿವಾಲ್ ತಿಳಿಸಿದ್ದಾರೆ.

ಇ20 ಪೆಟ್ರೋಲ್ ಬಳಕೆಯನ್ನು ಕಡ್ಡಾಯಗೊಳಿಸದೆ ಆಯ್ಕೆಯಾಗಿಯಷ್ಟೇ ಬಿಡಬೇಕು ಎಂದು ಆಗ್ರಹಿಸಿ ಎಎಪಿ ಆರಂಭಿಸಿದ್ದ ಆನ್ಲೈನ್ ಅಭಿಯಾನಕ್ಕೆ ಈಗಾಗಲೇ 2 ಲಕ್ಷಕ್ಕೂ ಹೆಚ್ಚು ಜನರು ಸಹಿ ಹಾಕಿದ್ದಾರೆ. ಈ ಬಗ್ಗೆ ಮಾತನಾಡಿದ ದೆಹಲಿಯ ಮಾಜಿ ಮುಖ್ಯಮಂತ್ರಿ, ಆಗಸ್ಟ್ 1ರ ಸಭೆಯ ನಂತರ ಸಾರ್ವಜನಿಕರ ಸಹಿ ಹೊಂದಿರುವ ಅರ್ಜಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡುತ್ತೇವೆ ಎಂದು ಹೇಳಿದ್ದಾರೆ.

ಮತ್ತೊಂದೆಡೆ, ಪಂಜಾಬ್ ಶಿಕ್ಷಣ ಸಚಿವರ ರಾಜೀನಾಮೆಗೆ ಕೇಳಿಬರುತ್ತಿರುವ ಆಗ್ರಹವನ್ನು ತಳ್ಳಿಹಾಕಿದ ಕೇಜ್ರಿವಾಲ್, ದೆಹಲಿಯಲ್ಲಿ ಕಳೆದ 10 ವರ್ಷಗಳಲ್ಲಿ ಹಾಗೂ ಪಂಜಾಬ್‌ನಲ್ಲಿ ಕಳೆದ 5 ವರ್ಷಗಳಲ್ಲಿ ಯಾವುದೇ ಪ್ರಶ್ನೆಪತ್ರಿಕೆ ಚೋರಿಯಾಗಿಲ್ಲ. 2022ಕ್ಕಿಂತ ಮೊದಲು ಶಿಕ್ಷಣ ಕ್ಷೇತ್ರದಲ್ಲಿ 27ನೇ ಸ್ಥಾನದಲ್ಲಿದ್ದ ಪಂಜಾಬ್, ಇಂದು ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ. ಈ ಅಭಿವೃದ್ಧಿಯನ್ನು ಸಹಿಸದೇ ವಿರೋಧ ಪಕ್ಷಗಳು ಆರೋಪ ಮಾಡುತ್ತಿವೆ ಎಂದು ಆಪ್ ಸರ್ಕಾರದ ಸಾಧನೆಯನ್ನು ಸಮರ್ಥಿಸಿಕೊಂಡಿದ್ದಾರೆ.

# ಉದ್ಘಾಟನೆಯಾದ 12 ದಿನಕ್ಕೇ ಬಿರುಕುಬಿಟ್ಟ 4,200 ಕೋಟಿ ರೂ. ವೆಚ್ಚದ ಎಕ್ಸ್‌ಪ್ರೆಸ್‌ವೇ



■ ವಾಹನ ಸವಾರರು, ಸಾರ್ವಜನಿಕರು ಹಾಗೂ ಅಧಿಕಾರಿಗಳಲ್ಲಿ ಆತಂಕ ಸೃಷ್ಟಿ

**ಲಕ್ನೋ, ಜು. 27:** ಉತ್ತರ ಪ್ರದೇಶದಲ್ಲಿ ಅತ್ಯಂತ ವಿಜೃಂಭಣೆಯಿಂದ ಉದ್ಘಾಟನೆಗೊಂಡಿದ್ದ 4,200 ಕೋಟಿ ರೂ. ವೆಚ್ಚದ ಲಖನೌ– ಕಾನ್ಪುರ ಗ್ರೀನ್‌ಫೀಲ್ಡ್ ಎಲಿವೇಟೆಡ್ ಎಕ್ಸ್‌ಪ್ರೆಸ್ ವೇ ಉದ್ಘಾಟನೆಯಾದ ಕೇವಲ 12 ದಿನಗಳಲ್ಲಿ ಬಿರುಕು ಬಿಟ್ಟಿದೆ. ಹೊಸ ಎಕ್ಸ್‌ಪ್ರೆಸ್–ವೇನಲ್ಲಿ ಬಿರುಕು ಬಿಟ್ಟಿರುವುದು ವಾಹನ ಸವಾರರು, ಸಾರ್ವಜನಿಕರು ಹಾಗೂ ಅಧಿಕಾರಿಗಳಲ್ಲಿ ತೀವ್ರ ಆತಂಕ ಮತ್ತು ಆಶ್ಚರ್ಯವನ್ನು ಉಂಟುಮಾಡಿದೆ.

ಜುಲೈ 13ರಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಜಂಟಿಯಾಗಿ ಈ ಎಕ್ಸ್‌ಪ್ರೆಸ್ ವೇ ಅನ್ನು ಉದ್ಘಾಟಿಸಿದ್ದರು. ಉದ್ಘಾಟನೆಯಾದ ಎರಡು ವಾರಗಳೂ ಕಳೆಯುವ ಮುನ್ನವೇ, ಜುಲೈ 25ರಂದು ಸುರಿದ ಮಳೆಯಿಂದಾಗಿ ಉನ್ನಾವೋ ಬಳಿಯ ಕೊರಾರಿ ಗ್ರಾಮದ ಸಮೀಪ ಎಕ್ಸ್‌ಪ್ರೆಸ್‌ವೇನ ಬೃಹತ್ ಭಾಗ ಕುಸಿದು ಬಿದ್ದಿದೆ.

ಸುರಿದ ಮಳೆಗೆ ರಸ್ತೆಯ ಮೇಲ್ಭಾಗದಲ್ಲಿ ಆಳವಾದ ಬಿರುಕುಗಳು ಮೂಡಿವೆ. ರಸ್ತೆ ಕುಸಿದಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ. ಈ ಘಟನೆಯು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ನಡೆಸಿದ ಕಾಮಗಾರಿಯ ಗುಣಮಟ್ಟ ಮತ್ತು ಯೋಜನೆಯ ಮೇಲ್ವಿಚಾರಣೆಯ ವೈಫಲ್ಯವನ್ನು ಎತ್ತಿ ಹಿಡಿದಿದೆ.

ಕುಸಿತಗೊಂಡ ರಸ್ತೆಯ ವಿಡಿಯೋವನ್ನು ಹಂಚಿಕೊಂಡಿರುವ ಸಮಾಜವಾದಿ ಪಕ್ಷದ ನಾಯಕ ಮಧುಸೂದನ್ ಯಾದವ್, ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ನಾನು ಲಖನೌ–ಕಾನ್ಪುರ ಎಲಿವೇಟೆಡ್ ಎಕ್ಸ್‌ಪ್ರೆಸ್ ವೇನಲ್ಲಿ ಪ್ರಯಾಣಿಸುತ್ತಿದ್ದಾಗ ಕೊರಾರಿ ಬಳಿ ಮಳೆಗೆ ಸುಮಾರು 5 ರಿಂದ 7 ಮೀಟರ್‌ಗಳಷ್ಟು ರಸ್ತೆ ಸಂಪೂರ್ಣವಾಗಿ ಕುಸಿದು ಬಿರುಕು ಬಿಟ್ಟಿರುವುದನ್ನು ಕಂಡೆ. ಇಂತಹ ಕಳಪೆ ಕಾಮಗಾರಿಯು ಭೀಕರ ಅಪಘಾತಗಳಿಗೆ ದಾರಿಮಾಡಿಕೊಡುತ್ತದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಯೋಜನೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ್ದಾರೆ.

ವಿಡಿಯೋ ವೈರಲ್ ಆಗುತ್ತಿದ್ದಂತೆಯೇ, ಹೆದ್ದಾರಿ ಪ್ರಾಧಿಕಾರದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಸ್ತೆ ದುರಸ್ತಿ ಕಾರ್ಯವನ್ನು ಪ್ರಾರಂಭಿಸಿದ್ದಾರೆ. ಆದರೆ, ಈ ಕಳಪೆ ಕಾಮಗಾರಿಯ ಕುರಿತು ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಎನ್‌ಹೆಚ್‌ಎಐ ಅಧಿಕಾರಿಗಳು ಇನ್ನೂ ಅಧಿಕೃತ ಸ್ಪಷ್ಟನೆ ನೀಡಿಲ್ಲ.

# ಮಾನಹಾನಿಕರ ಸಂದೇಶ: ಮೆಟಾ, ಗೂಗಲ್, ಎಕ್ಸ್ ವಿರುದ್ಧ ದಾವೆ ಹೂಡಲು ನಿತಿನ್ ಗಡ್ಕರಿಗೆ ಬಾಂಬೆ ಹೈಕೋರ್ಟ್ ಅನುಮತಿ



**ನವದೆಹಲಿ, ಜು. 27:** ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರ ವಿರುದ್ಧ ಮಾನಹಾನಿಕರ ಡೀಪ್ ಫೇಕ್ ಕಂಟೆಂಟ್‌ಗಳನ್ನು ಹರಡಿರುವ ತಂತ್ರಜ್ಞಾನ ದೈತ್ಯ ಕಂಪನಿಗಳಾದ ಮೆಟಾ, ಗೂಗಲ್, ಎಕ್ಸ್ (ಟ್ವಿಟರ್) ಹಾಗೂ ಅಪರಿಚಿತ ವ್ಯಕ್ತಿಗಳ ವಿರುದ್ಧ ಸಿವಿಲ್ ಮಾನನಷ್ಟ ಮೊಕದ್ದಮೆ ಹೂಡಲು ಬಾಂಬೆ ಹೈಕೋರ್ಟ್ ಇಂದು ಅನುಮತಿ ನೀಡಿದೆ.

ಕೇಂದ್ರ ಸರ್ಕಾರದ ಇ20 ಎಥೆನಾಲ್ ಮಿಶ್ರಿತ ಪೆಟ್ರೋಲ್ ಕಾರ್ಯಕ್ರಮದಿಂದ ಗಡ್ಕರಿ ಹಾಗೂ ಅವರ ಕುಟುಂಬವು ವೈಯಕ್ತಿಕವಾಗಿ ಆರ್ಥಿಕ ಲಾಭ ಪಡೆದಿದೆ ಎಂದು ಬಿಂಬಿಸುವ ಸಾಮಾಜಿಕ ಜಾಲತಾಣಗಳ ಪೋಸ್ಟ್‌ಗಳು ಹಾಗೂ ತಿರುಚಲಾದ ವಿಡಿಯೊಗಳಿಗೆ ಸಂಬಂಧಿಸಿದಂತೆ ಈ ದಾವೆ ಹೂಡಲಾಗಿದೆ. ಗಡ್ಕರಿ ಸಲ್ಲಿಸಿರುವ ಅರ್ಜಿಯ ಪ್ರಕಾರ, ಈ ವಿಡಿಯೊಗಳು ಸಂಪೂರ್ಣ ಸುಳ್ಳು, ದುರುದ್ದೇಶಪೂರಿತ ಹಾಗೂ ಮಾನಹಾನಿಕರವಾಗಿದ್ದು, ಸಚಿವರ ಸಾರ್ವಜನಿಕ ವರ್ಚಸ್ಸು ಹಾಗೂ ಘನತೆಗೆ ತೀವ್ರ ಧಕ್ಕೆ ಉಂಟುಮಾಡಿವೆ.

ಕಾನೂನುಬಾಹಿರ ಕಂಟೆಂಟ್‌ಗಳನ್ನು ಸೃಷ್ಟಿಸುವ ಅಥವಾ ಆನ್‌ಲೈನ್‌ನಲ್ಲಿ ಹರಡುವ ಅಪರಿಚಿತ ವ್ಯಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳಲು ಅವಕಾಶ ನೀಡುವ ಜಾನ್ ಡೋ (John Doe) ನಿಯಮದಡಿ (ನ್ಯಾಯಾಲಯವು ಹೆಸರು/ಗುರುತು ಇನ್ನೂ ತಿಳಿದಿಲ್ಲದ ವ್ಯಕ್ತಿಗಳು ಅಥವಾ ಸಂಸ್ಥೆಗಳ ವಿರುದ್ಧವೂ ತಾತ್ಕಾಲಿಕವಾಗಿ ಆದೇಶ ನೀಡಬಹುದು. ಭಾರತದಲ್ಲಿ ಇದನ್ನು ವಿಶೇಷವಾಗಿ ಕಾಪಿರೈಟ್ ಉಲ್ಲಂಘನೆ ಮತ್ತು ಆನ್ಲೈನ್ ಪೈರಸಿ ಪ್ರಕರಣಗಳಲ್ಲಿ ಬಳಸಲಾಗುತ್ತದೆ) ಹಾಗೂ ಸಾಮಾಜಿಕ ಜಾಲತಾಣ ಕಂಪನಿಗಳ ವಿರುದ್ಧ ದಾವೆ ಮುಂದುವರಿಸಲು ಹೈಕೋರ್ಟ್ ಗಡ್ಕರಿ ಅವರಿಗೆ ಅನುಮತಿ ನೀಡಿದೆ.

ಕೇಂದ್ರ ಸರ್ಕಾರದ ಎಥೆನಾಲ್ ಮಿಶ್ರಣ ಯೋಜನೆಯ ಕುರಿತು ತಪ್ಪು ಮಾಹಿತಿಗಳನ್ನು ಹರಡುವ ಎಐ ರಚಿತ ವಿಡಿಯೊಗಳು, ತಿರುಚಲಾದ ದೃಶ್ಯಗಳು ಮತ್ತು ದಾರಿತಪ್ಪಿಸುವ ಪೋಸ್ಟ್‌ಗಳನ್ನು ಡಿಜಿಟಲ್ ವೇದಿಕೆಗಳಲ್ಲಿ ವ್ಯಾಪಕವಾಗಿ ಹಂಚಿಕೊಳ್ಳಲಾಗಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ.

ವಾಸ್ತವವಾಗಿ ಈ ಯೋಜನೆಗೂ, ತಮ್ಮ ವೈಯಕ್ತಿಕ ಅಥವಾ ಕುಟುಂಬದ ಹಿತಾಸಕ್ತಿಗಳಿಗೂ ಯಾವುದೇ ಸಂಬಂಧವಿಲ್ಲದಿದ್ದರೂ, ಈ ನೀತಿಯಿಂದ ಆರ್ಥಿಕ ಲಾಭವಾಗಿದೆ ಎಂದು ಸುಳ್ಳು ಕಂಟೆಂಟ್‌ಗಳ ಮೂಲಕ ಬಿಂಬಿಸಲಾಗಿದೆ ಎಂದು ಗಡ್ಕರಿ ವಾದಿಸಿದ್ದಾರೆ.

ಭಾರತದಲ್ಲಿ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಬಳಸಿ ಸಿದ್ಧಪಡಿಸಲಾದ ಡೀಪ್‌ಫೇಕ್ ವಿಡಿಯೊಗಳ ವಿರುದ್ಧ ಕೇಂದ್ರ ಸಚಿವರೊಬ್ಬರು ಹೂಡಿರುವ ಅತಿ ದೊಡ್ಡ ಹಾಗೂ ಉನ್ನತ ಮಟ್ಟದ ಕಾನೂನು ಹೋರಾಟ ಇದಾಗಿದೆ. ಕೃತಕ ಬುದ್ಧಿಮತ್ತೆಯ ಮೂಲಕ ರಚಿಸಲಾದ ತಿರುಚಿದ ಕಂಟೆಂಟ್ಗಳನ್ನು ಪತ್ತೆಹಚ್ಚುವ, ತೆಗೆದುಹಾಕುವ ಹಾಗೂ ಹರಡುವುದನ್ನು ತಡೆಯುವ ವಿಚಾರದಲ್ಲಿ ಡಿಜಿಟಲ್ ವೇದಿಕೆಗಳ ಹೊಣೆಗಾರಿಕೆ ಬಗ್ಗೆ ಈ ಪ್ರಕರಣವು ವ್ಯಾಪಕ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

### ಪಕ್ಷಾಂತರ ನಿಷೇಧ ಕಾಯ್ದೆಯಿಂದ ರಕ್ಷಣೆ ಪಡೆಯಲು ಪಕ್ಷಗಳ ವಿಲೀನ ನಿಯಮ ಪ್ರಶ್ನಿಸಿದ್ದ ಅರ್ಜಿ ವಿಚಾರಣೆ

# ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ನೋಟಿಸ್



**ನವದೆಹಲಿ, ಜು. 27:** ಪಕ್ಷಾಂತರ ನಿಷೇಧ ಕಾಯ್ದೆಯಡಿ (ಹತ್ತನೇ ಶೆಡ್ಯೂಲ್) ಅನರ್ಹತೆಯಿಂದ ಪಾರಾಗಲು ಶಾಸಕರು ರಾಜಕೀಯ ಪಕ್ಷಗಳ ವಿಲೀನದ ಮೊರೆ ಹೋಗುತ್ತಿರುವ ನಿಯಮದ ಸಾಂವಿಧಾನಿಕ ವ್ಯಾಖ್ಯಾನವನ್ನು ಪ್ರಶ್ನಿಸಿ ಹಿರಿಯ ವಕೀಲ ಕಪಿಲ್ ಸಿಬಲ್ ಸಲ್ಲಿಸಿದ್ದ ರಿಟ್ ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ಸೋಮವಾರ (ಜುಲೈ 27) ಕೇಂದ್ರ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಅಲೋಕ್ ಅರಾಧೆ ಅವರಿದ್ದ ಪೀಠವು ಈ ಕುರಿತು ಕಪಿಲ್ ಸಿಬಲ್ ಅವರ ವಾದವನ್ನು ಆಲಿಸಿದ ಬಳಿಕ ಕೇಂದ್ರಕ್ಕೆ ನೋಟಿಸ್ ನೀಡಿದೆ. ವಿಚಾರಣೆಯ ಆರಂಭದಲ್ಲಿ ನ್ಯಾಯಮೂರ್ತಿ ನರಸಿಂಹ ಅವರು, ಸಂವಿಧಾನದ 32ನೇ ವಿಧಿಯಡಿ ಈ ಅರ್ಜಿ ಸಲ್ಲಿಸಿರುವುದರ ಬಗ್ಗೆ ಪ್ರಶ್ನಿಸಿದರು.

ಪಕ್ಷಗಳ ವಿಲೀನ ಪ್ರಕ್ರಿಯೆಯಿಂದಾಗಿ ಚುನಾವಣೆಯಲ್ಲಿ ಬಹುಮತ ಪಡೆದ ಪಕ್ಷವು ಅಲ್ಪಮತಕ್ಕೆ ಕುಸಿಯುವಂತಹ ಗಂಭೀರ ಪರಿಣಾಮಗಳು ಪ್ರಜಾಪ್ರಭುತ್ವದ ಮೇಲಾಗುತ್ತಿವೆ ಎಂದು ಸಿಬಲ್ ವಾದ ಮಂಡಿಸಿದರು. ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಗೋವಾ ಪ್ರಕರಣವನ್ನು ಉಲ್ಲೇಖಿಸಿದ ಅವರು, ಈ ಪ್ರಕ್ರಿಯೆಯ ಮೂಲಕ ಚುನಾವಣಾ ತೀರ್ಪನ್ನೇ ಬದಲಾಯಿಸಬಹುದಾಗಿದೆ. ಬಹುಮತವು ಅಲ್ಪಮತವಾಗಬಹುದು ಮತ್ತು ಅಲ್ಪಮತವು ಬಹುಮತವಾಗಬಹುದು ಎಂದು ತೀವ್ರ ಆತಂಕ ವ್ಯಕ್ತಪಡಿಸಿದರು.

ಕೇಂದ್ರಕ್ಕೆ ನೋಟಿಸ್ ಜಾರಿಗೊಳಿಸುವ ನಡುವೆಯೂ, ಇಂತಹ ವಿಚಾರಗಳನ್ನು ಶಾಸಕಾಂಗವೇ ತೀರ್ಮಾನಿಸಬೇಕು ಎಂದು ನ್ಯಾಯಮೂರ್ತಿ ನರಸಿಂಹ ಅವರು ಅಭಿಪ್ರಾಯಪಟ್ಟರು. ಈ ಸಮಸ್ಯೆಗಳನ್ನು ಸದನದಲ್ಲಿ ಅಥವಾ ರಾಜಕೀಯ ಪಕ್ಷಗಳ ವೇದಿಕೆಯಲ್ಲಿ ಚರ್ಚಿಸಬೇಕು. 10ನೇ ಶೆಡ್ಯೂಲ್ ಶಾಸಕರ ನಡುವಿನ ಕಾರ್ಯವಿಧಾನವನ್ನು ನಿಯಂತ್ರಿಸುವ ಉದ್ದೇಶ ಹೊಂದಿದೆ. ಆದರೆ ಇದರ ಕಾರ್ಯನಿರ್ವಹಣೆಯಲ್ಲಿ ಹಲವು ಸಮಸ್ಯೆಗಳಿರುವುದನ್ನು ನಾವು ನೋಡುತ್ತಿದ್ದೇವೆ. ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಿಬಲ್, ಅಧಿಕಾರದಲ್ಲಿರುವವರು ಈ ವಿಷಯವನ್ನು ಎಂದಿಗೂ ತೀರ್ಮಾನಿಸಲು ಬಿಡುವುದಿಲ್ಲ ಎಂದು ಪ್ರತ್ಯುತ್ತರ ನೀಡಿದರು.

ಪಕ್ಷಾಂತರ ನಿಷೇಧ ಕಾಯ್ದೆಯ ಕಠಿಣ ನಿಯಮಗಳಿಂದ ಪಾರಾಗಲು ಒಡೆದ ಗುಂಪುಗಳು ಇತರ ರಾಜಕೀಯ ಪಕ್ಷಗಳೊಂದಿಗೆ ವಿಲೀನಗೊಳ್ಳಲು ಅವಕಾಶ ನೀಡುವ 10ನೇ ಶೆಡ್ಯೂಲ್ನ ವಿಲೀನ ನಿಬಂಧನೆಗಳ ಕುರಿತು ಸಿಬಲ್ ತಮ್ಮ ಅರ್ಜಿಯಲ್ಲಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಶಿವಸೇನೆ (ಉದ್ಧವ್ ಠಾಕ್ರೆ), ಎಎಪಿ ಹಾಗೂ ಟಿಎಂಸಿ ಶಾಸಕರು ಇತ್ತೀಚೆಗೆ ಬಿಜೆಪಿ ಮತ್ತು ಇತರ ಪಕ್ಷಗಳೊಂದಿಗೆ ವಿಲೀನಗೊಂಡಿರುವ ಹಾಗೂ ರಾಜಕೀಯ ಪಕ್ಷದ ಅನುಮತಿಯಿಲ್ಲದೆ ಶಾಸಕಾಂಗ ವಿಭಾಗವು ವಿಲೀನಗೊಳ್ಳುವುದನ್ನು ಎತ್ತಿಹಿಡಿದಿದ್ದ ಬಾಂಬೆ ಹೈಕೋರ್ಟ್ (ಗೋವಾ ಪೀಠ) ಆದೇಶವನ್ನು ಪ್ರಶ್ನಿಸಿ ಕಾಂಗ್ರೆಸ್ ಸಲ್ಲಿಸಿರುವ ಅರ್ಜಿಯೂ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ವಿಚಾರವನ್ನು ಸಿಬಲ್ ಪೀಠದ ಗಮನಕ್ಕೆ ತಂದರು.

# ವಿದ್ಯಾರ್ಥಿ, ಪ್ರತಿಭಟನಾಕಾರರ ಬಂಧನ ತಕ್ಷಣ ಬಿಡುಗಡೆಗೆ ಸಿಜೆಪಿ ಆಗ್ರಹ

**ನವದೆಹಲಿ, ಜು. 27:** ದೆಹಲಿ ಸೇರಿ ದೇಶಾದ್ಯಂತ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ವಿದ್ಯಾರ್ಥಿ–ಯುವಜನರ ಮೇಲೆ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ ಎಂದು ಮೋದಿ ಸರ್ಕಾರ ಭರವಸೆ ನೀಡಿತ್ತು. ಆದರೆ, ಸರ್ಕಾರ ಮೂರೇ ದಿನಗಳಲ್ಲಿ ತನ್ನ ಭರವಸೆಯನ್ನು ಉಲ್ಲಂಘಿಸಿದೆ. ಅಸ್ಸಾಂ, ಪಶ್ಚಿಮ ಬಂಗಾಳ ಹಾಗೂ ಬಿಹಾರ ಸೇರಿ ವಿವಿಧ ರಾಜ್ಯಗಳಲ್ಲಿ ವಿದ್ಯಾರ್ಥಿಗಳು ಮತ್ತು ಇತರ ಪ್ರತಿಭಟನಾಕಾರರನ್ನು ಗುರಿಯಾಗಿಸಿ ಬಂಧಿಸಲಾಗುತ್ತಿದೆ. ಈ ಬಗ್ಗೆ ಸಿಜೆಪಿ ಆಕ್ರೋಶ ವ್ಯಕ್ತಪಡಿಸಿದ್ದು, ತಕ್ಷಣವೇ ಬಂಧಿತ ಪ್ರತಿಭಟನಾಕಾರರನ್ನು ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದೆ.

ಪ್ರತಿಭಟನೆಯ ಸಮಯದಲ್ಲಿ ಬಿಜೆಪಿ ಅಥವಾ ಎನ್‌ಡಿಎ ಆಡಳಿತದ ಯಾವುದೇ ರಾಜ್ಯದಲ್ಲಿ ಪ್ರತಿಭಟನಾಕಾರರ ವಿರುದ್ಧ ಈಗ ಅಥವಾ ಮುಂದೆಯೂ ಯಾವುದೇ ದಂಡನಾತ್ಮಕ ಕ್ರಮ ಕೈಗೊಳ್ಳುವುದಿಲ್ಲ ಎಂದು ಕೇಂದ್ರ ಸರ್ಕಾರ ಭರವಸೆ ನೀಡಿತ್ತು. ಈ ಭರವಸೆಯ ಮೇರೆಗೆ ದೇಶವ್ಯಾಪಿ ಪ್ರತಿಭಟನೆಯನ್ನು ಸ್ಥಗಿತಗೊಳಿಸುವ ನಿರ್ಧಾರವನ್ನು ಸಿಜೆಪಿ ಕೈಗೊಂಡಿತು. ಆದರೆ, ಈಗ ವಿವಿಧ ರಾಜ್ಯಗಳಲ್ಲಿ ಪ್ರತಿಭಟನಾಕಾರರ ಬಂಧನ ಮತ್ತು ವಶಕ್ಕೆ ಪಡೆದಿರುವ ವರದಿಗಳು ಬರುತ್ತಿವೆ. ಇವು ಕೇಂದ್ರ ಸರ್ಕಾರದ ಭರವಸೆಯ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದೆ.

ಕೇಂದ್ರ ಸರ್ಕಾರ, ವಿಶೇಷವಾಗಿ ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಮತ್ತು ಡಾ. ಜಿತೇಂದ್ರ ಸಿಂಗ್ ಅವರು ತಾವು ನೀಡಿದ್ದ ಭರವಸೆಯನ್ನು ಪಾಲಿಸಬೇಕು. ಬಂಧಿತರನ್ನು ಕೂಡಲೇ ಬಿಡುಗಡೆ ಮಾಡುವುದರ ಜೊತೆಗೆ, ದೇಶದ ಯಾವುದೇ ಭಾಗದಲ್ಲಿ ಪ್ರತಿಭಟನಾಕಾರರ ವಿರುದ್ಧ ಬಲವಂತದ ಅಥವಾ ಪ್ರತೀಕಾರದ ಕ್ರಮ ಕೈಗೊಳ್ಳದಂತೆ ಸಂಬಂಧಪಟ್ಟ ರಾಜ್ಯಗಳಿಗೆ ನಿರ್ದೇಶನ ನೀಡಬೇಕು ಎಂದು ಸಿಜೆಪಿ ಆಗ್ರಹಿಸಿದೆ.

ಬಂಧಿತರ ಬಿಡುಗಡೆಗಾಗಿ ಈಗಾಗಲೇ ನಮ್ಮ ಕಾನೂನು ತಂಡವು ಸಂಬಂಧಿತ ರಾಜ್ಯಗಳ ವಕೀಲರೊಂದಿಗೆ ಸಮನ್ವಯ ಸಾಧಿಸುತ್ತಿದೆ. ಬಂಧಿತರಾದ ಪ್ರತಿಭಟನಾಕಾರರಿಗೆ ಅಗತ್ಯವಿರುವ ಎಲ್ಲ ರೀತಿಯ ಕಾನೂನು ನೆರವು ನೀಡಲಾಗುತ್ತಿದೆ. ಪ್ರತಿಭಟನೆ ಆರಂಭವಾದ ಮೊದಲ ದಿನದಿಂದಲೇ ಈ ಪ್ರಕ್ರಿಯೆ ನಡೆಯುತ್ತಿದೆ ಎಂದು ಸಿಜೆಪಿ ಹೇಳಿದೆ.

ಪ್ರತಿಭಟನಾಕಾರರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ ಎಂಬುದಕ್ಕೆ ಸಂಬಂಧಿಸಿದಂತೆ ಲಿಖಿತ ಭರವಸೆ ನೀಡುವುದಾಗಿ ಕೇಂದ್ರ ಸರ್ಕಾರ ತಿಳಿಸಿದ್ದನ್ನು ಸಿಜೆಪಿ ಉಲ್ಲೇಖಿಸಿದ್ದು, ಜುಲೈ 28ರೊಳಗೆ ಆ ಭರವಸೆಯನ್ನು ಜಾರಿಗೊಳಿಸುವಂತೆ ಸರ್ಕಾರಕ್ಕೆ ನೆನಪಿಸಿದೆ. ಕೇಂದ್ರ ಸರ್ಕಾರವು ತನ್ನ ಭರವಸೆಯಿಂದ ಹಿಂದೆ ಸರಿಯುವುದು ಸಿಜೆಪಿಗೆ ಮಾತ್ರವಲ್ಲದೆ ಸಂವಾದದ ಮಾರ್ಗವನ್ನು ಆಯ್ಕೆ ಮಾಡಿಕೊಂಡ ಲಕ್ಷಾಂತರ ಯುವಜನರ ವಿಶ್ವಾಸಕ್ಕೂ ಧಕ್ಕೆ ತರುತ್ತದೆ ಎಂದು ಸಿಜೆಪಿ ಹೇಳಿದೆ.



ದೆಹಲಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ರಾಜ್ಯಸಭೆ ಸದಸ್ಯ ಕಪಿಲ್ ಸಿಬಲ್ ಮಾತನಾಡಿದರು. ಕಾಕ್ರೋಚ್ ಜನತಾ ಪಾರ್ಟಿಯ ವಕ್ತಾರರಾದ ಸೌರವ್‌ದಾಸ್, ಅಶುತೋಷ್ ರಂಕಾ ಹಾಗೂ ರತ್ನಾ ಸಿಂಗ್ ಇದ್ದರು.

# ಆಂಧ್ರದಲ್ಲಿ ತೀವ್ರ ಬರ: ಶೇ.53ರಷ್ಟು ಮಳೆ ಕೊರತೆ, ರೈತರ ಆತಂಕ

**ಅಮರಾವತಿ, ಜು. 27:** ಜುಲೈ 30ರವರೆಗೆ ಆಂಧ್ರ ಪ್ರದೇಶದ ಹೆಚ್ಚಿನ ಭಾಗಗಳಲ್ಲಿ ಒಣಹವೆ ಮುಂದುವರಿಯುವ ಸಾಧ್ಯತೆಯಿದ್ದು, ಒಟ್ಟಾರೆಯಾಗಿ ಶೇ.53.3ರಷ್ಟು ಮಳೆ ಕೊರತೆ ಉಂಟಾಗಿರುವುದು ರೈತರು ಮತ್ತು ಕೃಷಿ ಇಲಾಖೆಯ ಆತಂಕವನ್ನು ಹೆಚ್ಚಿಸಿದೆ. ಜೂನ್ 1ರಿಂದ ಜುಲೈ ಕೊನೆಯ ವಾರದವರೆಗೆ ಶೇ. 51ರಷ್ಟು ಮಳೆ ಕೊರತೆ ದಾಖಲಾಗಿದ್ದು, ಸುಮಾರು ಶೇ.49ರಷ್ಟು ಮಳೆ ಕೊರತೆಯಾಗಿದೆ. 28 ಜಿಲ್ಲೆಗಳ ಪೈಕಿ 24 ಜಿಲ್ಲೆಗಳಲ್ಲಿ ಈಗಾಗಲೇ ತೀವ್ರ ಮಳೆ ಕೊರತೆ ಉಂಟಾಗಿದೆ. ಇದು ಎಲ್ ನಿನೋ ಪರಿಣಾಮದಿಂದಾಗಿ ಉಂಟಾಗಿದ್ದು, ರಾಯಲಸೀಮ ಪ್ರದೇಶಗಳಾದ ಅನಂತಪುರ, ಕರ್ನೂಲು, ಕಡಪ ಮತ್ತು ಚಿತ್ತೂರು ಜಿಲ್ಲೆಗಳಲ್ಲಿ ಹೆಚ್ಚು ಪ್ರಭಾವ ಬೀರಿದೆ.

ಆಂಧ್ರದ ಕರಾವಳಿಯ ಕೆಲವು ಭಾಗಗಳಲ್ಲಿ ನೀರಾವರಿ ಸೌಲಭ್ಯಗಳಿಂದಾಗಿ ಪರಿಸ್ಥಿತಿ ಸ್ವಲ್ಪ ಉತ್ತಮವಾಗಿದ್ದರೂ, ಒಟ್ಟಾರೆಯಾಗಿ ಮುಂಗಾರು ಬೆಳೆಗಳ ಬಿತ್ತನೆ ಮತ್ತು ಇಳುವರಿಯ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆಯಿದೆ.

ಆಂಧ್ರ ಪ್ರದೇಶದ ಕೃಷಿ ವ್ಯವಸ್ಥೆಯು ವೈವಿಧ್ಯಮಯವಾಗಿದ್ದು, ಪ್ರಮುಖ ಬೆಳೆಗಳಲ್ಲಿ ಭತ್ತವು ಪ್ರಮುಖ ಬೆಳೆಯಾಗಿದೆ. ವಿಶೇಷವಾಗಿ ಗೋದಾವರಿ ಮತ್ತು ಕೃಷ್ಣಾ ನದಿಯ ತಪ್ಪಲು ಪ್ರದೇಶಗಳಲ್ಲಿ ಭತ್ತದ ಬಿತ್ತನೆ ವ್ಯಾಪಕವಾಗಿದೆ. ಇತರೆ ಪ್ರಮುಖ ಮುಂಗಾರು ಬೆಳೆಗಳಲ್ಲಿ ಮೆಕ್ಕೆಜೋಳ, ಜೋಳ, ರಾಗಿ, ಬಜ್ರಾ(ಸಜ್ಜೆ), ದ್ವಿದಳ ಧಾನ್ಯಗಳಾದ ತೊಗರಿ, ಕಪ್ಪು ಬೇಳೆ, ಹಸಿರು ಬೇಳೆಯಂತಹ ಕಾಳುಗಳು, ನೆಲಗಡಲೆ, ಸೂರ್ಯಕಾಂತಿ, ಹರಳು ಬೆಳೆಯಂತಹ ಮುಂತಾದ ಎಣ್ಣೆ ಬೀಜಗಳ ಬೆಳೆಗಳು, ಹತ್ತಿ, ಕಬ್ಬು ಮತ್ತು ತಂಬಾಕು ಬೆಳಗಳನ್ನೂ ಬೆಳೆಯಲಾಗುತ್ತದೆ. ತೋಟಗಾರಿಕೆಯಲ್ಲಿ ಅಡುಗೆ ಮೆಣಸು(ಗುಂತೂರು ಪ್ರದೇಶ), ಮಾವು, ಕಿತ್ತಳೆ, ಟೊಮ್ಯಾಟೊ ಮತ್ತು ಈರುಳ್ಳಿ ಪ್ರಮುಖವಾಗಿವೆ. ರಾಯಲಸೀಮ ಪ್ರದೇಶಗಳಲ್ಲಿ ಮಳೆ ಅವಲಂಬಿ ಬೆಳೆಗಳಾದ ನೆಲಗಡಲೆ ಮತ್ತು ಹತ್ತಿ ಹೆಚ್ಚು ಕೃಷಿ ಮಾಡಲಾಗುತ್ತದೆ. ಆದರೆ ಕರಾವಳಿ ಪ್ರದೇಶಗಳಲ್ಲಿ ನೀರಾವರಿ ಅವಲಂಬಿ ಭತ್ತ ಮತ್ತು ತರಕಾರಿ ಬೆಳೆಗಳು ಪ್ರಧಾನವಾಗಿವೆ. ಈ ಬೆಳೆಗಳಲ್ಲಿ ಹೆಚ್ಚಿನವು ಮಳೆಯ ಮೇಲೆ ಅವಲಂಬಿತವಾಗಿರುವುದರಿಂದ ಇವುಗಳ ಮೇಲೆ ಒಣಹವೆಯು ತೀವ್ರ ಪರಿಣಾಮ ಬೀರಲಿದೆ.

ಮಳೆ ಕೊರತೆಯಿಂದಾಗಿ 2026ರ ಮುಂಗಾರು ಬಿತ್ತನೆ ಪ್ರಗತಿಯು ನಿಧಾನಗತಿಯಲ್ಲಿದೆ. ಜುಲೈ ಮಧ್ಯದ ಸುಮಾರಿಗೆ ರಾಜ್ಯದಲ್ಲಿ ಸುಮಾರು ಶೇ.52ರಷ್ಟು ಬಿತ್ತನೆ ಪೂರ್ಣಗೊಂಡಿದ್ದು, ಗುರಿಯ ಸುಮಾರು 31 ಲಕ್ಷ ಹೆಕ್ಟೇರ್‌ಗಳ ಪೈಕಿ 16 ಲಕ್ಷಕ್ಕೂ ಅಧಿಕ ಹೆಕ್ಟೇರ್‌ಗಳಲ್ಲಿ ಬಿತ್ತನೆಯಾಗಿದೆ. ಭತ್ತದ ಬಿತ್ತನೆ ಗುರಿಯ ಸುಮಾರು ಶೇ.55ರಷ್ಟು ತಲುಪಿದ್ದು, ಮೆಕ್ಕೆಜೋಳ, ರಾಗಿ ಮತ್ತು ಬಜ್ರಾ(ಸಜ್ಜೆ) ಬೆಳೆಗಳು ಬಿತ್ತನೆಯಲ್ಲಿ ಉತ್ತಮ ಪ್ರಗತಿ ಸಾಧಿಸಿವೆ. ಆದರೆ ನೆಲಗಡಲೆಯಂತಹ ಎಣ್ಣೆ ಬೀಜಗಳ ಬಿತ್ತನೆ ಕೇವಲ ಶೇ.30ರಿಂದ 44ರಷ್ಟು ಮಾತ್ರ ಬಿತ್ತನೆಯಾಗಿದ್ದು, ರಾಯಲಸೀಮ ಪ್ರದೇಶಗಳಲ್ಲಿ ಇದು ತೀವ್ರ ಆತಂಕವನ್ನುಂಟು ಮಾಡಿದೆ. ಹತ್ತಿ ಬೆಳೆಯ ಬಿತ್ತನೆ ಸುಮಾರು ಶೇ.58ರಷ್ಟು ತಲುಪಿದೆ. ಜಿಲ್ಲಾ ಮಟ್ಟದಲ್ಲಿ ಚಿತ್ತೂರು ಮತ್ತು ಶ್ರೀ ಸತ್ಯ ಸಾಯಿ ಜಿಲ್ಲೆಗಳು ಉತ್ತಮ ಪ್ರಗತಿ ತೋರಿಸಿದ್ದರೆ, ಕರ್ನೂಲು ಮತ್ತು ಅನ್ನಮಯ್ಯ ಜಿಲ್ಲೆಗಳಲ್ಲಿ ಬಿತ್ತನೆ ಪ್ರಮಾಣ ಕಳಪೆಯಾಗಿದೆ. ತಡವಾದ ಮಳೆಯಿಂದಾಗಿ ಬಿತ್ತನೆ ಮುಂದುವರೆದರೂ ಇಳುವರಿ ಕುಸಿಯುವ ಅಪಾಯವಿದೆ.

ಮಳೆ ಕೈಕೊಟ್ಟರೆ ರೈತರ ಮೇಲೆ ಹಲವು ರೀತಿಯಲ್ಲಿ ವ್ಯತಿರಿಕ್ತ ಪರಿಣಾಮಗಳು ಉಂಟಾಗುತ್ತವೆ. ರೈತರ ಆದಾಯ ಕುಸಿಯುತ್ತದೆ. ಅಲ್ಲದೆ ಜಾನುವಾರುಗಳಿಗೆ ಮೇವು ಕೊರತೆ, ಆಹಾರ ಭದ್ರತಾ ಸಮಸ್ಯೆ ಹಾಗೂ ಗ್ರಾಮೀಣ ಉದ್ಯೋಗ ನಷ್ಟದಂತಹ ಪ್ರಮುಖ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ. ರಾಯಲಸೀಮ ಪ್ರದೇಶದಲ್ಲಿ ನೆಲಗಡಲೆ ಮತ್ತು ಹತ್ತಿ ಬೆಳೆಗಳು ಹೆಚ್ಚು ಪ್ರಭಾವಿತವಾಗುವ ಸಾಧ್ಯತೆಯಿದ್ದು, ಇದು ರೈತರ ಜೀವನಾಧಾರಕ್ಕೆ ದೊಡ್ಡ ತೊಂದರೆಯಾಗಬಹುದು. ನೀರಾವರಿ ಪ್ರದೇಶಗಳಲ್ಲಿ ಜಲಾಶಯ ಮಟ್ಟ ಕುಸಿಯುವುದರಿಂದ ಹಿಂಗಾರು ಬೆಳೆಗಳ ಮೇಲೂ ಪರಿಣಾಮ ಬೀರಬಹುದು.

ಪಶುಸಂಗೋಪನೆಯಲ್ಲಿ ಮೇವು ಮತ್ತು ನೀರಿನ ಕೊರತೆಯಿಂದಾಗಿ ಪ್ರಾಣಿ ಸಾಕಾಣಿಕೆದಾರರು ತೊಂದರೆಗೆ ಸಿಲುಕುವ ಸಾಧ್ಯತೆಯಿದೆ. ಜಲಾಶಯಗಳಲ್ಲಿ ನೀರು ಕಡಿಮೆಯಾಗುವುದರಿಂದ ಮೀನುಗಾರಿಕೆಯ ಉತ್ಪಾದನೆ ಕುಸಿಯುವ ಸಾಧ್ಯತೆಯಿದೆ. ಒಟ್ಟಾರೆಯಾಗಿ ರಾಜ್ಯದ ಆರ್ಥಿಕತೆಯ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆಯಿದೆ.

# ಮತ್ತೊಬ್ಬ ಪ್ರಧಾನ್ ಬರುತ್ತಾರೆ: ಹೋರಾಟ ಇನ್ನೂ ಮುಗಿದಿಲ್ಲ ಎಂದು ವಿದ್ಯಾರ್ಥಿ ನಾಯಕಿ ನೇಹಾ

### ಸಂಭ್ರಮಾಚರಣೆಯ ವೀಡಿಯೋ ಹಂಚಿಕೊಂಡ ವಿದ್ಯಾರ್ಥಿನಿ



**ನವದೆಹಲಿ, ಜು. 27:** ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಶಿಕ್ಷಣ ಕ್ಷೇತ್ರದಲ್ಲಿನ ಅಕ್ರಮಗಳ ವಿರುದ್ಧ ನಡೆದ ದೇಶವ್ಯಾಪಿ ವಿದ್ಯಾರ್ಥಿ ಚಳವಳಿಯ ಪ್ರಮುಖ ಮುಖಗಳಲ್ಲಿ ಒಬ್ಬರಾಗಿರುವ ಅಖಿಲ ಭಾರತ ವಿದ್ಯಾರ್ಥಿ ಸಂಘದ ರಾಷ್ಟ್ರೀಯ ಅಧ್ಯಕ್ಷೆ ನೇಹಾ ಬೋರಾ, ಕೇಂದ್ರದ ಮಾಜಿ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಸ್ವಾಗತಿಸಿದರೂ, ಅದೊಂದರಿಂದ ಹೋರಾಟ ಮುಗಿಯುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಪ್ರಧಾನ್ ರಾಜೀನಾಮೆಯ ಬಳಿಕ ಸಾಮಾಜಿಕ ಜಾಲತಾಣದಲ್ಲಿ ಸಂಭ್ರಮಾಚರಣೆಯ ವಿಡಿಯೋ ಹಂಚಿಕೊಂಡಿರುವ ನೇಹಾ ಬೋರಾ, If I can't dance, It won't be my revolution! ಎಂಬ ಸಂದೇಶದೊಂದಿಗೆ ಅದನ್ನು ಪೋಸ್ಟ್ ಮಾಡಿದ್ದಾರೆ.

ರಾಜ್ಯಸಭಾ ಸದಸ್ಯ ಹಾಗೂ ಹಿರಿಯ ವಕೀಲ ಕಪಿಲ್ ಸಿಬಲ್ ಅವರ ಯೂಟ್ಯೂಬ್ ಕಾರ್ಯಕ್ರಮ ದಿಲ್ ಸೇಯಲ್ಲಿ ಮಾತನಾಡಿದ ನೇಹಾ, ಈ ಪ್ರಧಾನ್ ಅವರ ಜಾಗಕ್ಕೆ ಇನ್ನೊಬ್ಬ ಪ್ರಧಾನ್ ಬರಬಹುದು. ಇದು ಒಬ್ಬ ವ್ಯಕ್ತಿಯ ರಾಜೀನಾಮೆಯ ವಿಚಾರವಲ್ಲ. ಸಾಮಾನ್ಯ ಜನರನ್ನು ಮತ್ತೆ ಮತ್ತೆ ವಿಫಲಗೊಳಿಸುವ ವ್ಯವಸ್ಥೆಯನ್ನು ಅಹಂಕಾರದಿಂದ ನಡೆಸಲು ಸಾಧ್ಯವಿಲ್ಲ. ಬಿಜೆಪಿ ಅಥವಾ ಆರ್‌ಎಸ್‌ಎಸ್ ನಾಯಕರಿಗೆ ಚಾಮರ ಬೀಸಿದವರಿಗೆ ಸಚಿವ ಸ್ಥಾನ ಬಹುಮಾನವಾಗಬಾರದು? ಎಂದು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ಈ ವಿದ್ಯಾರ್ಥಿ ಚಳವಳಿ ಕೇವಲ ಒಂದು ರಾಜೀನಾಮೆಯಲ್ಲಿ ಕೊನೆಗೊಳ್ಳುವ ಹೋರಾಟವಲ್ಲ; ಇನ್ನಷ್ಟು ರಾಜೀನಾಮೆಗಳ ಸರಣಿಗೆ ನಾಂದಿ ಹಾಡಿದ ಹೋರಾಟವಾಗಿ ಇತಿಹಾಸ ನೆನಪಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

ಇದೇ ವೇಳೆ, ಧರ್ಮೇಂದ್ರ ಪ್ರಧಾನ್ ಅವರನ್ನು ಮತ್ತೊಂದು ಸಚಿವಾಲಯಕ್ಕೆ ವರ್ಗಾಯಿಸಿದರೂ ಅದು ವಿದ್ಯಾರ್ಥಿಗಳ ಮುಖ್ಯ ಆಕ್ಷೇಪವಲ್ಲ ಎಂದು ನೇಹಾ ಬೋರಾ ಅಭಿಪ್ರಾಯಪಟ್ಟಿದ್ದಾರೆ. ವ್ಯಕ್ತಿಯ ಬದಲಾವಣೆಯಷ್ಟೇ ಸಾಕಾಗುವುದಿಲ್ಲ; ಶಿಕ್ಷಣ ವ್ಯವಸ್ಥೆಯಲ್ಲಿ ಮೂಲಭೂತ ಸುಧಾರಣೆ ಆಗಬೇಕು ಎಂಬುದು ವಿದ್ಯಾರ್ಥಿಗಳ ಹೋರಾಟದ ಉದ್ದೇಶ. ಹಾಗೆಯೇ ಈ ಹೋರಾಟ ಜೈಲಿನಲ್ಲಿರುವ ಹಲವಾರು ಕಾಕ್ರೋಚ್‌ಗಳನ್ನು ಬಿಡುಗಡೆ ಮಾಡಿಸುವವರೆಗೂ ಮುಂದುವರೆಯಲಿದೆ ಎಂದು ಅವರು ತಿಳಿಸಿದ್ದಾರೆ.

ಜುಲೈ 20ರಂದು ಸಂಸತ್ ಚಲೋ ಪ್ರತಿಭಟನೆಯ ವೇಳೆ ವಿದ್ಯಾರ್ಥಿಗಳ ಮೇಲೆ ನಡೆದ ಪೊಲೀಸ್ ಲಾಠಿಚಾರ್ಜ್ ಮತ್ತು ಬಲಪ್ರಯೋಗಕ್ಕೆ ಸಂಬಂಧಿಸಿದಂತೆ ಕೇಂದ್ರ ಗೃಹ ಸಚಿವ ಅಮಿತ್‌ಶಾ ರಾಜಕೀಯ ಹೊಣೆ ಹೊತ್ತು ಉತ್ತರಿಸಬೇಕು. ವಿದ್ಯಾರ್ಥಿಗಳ ಮೇಲೆ ನಡೆದ ಹಿಂಸಾಚಾರಕ್ಕೆ ಕೇವಲ ಪೊಲೀಸ್ ಸಿಬ್ಬಂದಿಯನ್ನೇ ಹೊಣೆಗಾರರನ್ನಾಗಿ ಮಾಡಲಾಗದು. ದೆಹಲಿ ಪೊಲೀಸ್ ಆಯುಕ್ತರು ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಈ ಘಟನೆಗೆ ಜವಾಬ್ದಾರರಾಗಬೇಕು ಎಂದು ನೇಹಾ ಆಗ್ರಹಿಸಿದ್ದಾರೆ.ಜೆಎನ್‌ಯು ವಿವಿಯ ಕಲಾ ಮತ್ತು ಸೌಂದರ್ಯಶಾಸ್ತ್ರ ವಿಭಾಗದ ಪಿಎಚ್‌ಡಿ ಸಂಶೋಧಕಿಯಾಗಿರುವ ನೇಹಾ ಬೋರಾ, ಜಂತರ್ ಮಂತರ್‌ನಲ್ಲಿ ನಡೆದ ಉಪವಾಸ ಸತ್ಯಾಗ್ರಹದಲ್ಲಿ 23 ದಿನ ಭಾಗವಹಿಸಿದ್ದರು. ಈ ಅವಧಿಯಲ್ಲಿ ಸುಮಾರು 7.5 ಕೆ.ಜಿ. ತೂಕ ಕಳೆದುಕೊಂಡಿದ್ದಲ್ಲದೆ, ರಕ್ತದಲ್ಲಿನ ಸಕ್ಕರೆಯ ಪ್ರಮಾಣವೂ ಅಪಾಯದ ಮಟ್ಟಕ್ಕೆ ಇಳಿದಿತ್ತು ಎಂದು ವರದಿಯಾಗಿದೆ.

ಉಪವಾಸದ ನಡುವೆಯೂ ಅವರು ಸಾಮಾಜಿಕ ಜಾಲತಾಣಗಳಲ್ಲಿ ನಿರಂತರವಾಗಿ ವಿಡಿಯೊಗಳನ್ನು ಹಂಚಿಕೊಳ್ಳುತ್ತಾ ಯುವಜನರನ್ನು ಹೋರಾಟಕ್ಕೆ ಸೆಳೆಯುವ ಪ್ರಯತ್ನ ನಡೆಸಿದ್ದರು. ಒಂದು ವಿಡಿಯೊದಲ್ಲಿ, ಇಂದು ನನ್ನ ಮನಸ್ಸಿನಲ್ಲಿ ಹಸಿವಿನ ವಿಚಾರವೇ ಇದೆ. ಆಹಾರಕ್ಕಾಗಿ ನನಗಿರುವ ಹಸಿವಿನಷ್ಟೇ, ನರೇಂದ್ರ ಮೋದಿ ಸರ್ಕಾರಕ್ಕೆ ಅಧಿಕಾರದ ಹಸಿವು ಇದೆ ಎಂದು ವ್ಯಂಗ್ಯವಾಡಿದ್ದರು.

ಜುಲೈ 20ರಂದು ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ನಡೆದ ಬಳಿಕ ವೇದಿಕೆಯಿಂದ ಮಾತನಾಡಿದ್ದ ನೇಹಾ ಬೋರಾ, ಶಾಂತಿಯುತ ಪ್ರತಿಭಟನಾಕಾರರ ಮೇಲೆ ಮಾಡಿದ ಪ್ರತಿಯೊಂದು ಗಾಯವೂ ಒಂದು ದಿನ ಈ ಅಹಂಕಾರಿ ಸರ್ಕಾರದ ಪತನಕ್ಕೆ ಕಾರಣವಾಗಲಿದೆ? ಎಂದು ಎಚ್ಚರಿಕೆ ನೀಡಿದ್ದರು. ಹಾಗೆಯೇ, ಜುಲೈ 18ರಂದು ಹೋರಾಟಗಾರ ಸೋನಂ ವಾಂಗ್ಚುಕ್ ಅವರನ್ನು ಪೊಲೀಸರು ವಶಕ್ಕೆ ಪಡೆದ ಘಟನೆಯನ್ನು ನೆನಪಿಸಿಕೊಂಡ ಅವರು, ಕೆಲವೇ ಕ್ಷಣಗಳಲ್ಲಿ ಬಿಳಿ ಬಟ್ಟೆಗಳನ್ನು ಎತ್ತಿ, ವಾಂಗ್ಚುಕ್ ಅವರನ್ನು ಕಣ್ಮರೆಯಾಗುವಂತೆ ಕರೆದೊಯ್ದರು. ಏನಾಗುತ್ತಿದೆ ಎನ್ನುವುದನ್ನು ಅರ್ಥಮಾಡಿಕೊಳ್ಳುವಷ್ಟರಲ್ಲೇ ಎಲ್ಲವೂ ಮುಗಿದುಹೋಗಿತ್ತು ಎಂದು ವಿವರಿಸಿದ್ದಾರೆ.

ಧರ್ಮೇಂದ್ರ ಪ್ರಧಾನ್ ರಾಜೀನಾಮೆಯ ಬಳಿಕವೂ ಹೋರಾಟದ ಮೂಲ ಉದ್ದೇಶ ಬದಲಾಗಿಲ್ಲ ಎಂದು ಪುನರುಚ್ಚರಿಸಿರುವ ನೇಹಾ, ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಮತ್ತು ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ಕರೆ ನೀಡಿದ್ದಾರೆ.

# ಎಐ ತಂತ್ರಜ್ಞಾನ ಗ್ರಾಮೀಣ ಭಾಗಕ್ಕೂ ತಲುಪಿದಾಗ ಮಾತ್ರ ದೇಶದ ನೈಜ ಅಭಿವೃದ್ಧಿ ಸಾಧ್ಯ: ಶಾಲಿನಿ ರಜನೀಶ್

**ಬೆಂಗಳೂರು, ಜು.27:** ಕೃತಕ ಬುದ್ಧಿಮತ್ತೆ (ಎಐ) ರೂಪದ ಆಧುನಿಕ ತಂತ್ರಜ್ಞಾನವು ಕೇವಲ ನಗರ ಪ್ರದೇಶಗಳಿಗೆ ಸೀಮಿತವಾಗದೆ, ಗ್ರಾಮೀಣ ಭಾಗದ ಪ್ರತಿಯೊಬ್ಬ ಪ್ರತಿಭಾವಂತ ಯುವಕ-ಯುವತಿಯರಿಗೂ ತಲುಪಿದಾಗ ಮಾತ್ರ ದೇಶದ ನೈಜ ಅಭಿವೃದ್ಧಿ ಸಾಧ್ಯ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ಬಳಿಯ ಮುದ್ದೇನಹಳ್ಳಿಯ 'ಸತ್ಯಸಾಯಿ ಗ್ರಾಮ'ದಲ್ಲಿ ಏರ್ಪಡಿಸಲಾಗಿದ್ದ 'ರೂರಲ್ ಶೋರ್ಸ್ ಎಐ ಕೌಶಲ್ಯ ಮತ್ತು ಅನುಭವ ಕೇಂದ್ರ' ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ತಂತ್ರಜ್ಞಾನವು ವೇಗವಾಗಿ ಬೆಳೆಯುತ್ತಿರುವ ಈ ಕಾಲಘಟ್ಟದಲ್ಲಿ ಎಐನಂತಹ ಆಧುನಿಕ ತಂತ್ರಜ್ಞಾನಕ್ಕೆ ಕರುಣೆ, ನೈತಿಕತೆ ಮತ್ತು ಸದ್ಗುಣಗಳ ಸ್ಪರ್ಶವಿರಬೇಕು. ತಂತ್ರಜ್ಞಾನವು ಮಾನವನ ಬುದ್ಧಿವಂತಿಕೆ ಮತ್ತು ಸದ್ಗುಣಗಳನ್ನು ಹೆಚ್ಚಿಸುವಂತಿರಬೇಕು. ಸತ್ಯಸಾಯಿ ಗ್ರಾಮದಂತಹ ಪವಿತ್ರ ಹಾಗೂ ಸೇವಾ ಮನೋಭಾವದ ವಾತಾವರಣದಲ್ಲಿ ಈ ಕೇಂದ್ರ ಪ್ರಾರಂಭವಾಗಿರುವುದು ಅತ್ಯಂತ ಸೂಕ್ತವಾಗಿದೆ ಎಂದು ಅಭಿಪ್ರಾಯಪಟ್ಟರು.

ರೂರಲ್ ಶೋರ್ಸ್ ಸಂಸ್ಥೆಯು ಕಳೆದ 18 ವರ್ಷಗಳಿಂದ ಗ್ರಾಮೀಣ ಭಾಗದ ಯುವಜನರು ಉದ್ಯೋಗ ಅರಸಿ ನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸಿ, ಅವರು ಇದ್ದಲ್ಲಿಯೇ ಉದ್ಯೋಗಾವಕಾಶ ಕಲ್ಪಿಸುತ್ತಿರುವುದು ಶ್ಲಾಘನೀಯ. ಈವರೆಗೆ 30,000ಕ್ಕೂ ಹೆಚ್ಚು ಯುವಕ - ಯುವತಿಯರಿಗೆ ತರಬೇತಿ ಹಾಗೂ ಉದ್ಯೋಗಾವಕಾಶ ನೀಡಿರುವುದು ಮತ್ತು



ಅಮೆರಿಕದಲ್ಲೂ 'ಪೀಪಲ್‌ಶೋರ್ಸ್' ಮೂಲಕ 500 ಯುವತಿಯರು / ಮಹಿಳೆಯರಿಗೆ ಉದ್ಯೋಗ ನೀಡುತ್ತಿರುವುದು ಹೆಮ್ಮೆಯ ವಿಷಯ ಎಂದಿದ್ದಾರೆ.

ಉಚಿತ ಶಿಕ್ಷಣ, ಉಚಿತ ಆರೋಗ್ಯ ಮತ್ತು ಪೌಷ್ಟಿಕ ಆಹಾರ ಒದಗಿಸುವುದು ಪ್ರತಿಯೊಬ್ಬರ ಮೂಲಭೂತ ಹಕ್ಕು ಎಂಬ ತತ್ವದಡಿ ಕಾರ್ಯನಿರ್ವಹಿಸುತ್ತಿರುವ ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಮಾರ್ಗದರ್ಶನದ ಸೇವಾ ಕಾರ್ಯಗಳು ಅದ್ಭುತವಾಗಿವೆ. ಭಾರತದ ಪ್ರಥಮ ಸಂಪೂರ್ಣ ಉಚಿತ ಗ್ರಾಮೀಣ ವೈದ್ಯಕೀಯ ಕಾಲೇಜು ಮಧುಸೂದನ ಸಾಯಿ ಇನ್ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್ ಸೇರಿದಂತೆ ಅನೇಕ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುತ್ತಿರುವುದು ಮಾದರಿಯಾಗಿದೆ ಎಂದರು.ಕರ್ನಾಟಕವು ದೇಶದ ತಂತ್ರಜ್ಞಾನ ರಾಜಧಾನಿಯಾಗಿ ಬೆಳೆಯುತ್ತಿದ್ದು, ಇಂತಹ ಎಐ ಕೌಶಲ್ಯ ಕೇಂದ್ರಗಳು ಗ್ರಾಮೀಣ ಯುವಕರನ್ನು ಭವಿಷ್ಯದ ತಂತ್ರಜ್ಞಾನಕ್ಕೆ ಸಜ್ಜುಗೊಳಿಸಲಿವೆ. ಭಾರತವು ಜಾಗತಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ನಾಯಕತ್ವ ವಹಿಸಲು ಗ್ರಾಮೀಣ ಭಾಗದ ಪ್ರತಿಭೆಗಳ ಕೊಡುಗೆ ಅಪಾರವಾಗಲಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸದ್ಗುರು ಮಧುಸೂದನ ಸಾಯಿ ಜಿ, ರೂರಲ್ ಶೋರ್ಸ್ ಸಂಸ್ಥೆಯ ನಿರ್ದೇಶಕರು, ಗಣ್ಯರು, ದೇಶ-ವಿದೇಶಗಳ ಭಕ್ತಾದಿಗಳು ಹಾಗೂ ನೂರಾರು ವಿದ್ಯಾರ್ಥಿಗಳು ಸೇರಿದಂತೆ ಹಲವರು ಹಾಜರಿದ್ದರು.

# ಜೆಡಿಎಸ್ ಕಚೇರಿಯಲ್ಲಿ ಚೆನ್ನಮ್ಮಗೆ ಶ್ರದ್ಧಾಂಜಲಿ

**ಬೆಂಗಳೂರು, ಜು.27:** ಚೆನ್ನಮ್ಮ ದೇವೇಗೌಡರು ಬಡ ಜನರು ಮತ್ತು ದುರ್ಬಲರಲ್ಲಿ ದೇವರನ್ನು ಕಾಣುತ್ತಿದ್ದ ಮಾನವತಾಮೂರ್ತಿ. ಕಷ್ಟಗಳನ್ನು ಹೊತ್ತು ಮನೆಗೆ ಬರುತ್ತಿದ್ದವರಿಗೆ ನೆರವು ನೀಡುವ ಆಸರೆಯಾಗಿದ್ದರು ಎಂದು ಗ್ರೇಟರ್ ಬೆಂಗಳೂರು ಜೆಡಿಎಸ್ ಪಕ್ಷದ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎಚ್.ಎಂ.ರಮೇಶಗೌಡ ಅವರು ಹೇಳಿದ್ದಾರೆ.

ಪಕ್ಷದ ಕಚೇರಿ ಜೆ.ಪಿ. ಭವನದಲ್ಲಿ ಸೋಮವಾರ ಏರ್ಪಡಿಸಲಾಗಿದ್ದ ಮಾಜಿ ಪ್ರಧಾನಿಗಳು ಹಾಗೂ ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಎಚ್.ಡಿ. ದೇವೇಗೌಡರ ಪತ್ನಿ ಚೆನ್ನಮ್ಮ ಅವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಚೆನ್ನಮ್ಮ ಅವರು ನಮ್ಮೆಲ್ಲರಿಗೂ ಮಾತೃ ಸಮಾನರು ಆಗಿದ್ದರು ಹಾಗೂ ಬಡವರ ಪಾಲಿಗೆ ಸಾಕ್ಷಾತ್ ಅನ್ನಪೂರ್ಣೇಶ್ವರಿ ತಾಯಿಯೇ ಆಗಿದ್ದರು. ಮನೆಗೆ ಯಾರೇ ಹೋದರೂ ಅವರು ಯಾರು, ಏನು, ಎತ್ತ ಎಂದು ಯೋಚಿಸದೇ ಅನ್ನ ನೀಡುತ್ತಿದ್ದರು. ಅವರಲ್ಲಿ ಪ್ರತಿಯೊಬ್ಬರು ತಮ್ಮ ತಾಯಿಯನ್ನು ಕಾಣುತ್ತಿದ್ದರು ಎಂದು ಅವರು ಹೇಳಿದರು.

ಮನೆಯನ್ನೇ ದೇವಾಲಯ ಎಂದು ಭಾವಿಸಿದ್ದ ಅವರು ಪ್ರತಿದಿನವೂ ತಪ್ಪದೇ ತುಳಸಿಕಟ್ಟೆಗೆ ಪೂಜೆ ಮಾಡುತ್ತಿದ್ದರು. ಸಾತ್ವಿಕತೆ, ಧಾರ್ಮಿಕ ಶ್ರದ್ಧೆ ಹಾಗೂ ಮಾತೃವಾತ್ಸಲ್ಯ ಅವರಲ್ಲಿತ್ತು. ನಮ್ಮನ್ನು ಸ್ವಂತ ಮಕ್ಕಳಿಗಿಂತ ಮಿಗಿಲಾಗಿ ನೋಡುತ್ತಿದ್ದರು. ಅಂತಹ ತಾಯಿ ನಿಧನರಾಗಿದ್ದು ನಮಗೆ ಬಹಳ ದುಃಖ ಉಂಟು ಮಾಡಿದೆ ಎಂದು ಅವರು ಹೇಳಿದರು.

ಚೆನ್ನಮ್ಮ ಅವರು ಎಂದೂ ರಾಜಕೀಯದ ಬಗ್ಗೆ ಮಾತನಾಡುತ್ತಿರಲಿಲ್ಲ. ಸ್ವತಃ ನನಗೆ ಅನುಭವ ಆದಂತೆ, ನಾನು ಅವರ ಮನೆಗೆ



ಹೋದರೆ ಎದುರಿಗೆ ಕಂಡ ಕೂಡಲೇ ಅವರು ಕೇಳುತ್ತಿದ್ದ ಒಂದೇ ಮಾತು 'ಊಟ ಮಾಡಪ್ಪ' ಎನ್ನುವುದಾಗಿತ್ತು. ಆ ಸಂದರ್ಭದಲ್ಲಿ ಪ್ರಸಾದವನ್ನು ಅಥವಾ ಹಣ್ಣನ್ನು ಕೊಟ್ಟು ತಲೆ ಮುಟ್ಟಿ ಆಶೀರ್ವಾದ ಮಾಡುತ್ತಿದ್ದರು.

ಅಂತಹ ತಾಯಿಯನ್ನು ಕಳೆದುಕೊಂಡಿದ್ದು ನನಗಂತೂ ಬಹಳ ನೋವು ಉಂಟು ಮಾಡಿದೆ. ಅವರಿಲ್ಲ ಎನ್ನುವ ಶೂನ್ಯವನ್ನು ತುಂಬುವುದು ಬಹಳ ಕಷ್ಟ ಎಂದು ರಮೇಶ್ ಗೌಡ ಭಾವುಕರಾದರು.

ಇದೇ ಸಂದರ್ಭದಲ್ಲಿ ಜೆಡಿಎಸ್ ಕಚೇರಿಯಲ್ಲಿ ಚೆನ್ನಮ್ಮ ಅವರ ಭಾವಚಿತ್ರಕ್ಕೆ ನಾಯಕರಲ್ಲರೂ ಪುಷ್ಪವ ನಮನ ಸಲ್ಲಿಸಿದರು. ಪಕ್ಷದ ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಎಂ.ಕೃಷ್ಣಾರೆಡ್ಡಿ, ಮಾಜಿ ಸಚಿವೆ ಲೀಲಾದೇವಿ ಆರ್ ಪ್ರಸಾದ್, ಶಾಸಕರುಗಳಾದ ಟಿ.ಎ. ಶರವಣ, ಟಿ.ಎನ್.ಜವರಾಯಿಗೌಡ, ಮಾಜಿ ಶಾಸಕರಾದ ಕೆ.ಎ.ತಿಪ್ಪೇಸ್ವಾಮಿ, ಗೊಟ್ಟಿಗೆರೆ ಮಂಜುನಾಥ್, ಆರ್.ಪ್ರಕಾಶ್, ಟಿ.ತಿಮ್ಮೇಗೌಡ, ಎಚ್.ಸಿ.ಕೃಷ್ಣ, ನಟರಾಜ್ ಗಂಗಾಧರ್, ಶೈಲಾ ಸಂತೋಜಿರಾವ್, ಚಂದನ್, ಟಿ.ಆರ್. ತುಳಸಿರಾಮ್, ಎಸ್ ರಮೇಶ, ಎ.ವಿ.ವೇಣುಗೋಪಾಲ್ ಹಾಗೂ ಪಕ್ಷದ ಇನ್ನಿತರ ಮುಖಂಡರು, ಪದಾಧಿಕಾರಿಗಳು, ವಿಧಾನಸಭಾ ಕ್ಷೇತ್ರ ಅಧ್ಯಕ್ಷರು, ವಿವಿಧ ವಿಭಾಗಗಳ ಅಧ್ಯಕ್ಷರು, ಮಹಿಳಾ ವಿಭಾಗದ ಜಿಬಿಎ ಜಿಲ್ಲಾಧ್ಯಕ್ಷರುಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಖ್ಯಾತ ಹರಿಕಥೆ ವಿದ್ವಾಂಸರಾದ ಶಿವಾರ ಉಮೇಶ್ ಅವರು ತಮ್ಮ ವೃಂದದೊಂದಿಗೆ ಚೆನ್ನಮ್ಮ ದೇವೇಗೌಡ ಅವರು ನಡೆದು ಬಂದ ಅವರ ಬದುಕಿನ ದಾರಿಯ ಬಗ್ಗೆ ಗೀತೆಗಳ ಮೂಲಕ ನಮನ ಸಲ್ಲಿಸಿದರು.

# ಖರ್ಗೆ ಜೂನಿಯರ್ ಆಡಳಿತದಲ್ಲಿ ಕರ್ನಾಟಕದಲ್ಲಿ ಪೊಲೀಸ್ ರಾಜ್: ರವಿಕುಮಾರ್ ಕಟು ಟೀಕೆ

**ಬೆಂಗಳೂರು, ಜು.27:** ಬಿಜೆಪಿ ಹಿರಿಯ ನಾಯಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಿ.ಟಿ. ರವಿ ಅವರ ವಿರುದ್ಧ ಕಾಂಗ್ರೆಸ್ ಸರ್ಕಾರ ಪೊಲೀಸ್ ಇಲಾಖೆಯನ್ನು ದುರುಪಯೋಗಪಡಿಸಿಕೊಂಡು ಕಿರುಕುಳ ಹಾಗೂ ಮಾನಸಿಕ ಹಿಂಸೆ ನೀಡುತ್ತಿರುವುದು ಖಂಡನೀಯ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಹೇಳಿದ್ದಾರೆ.

ಪೊಲೀಸರು ಸಿ.ಟಿ. ರವಿ ಅವರನ್ನು ಬಂಧಿಸಲು ಮುಂದಾಗಿರುವ ಕಾರಣಗಳು ಸಂಪೂರ್ಣವಾಗಿ ಆಧಾರ ರಹಿತವಾಗಿವೆ. ರವಿ ಅವರು ಇಡೀ ಮುಸ್ಲಿಂ ಸಮುದಾಯದ ವಿರುದ್ಧ ಯಾವುದೇ ಹೇಳಿಕೆ ನೀಡಿಲ್ಲ. ದೆಹಲಿಯಲ್ಲಿ ನಡೆದ ಪ್ರತಿಭಟನೆಯ ವೇಳೆ ಪೊಲೀಸ್ ವಾಹನಕ್ಕೆ ಬೆಂಕಿ ಹಚ್ಚಲು ಯತ್ನಿಸಿದ ಸಮಾಜಘಾತಕ ವ್ಯಕ್ತಿಯನ್ನು



ಉಲ್ಲೇಖಿಸಿದ್ದಾರೆ. ಆ ವ್ಯಕ್ತಿ ಮುಸ್ಲಿಂ ಸಮುದಾಯಕ್ಕೆ ಸೇರಿದವನಾಗಿದ್ದರೆಂಬ ಕಾರಣಕ್ಕೆ, ಅವರು ಸಂಪೂರ್ಣ ಮುಸ್ಲಿಂ ಸಮುದಾಯವನ್ನೇ ಆರೋಪಿಸಿದ್ದಾರೆ ಎಂದು ಅರ್ಥೈಸುವುದು ತಪ್ಪು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಇದೇ ಸಂದರ್ಭದಲ್ಲಿ ಸಿ.ಟಿ. ರವಿ ಅವರು ಕೇಳಿರುವ ಪ್ರಶ್ನೆ ಸಂಪೂರ್ಣವಾಗಿ ನ್ಯಾಯಸಮ್ಮತವಾಗಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ವಿರುದ್ಧ ನಡೆಯುವ ಪ್ರತಿಭಟನೆಯಲ್ಲಿ ಒಬ್ಬ ಮುಲ್ಲಾಗೆ ಏನು ಸಂಬಂಧ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಆತ ಪೀಡಿತ ವಿದ್ಯಾರ್ಥಿಯೇ ಎಂಬ ಪ್ರಶ್ನೆಯನ್ನು ಕೇಳುವ ಹಕ್ಕು ಅವರಿಗೆ ಇದೆ ಎಂದು ರವಿಕುಮಾರ್ ಹೇಳಿದ್ದಾರೆ.

ಪ್ರಿಯಾಂಕ್ ಖರ್ಗೆ ಅವರು ಗೃಹ ಸಚಿವರಾದ ಬಳಿಕ ಕಾಂಗ್ರೆಸ್ ಸರ್ಕಾರ ಬಿಜೆಪಿ ಹಾಗೂ ಆರ್‌ಎಸ್‌ಎಸ್ ಕಾರ್ಯಕರ್ತರ ವಿರುದ್ಧ ಸಂಘರ್ಷದ ಮನೋಭಾವದಿಂದ ನಡೆದುಕೊಳ್ಳುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಖರ್ಗೆ ಜೂನಿಯರ್ ಅವರು ಬಿಜೆಪಿ ಹಾಗೂ ಆರ್‌ಎಸ್‌ಎಸ್‌ಗೆ ಸಂಬಂಧಿಸಿದವರನ್ನು ಕ್ಷುಲ್ಲಕ ಕಾರಣಗಳನ್ನು ಮುಂದಿಟ್ಟುಕೊಂಡು ಕಿರುಕುಳ ನೀಡುವುದು ಹಾಗೂ ಮಾನಸಿಕ ಹಿಂಸೆ ಉಂಟುಮಾಡುವುದನ್ನು ಯಾವುದೇ ಸಂದರ್ಭದಲ್ಲೂ ತಪ್ಪಿಸಿಕೊಳ್ಳುವುದಿಲ್ಲ. ಇದು ತೀವ್ರ ದ್ವೇಷ ಮತ್ತು ಅಸಹಿಷ್ಣುತೆಯ ರಾಜಕಾರಣದ ಸ್ಪಷ್ಟ ಉದಾಹರಣೆಯಾಗಿದೆ ಎಂದು ಎನ್. ರವಿಕುಮಾರ್ ಹೇಳಿದ್ದಾರೆ.

ಸಿ.ಟಿ.ರವಿ ಅವರ ಹೇಳಿಕೆಯಲ್ಲಿ ಯಾವುದೇ ತಪ್ಪಿಲ್ಲ. ಅವರ ಮಾತುಗಳನ್ನು ಕಾಂಗ್ರೆಸ್ ಸರ್ಕಾರ ಉದ್ದೇಶಪೂರ್ವಕವಾಗಿ ತಿರುಚಿ ತಪ್ಪಾಗಿ ಅರ್ಥೈಸುತ್ತಿದೆ. ಬಿಜೆಪಿ ಅವರೊಂದಿಗೆ ದೃಢವಾಗಿ ನಿಂತು ಅವರನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಪೊಲೀಸ್ ಇಲಾಖೆಯನ್ನು ದುರುಪಯೋಗಪಡಿಸಿಕೊಂಡು ಕರ್ನಾಟಕವನ್ನು ಪೊಲೀಸ್ ರಾಜ್ಯವನ್ನಾಗಿ ಪರಿವರ್ತಿಸಲು ಕಾಂಗ್ರೆಸ್ ಸರ್ಕಾರ ನಡೆಸುತ್ತಿರುವ ಪ್ರಯತ್ನದ ವಿರುದ್ಧ ಬಿಜೆಪಿ ಪ್ರಬಲ ಹೋರಾಟ ನಡೆಸಲಿದೆ ಎಂದು ಎನ್.ರವಿಕುಮಾರ್ ಹೇಳಿದ್ದಾರೆ.

# ರಾಗಿ, ಜೋಳ ಖರೀದಿಗೆ 1,200 ಕೋಟಿ ತಕ್ಷಣ ಬಿಡುಗಡೆ ಮಾಡಿ: ಅಶೋಕ್ ಆಗ್ರಹ

**ಬೆಂಗಳೂರು, ಜು.27:** ರೈತರಿಂದ ಬೆಂಬಲ ಬೆಲೆ ಯೋಜನೆಯಡಿ ಖರೀದಿ ಮಾಡಿದ ರಾಗಿ, ಜೋಳಕ್ಕೆ ನೀಡಬೇಕಾಗಿರುವ 1 ಸಾವಿರ 200 ಕೋಟಿ ರೂಪಾಯಿ ಮೊತ್ತವನ್ನು ಶೀಘ್ರವೇ ಬಿಡುಗಡೆ ಮಾಡುವಂತೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕಳೆದ ಮಾರ್ಚ್ ತಿಂಗಳಲ್ಲಿ ರೈತರಿಂದ ಖರೀದಿ ಮಾಡಿದ ರಾಗಿ, ಜೋಳಕ್ಕೆ ನಿಯಮದ ಪ್ರಕಾರ 15 ದಿನಗಳೊಳಗಾಗಿ ಅವರ ಖಾತೆಗೆ ಜಮೆ ಮಾಡಬೇಕು ಆದರೆ ನಾಲ್ಕು ತಿಂಗಳು ಕಳೆದರೂ ಬೆಂಬಲ ಬೆಲೆ ಇನ್ನೂ ಪಾವತಿಸಿಲ್ಲ ಎಂದು ಹೇಳಿದ್ದಾರೆ. ಲಕ್ಷಾಂತರ ರೈತರಿಗೆ ಬೆಂಬಲ ಬೆಲೆ ಬಾಕಿ ಉಳಿಸಿಕೊಳ್ಳುವ ಮೂಲಕ ರಾಜ್ಯ ಸರ್ಕಾರ ರೈತರನ್ನು ಸಂಕಷ್ಟಕ್ಕೆ ದೂಡಿದೆ. ಮಳೆ ಆರಂಭವಾಗಿದ್ದು, ಉಳುಮೆ, ಬಿತ್ತನೆಬೀಜ, ರಸಗೊಬ್ಬರ, ಕೂಲಿ ಕಾರ್ಮಿಕರಿಗೆ ಹಣ ನೀಡುವುದು ಸೇರಿದಂತೆ ರೈತರ ಬಳಿ ಹಣವಿಲ್ಲದೆ ಪರದಾಡುವಂತಾಗಿದೆ. ರೈತರು,



ವಿಧಾನಸೌಧಕ್ಕೆ ಮುತ್ತಿಗೆ ಹಾಕುವ ಮುನ್ನ ಬಾಕಿ ಹಣವನ್ನು ಬಿಡುಗಡೆ ಮಾಡಿ ಎಂದು ಆಗ್ರಹಿಸಿದ್ದಾರೆ.

ರಾಜ್ಯದಲ್ಲಿ ಖಾತರಿ ಅನುಷ್ಠಾನ ಸಮಿತಿ, ಭಾರತ್ ಜೋಡೋ ಕ್ಲಬ್, ಸರ್ಕಾರಿ ಅತಿಥಿಗೃಹ ನವೀಕರಣ ಸೇರಿದಂತೆ ವೈಯಕ್ತಿಕ ಆದ್ಯತೆಗಳಿಗೆ ನೂರಾರು ಕೋಟಿ ರೂ.ಖರ್ಚು ಮಾಡುವ ರಾಜ್ಯ ಸರ್ಕಾರ ರೈತರಿಗೆ ನೀಡಬೇಕಾಗಿರುವ 1 ಸಾವಿರದ 200 ಕೋಟಿ ರೂಪಾಯಿ ಬೆಂಬಲ ಬೆಲೆಯನ್ನು ಶೀಘ್ರವೇ ನೀಡಿ, ಇಲ್ಲದಿದ್ದರೆ ರೈತರಿಂದ ಹೋರಾಟ ಎದುರಿಸಬೇಕಾಗುತ್ತದೆ ಎಂದು ಸಲಹೆ ನೀಡಿದ್ದಾರೆ.

# ಪಶು ವೈದ್ಯಾಧಿಕಾರಿ ನೇಮಕಾತಿ ಅಕ್ರಮ: ಎಫ್‌ಐಆರ್

**ಬೆಂಗಳೂರು, ಜು.27:** ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ 400 ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಮೇಲೆ ಅಮಾನತುಗೊಂಡಿರುವ ಕೆಪಿಎಸ್‌ಸಿ ಅಧ್ಯಕ್ಷ ಎಸ್. ಶಿವಶಂಕರಪ್ಪ ಸಾಹುಕಾರ್, ಮಾಜಿ ಕೆಪಿಎಸ್ಸಿ ಸದಸ್ಯರು, ಅಧಿಕಾರಿಗಳು ಮತ್ತು ಆಯ್ಕೆಯಾದ 29 ಅಭ್ಯರ್ಥಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಸಂಬಂಧಿಕರಿಗೆ ಹಾಗೂ ಹಣ ನೀಡಿದವರಿಗೆ ಹುದ್ದೆ ನೀಡಲಾಗುತ್ತಿದೆ ಎಂದು ಆರೋಪಿಸಿ ಹಾ,ನದ ಪಶು ವೈದ್ಯಾಧಿಕಾರಿ ಮಂಜುನಾಥ ಎಂಬುವರು ಶಿವಶಂಕರಪ್ಪ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ದೂರಿನ ಅನ್ವಯ ಶಿವಶಂಕರಪ್ಪ ಸಾಹುಕಾರ್, ಕೆಪಿಎಸ್ಸಿ ಸದಸ್ಯರು, ಕೆಲ ಅಭ್ಯರ್ಥಿಗಳ ಮೇಲೆ ಎಫ್‌ಐಆರ್ ದಾಖಲಾಗಿದೆ.ಜನವರಿಯಲ್ಲಿ ನಡೆದಿದ್ದ ಪಶು ವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯಲ್ಲಿ ಶಿವಶಂಕರಪ್ಪ ಸಂಬಂಧಿ ಸೇರಿ ಸುಮಾರು 29 ಅಭ್ಯರ್ಥಿಗಳು ಅಕ್ರಮವಾಗಿ ಉತ್ತೀರ್ಣರಾಗಿದ್ದಾರೆ. ಇಂತಹ ಕೆಲ ಅಭ್ಯರ್ಥಿಗಳಿಗೆ



ಮಧ್ಯವರ್ತಿಗಳು ತರಬೇತಿ ನೀಡಿದ್ದಾರೆ. ಕೆಲವರಿಗೆ ಓಎಂಆರ್ ಶೀಟ್ ತಿದ್ದುಪಡಿ ಮಾಡಿ ಅಕ್ರಮ ನಡೆಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗವು ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ 400 ಪಶುವೈದ್ಯಾಧಿಕಾರಿಗಳ ಹುದ್ದೆ ನೇಮಕಾತಿಗೆ ಪರೀಕ್ಷೆ ನಡೆಸಿದ್ದು, ಜುಲೈ 17ರಂದು ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಿದೆ. ಈ ಪಟ್ಟಿಯಲ್ಲಿ ಆಯೋಗದ ಅಧ್ಯಕ್ಷರು, ಸದಸ್ಯರು ಹಾಗೂ ಸಿಬ್ಬಂದಿಯ ಸಂಬಂಧಿಗಳಾದ ಅಭ್ಯರ್ಥಿಗಳು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.ಯುಪಿಎಸ್ಸಿ ನಡೆಸುವ ಐಎಫ್‌ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದ ಕೆಲವು ಅಭ್ಯರ್ಥಿಗಳು ಈ ಪರೀಕ್ಷೆಯನ್ನೂ ಬರೆದಿದ್ದರು. ಅವರಿಗೆ ಇದರಲ್ಲಿ 350 ಅಂಕಗಳು ಸಹ ಬಂದಿಲ್ಲ. ಆದರೆ, ಪಶುವೈದ್ಯ ಪದವಿಯಲ್ಲಿ ಸಾಧಾರಣ ಸಾಧನೆ ಮಾಡಿರುವ ಕೆಲವು ಅಭ್ಯರ್ಥಿಗಳು 400ಕ್ಕಿಂತ ಹೆಚ್ಚು ಅಂಕ ಪಡೆದಿರುವುದು ಅನುಮಾನ ಮೂಡಿಸಿದೆ.ಈ ಅನುಮಾನವನ್ನು ಪುಷ್ಟೀಕರಿಸುವಂತೆ, ಶಿವಶಂಕರಪ್ಪ ಅವರ ಸಂಬಂಧಿ ಅಭ್ಯರ್ಥಿಯೊಬ್ಬರು ಕನಿಷ್ಠ ಸಿಜಿಪಿಎಯೊಂದಿಗೆ ಪದವಿ ಮುಗಿಸಿದ್ದರೂ ಆಯೋಗದ ಪರೀಕ್ಷೆಯಲ್ಲಿ ಮಾತ್ರ 450ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಇದು ಅನುಮಾನಕ್ಕೆ ಗ್ರಾಸವಾಗಿದೆಇದಕ್ಕೆ ವ್ಯತಿರಿಕ್ತವಾಗಿ, ಪಶುವೈದ್ಯಕೀಯ ಅಧ್ಯಯನದಲ್ಲಿ ಸರಾಸರಿ ಶೈಕ್ಷಣಿಕ ದಾಖಲೆಗಳನ್ನು ಹೊಂದಿರುವ ಹಲವಾರು ಅಭ್ಯರ್ಥಿಗಳು 400 ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ್ದಾರೆ ಎಂದು ಆರೋಪಿಸಲಾಗಿದೆ, ಇದು ಆಯ್ಕೆ ಪ್ರಕ್ರಿಯೆಯ ಬಗ್ಗೆ ಅನುಮಾನ ಮೂಡಿಸಿದೆ. ಶಿವಶಂಕರಪ್ಪ ಅವರ ಸಂಬಂಧಿಕರಲ್ಲಿ ಒಬ್ಬರಾದ ಸೂಗುರೇಶ್ ಜಕಾ, ಕಡಿಮೆ ಸಿಜಿಪಿಎ ಪದವಿ ಪಡೆದಿದ್ದರೂ, ಕೆಪಿಎಸ್ಸಿ ಪರೀಕ್ಷೆಯಲ್ಲಿ 450ಕ್ಕೂ ಹೆಚ್ಚು ಅಂಕಗಳನ್ನು ಗಳಿಸಿ ಅಗ್ರ ಅಭ್ಯರ್ಥಿಗಳಲ್ಲಿ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

# ನಿಗದಿತ ಅವಧಿಯೊಳಗೆ ಎಸ್‌ಐಆರ್ ಪೂರ್ಣಗೊಳಿಸಿ

**ಬೆಂಗಳೂರು, ಜು.27:** ಮಾನ್ಯ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಕಾರ್ಯದ ಪ್ರಗತಿ ಪರಿಶೀಲನೆ ಸಂಬಂಧ ಸೋಮವಾರ ಬೆಂಗಳೂರು ಉತ್ತರ ವ್ಯಾಪ್ತಿಗೆ ಸಂಬಂಧಿಸಿದಂತೆ ಅಪರ ಜಿಲ್ಲಾಧಿಕಾರಿಗಳೊಂದಿಗೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್.ವಿ. ಪ್ರಗತಿ ಪರಿಶೀಲನೆ ನಡೆಸಿದರು. ನಿಗದಿತ ಅವಧಿಯೊಳಗೆ ಎಸ್.ಐ.ಆರ್ ಕಾರ್ಯ ಪಾರದರ್ಶಕತೆಯಿಂದ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬೆಂಗಳೂರು ಉತ್ತರ ನಗರ ಪಾಲಿಕೆ ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಮತ್ತಿತರೆ ಉನ್ನತಾಧಿಕಾರಿಗಳು ಪ್ರಗತಿ ಪರಿಶೀಲನೆಯಲ್ಲಿ ಭಾಗವಹಿಸಿದ್ದರು.

ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯವನ್ನು ಚುನಾವಣಾ ಆಯೋಗ ನಿಗದಿಪಡಿಸಿರುವ ವೇಳಾಪಟ್ಟಿಯಂತೆ ಪಾರದರ್ಶಕತೆಯಿಂದ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವ ಕುರಿತು ಸಭೆಯಲ್ಲಿ ವಿವರವಾದ ಚರ್ಚೆ ನಡೆಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ



ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್, ವಿಧಾನಸಭಾ ಕ್ಷೇತ್ರವಾರು ಎಸ್.ಐ.ಆರ್ ಪ್ರಗತಿ ಪರಿಶೀಲನೆ ಮಾಡಿ, ಎಲ್ಲಾ ವಿಧಾನ ಸಭಾ ಕ್ಷೇತ್ರದ ಪ್ರತಿ ಮತಗಟ್ಟೆ ವಾರು ಪ್ರಗತಿ ಪರಿಶೀಲಿಸುವುದಾಗಿ, ಸಾರ್ವಜನಿಕರಿಗೆ ಯಾವುದೇ ಅನಾನುಕೂಲವಾಗದಂತೆ ಹಾಗೂ ಯಾವುದೇ ನೈಜ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಪಾರದರ್ಶಕತೆಯಿಂದ ನಿಗದಿತ ಅವಧಿಯಲ್ಲಿ ಗುರಿ ತಲುಪಲು ಕ್ರಮ ಕೈಗೊಳ್ಳಲು ಕಟ್ಟುನಿಟ್ಟಿನ ಸೂಚನೆ ನೀಡಿದರು. ಮತದಾರರ ನೋಂದಣಾಧಿಕಾರಿಗಳಿಗೆ ವಿಧಾನಸಭಾ ಕ್ಷೇತ್ರವಾರು ಗುರುತಿಸಲಾದ ಎ.ಎಸ್.ಡಿ.ಡಿ.ಒ ಪಟ್ಟಿಯ ವಿವರವನ್ನು ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಪ್ರತಿನಿತ್ಯ ನೀಡಿ, ಸದರಿಯವರು ಏನಾದರೂ ಆಕ್ಷೇಪಣೆ, ಸಲಹೆಗಳನ್ನು ನೀಡಿದಲ್ಲಿ, ಪರಿಶೀಲಿಸಿ ನಿಯಮಾನುಸಾರ ಕ್ರಮ ವಹಿಸಲು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಕ್ಷೇತ್ರವಾರು ಸಭೆ ನಡೆಸಲು ಮತದಾರರ ನೋಂದಣಾಧಿಕಾರಿಗಳಿಗೆ ಸೂಚನೆ ನೀಡಿದರು. ಬೂತ್ ಮಟ್ಟದ ಅಧಿಕಾರಿಗಳು ಮನೆ-ಮನೆಗೆ ಭೇಟಿ ಕಾರ್ಯವನ್ನು ನಿಗಧಿತ ಗುರಿಯೊಂದಿಗೆ ಸಮರ್ಪಕವಾಗಿ ನಿರ್ವಹಿಸುವುದು ಹಾಗೂ ಅರ್ಜಿಗಳ ವಿಲೇವಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವ ಕುರಿತು ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಅಲ್ಲದೆ, ಮಾನ್ಯ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ವಿಶೇಷ ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆ ಕಾರ್ಯವನ್ನು ಸುಗಮ ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು. ಸಭೆಯಲ್ಲಿ ಜಂಟಿ ಮುಖ್ಯ ಚುನಾವಣಾಧಿಕಾರಿಗಳಾದ ಯೋಗೇಶ್ವರ್, ಹಾಗೂ ಜಂಟಿ ಆಯುಕ್ತರಾದ ಪಲ್ಲವಿ, ಜಂಟಿ ಆಯುಕ್ತ ಮೊಹಮ್ಮದ್ ನಯೀಮ್ ಮೋಮಿನ್, ಮತದಾರ ನೋಂದಣಾಧಿಕಾರಿಗಳು, ಸಹಾಯಕ ಚುನಾವಣಾ ನೋಂದಣಾಧಿಕಾರಿಗಳು ಹಾಗೂ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

# ವಿಜಯೇಂದ್ರ, ಸಿ.ಟಿ.ರವಿ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ

**ಬೆಂಗಳೂರು, ಜು.27:** ಗೃಹ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಏಕವಚನದಲ್ಲಿ ನಿಂದಿಸಿರುವ ಹಾಗೂ ಮುಸ್ಲಿಂರ ವಿರುದ್ಧ ಆಕ್ಷೇಪಾರ್ಹ ಟೀಕೆ ಮಾಡಿರುವ ಸಿ.ಟಿ. ರವಿ ವಿರುದ್ಧ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸಿದರು.

ಕೆಪಿಸಿಸಿ ಪ್ರಧಾನ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಬಿಜೆಪಿ ನಾಯಕರ ವಿರುದ್ಧ ಭಿತ್ತಿ ಪತ್ರ ಪ್ರದರ್ಶಿಸಿ ಘೋಷಣೆ ಕೂಗಿದರು.

ನಂತರ ಮಾತನಾಡಿದ ವಿ. ಮನೋಹರ್, ರಾಜ್ಯದಲ್ಲಿ ಬಿಜೆಪಿಯ ಭ್ರಷ್ಟಾಚಾರದ ಬಗ್ಗೆ ಹಾಗೂ ತನ್ನ ತಂದೆ ಬಿಎಸ್ ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಆರ್‌ಟಿಜಿಎಸ್ ಮೂಲಕ ಹಣ ಪಡೆದಿದ್ದು, ಈ ಬಗ್ಗೆ ಕಾಂಗ್ರೆಸ್ ಕಾರ್ಯಕರ್ತರ ಸವಾಲಿಗೆ ಉತ್ತರಿಸಲು ವಿಜಯೇಂದ್ರ ಸಿದ್ಧರಿದ್ದಾರೆ ಎಂದು ಪ್ರಶ್ನಿಸಿದರು.

ಬಿಜೆಪಿ ಆಡಳಿತದಲ್ಲಿ ಅಕ್ರಮ ಹಾಗೂ ಭ್ರಷ್ಟಾಚಾರಕ್ಕೆ ಬುನಾದಿ ಹಾಕಿದ್ದೆ ಬಿ.ವೈ ವಿಜಯೇಂದ್ರ. ದಲಿತರನ್ನು ಅಪಮಾನಿಸುವುದೇ ಬಿಜೆಪಿಯ ಸಂಸ್ಕೃತಿಯಾಗಿದೆ. ಈ ಕೂಡಲೇ ವಿಜಯೇಂದ್ರ ಪ್ರಿಯಾಂಕ ಖರ್ಗೆ ರವರಲ್ಲಿ




ಕ್ಷಮೆಯಾಚಿಸಬೇಕೆಂದು ಆಗ್ರಹಿಸಿದರು.

ಸಿ.ಟಿ.ರವಿ ಪ್ರತಿಬಾರಿಯೂ ಮುಸ್ಲಿಂ ಸಮುದಾಯವನ್ನು ಅವಹೇಳನ ಮಾಡಿ ರಾಜಕೀಯ ಲಾಭಗಳಿಸುತ್ತಿದೆ. ಪೊಲೀಸರು ಮನೆ ಬಳಿ ಹೋಗಿ ನೋಟಿಸ್ ನೀಡಲು ಬಂದರೆ ಪೊಲೀಸರನ್ನು ಅಪಮಾನ ಮಾಡಿದ್ದು, ಈತನನ್ನು ಬಂಧಿಸಿ ತನಿಖೆ ನಡೆಸಿ ಕೂಡಲೇ ಗಡಿಪಾರು ಮಾಡಬೇಕೆಂದು ಆಗ್ರಹಿಸಿದರು.

ಕಾಂಗ್ರೆಸ್ ಮುಖಂಡರಾದ ಜಿ.ಪ್ರಕಾಶ್, ಮುರಳಿ, ಆದಿತ್ಯ,ಕೆ.ಟಿ ನವೀನ್,ಪುಟ್ಟರಾಜು, ಕುಶಾಲ್ ಹರವೇಗೌಡ, ನವೀನ್ ಸುಂಕದಕಟ್ಟೆ , ಉಮೇಶ್, ರಂಜಿತ್, ಪ್ರವೀಣ್ ರಾವ್, ಪವನ್, ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದರು.

# ಕೆಪಿಎಸ್‌ಸಿ ಅಕ್ರಮದ ವಿರುದ್ಧ ರಾಹುಲ್‌ಗಾಂಧಿ ಕರ್ನಾಟಕದಲ್ಲಿ ಹೋರಾಡಲಿ: ಶ್ರೀರಾಮುಲು ಸವಾಲು

**ಬೆಂಗಳೂರು, ಜು.27:** ರಾಹುಲ್ ಗಾಂಧಿ ಕಾರಿನ ಹಿಂದೆ ಸಿಎಂ ಡಿಕೆಶಿ ಬಾಡಿಗಾರ್ಡ್ ರೀತಿ ಓಡಾಡುತ್ತಿದ್ದಾರೆ. ಕೆಪಿಎಸ್‌ಸಿ ನೇಮಕಾತಿಯಲ್ಲಿ ದೊಡ್ಡಮಟ್ಟದ ಭ್ರಷ್ಟಾಚಾರ ನಡೆದಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕರ್ನಾಟಕಕ್ಕೆ ಬಂದು ಕೆಪಿಎಸ್‌ಸಿ ಅಕ್ರಮದ ಬಗ್ಗೆ ಹೋರಾಡಲಿ ಎಂದು ಮಾಜಿ ಸಚಿವ ಶ್ರೀರಾಮುಲು ಸವಾಲು ಹಾಕಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಶ್ರೀರಾಮುಲು, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕರ್ನಾಟಕ್ಕೆ ಯಾವಾಗ ಬರುತ್ತಾರೆ. ನೀಟ್ ಅಕ್ರಮದ ಬಗ್ಗೆ ಹೋರಾಟ ಮಾಡಿದ್ದೇವೆ ಎಂದು ಹೇಳಿದ್ದಾರೆ ಅದೇ ರೀತಿ ಕರ್ನಾಟಕಕ್ಕೆ ಬಂದು ಕೆಪಿಎಸ್ ಸಿ ಅಕ್ರಮದ ಬಗ್ಗೆ ಹೋರಾಡಲಿ. ಕೆಪಿಎಸ್ ಸಿ ಅಕ್ರಮದ ಬಗ್ಗೆ ಯಾರು ರಾಜೀನಾಮೆ ನೀಡುತ್ತಾರೆ ಎಂದು ಪ್ರಶ್ನಿಸಿದ್ದಾರೆ.

ರಾಜ್ಯ ಸರ್ಕಾರದಲ್ಲಿ ಒಂದಷ್ಟು ಸಚಿವರು ಮಾತ್ರ ಖುಷಿಯಾಗಿದ್ದಾರೆ. ಹೈಕಮಾಂಡ್‌ಗೆ ಕಪ್ಪ ಕಾಣಿಕೆ ನೀಡುತ್ತಿರುವುದೇ ಇದಕ್ಕೆ ಕಾರಣ. ಹೈಕಮಾಂಡ್ ಮೆಚ್ಚಿಸಲು ಹಣ ತೆಗೆದುಕೊಂಡು ಹೋಗಿ ಕೊಡುತ್ತಿದ್ದಾರೆ. ಸಿದ್ದರಾಮಯ್ಯಗಿಂತ ಡಿ.ಕೆ. ಶಿವಕುಮಾರ್ ಉತ್ತಮವಾಗಿ ಕಪ್ಪ ಕಾಣಿಕೆ ನೀಡುತ್ತಿದ್ದಾರೆ ಎಂದರು.

## ಬೆಳೆ ನಷ್ಟ ಸಮೀಕ್ಷೆಗೆ ಡ್ರೋನ್ ಬಳಕೆ ಸಮಂಜಸವಲ್ಲ

ರಾಜ್ಯದ ಹಲವು ಭಾಗಗಳಲ್ಲಿ ಜಮೀನುಗಳು ಒಣಗಿದ್ದು, ಕುಡಿಯುವ ನೀರಿನ ಸಮಸ್ಯೆ ಉಲ್ಬಣವಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ನೆರವಿಗೆ ಬರಬೇಕಾದರೆ, ಬೆಳೆ ನಷ್ಟದ ಡ್ರೋನ್ ಸಮೀಕ್ಷೆಯಲ್ಲಿ ತೊಡಗಿರುವುದು ಸಮಂಜಸವಲ್ಲ ಎಂದು ಟೀಕಿಸಿದರು. "ಅಂಗೈ ಹುಣ್ಣಿಗೆ ಕನ್ನಡಿಯೇಕೆ ಎಂಬಂತಾಗಿದೆ. ಮೊದಲು ರೈತರಿಗೆ ಪರಿಹಾರ ಘೋಷಿಸಬೇಕು. ಜಿಲ್ಲಾಧಿಕಾರಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ಬರಬಾರದು. ನೀರಾವರಿ ಸಚಿವರೊಂದಿಗೆ ಮಾತನಾಡಿ ಕಾಲುವೆಗಳಿಗೆ ನೀರು ಹರಿಸುವಂತೆ ಮನವಿ ಮಾಡಿರುವುದಾಗಿ ಶ್ರೀರಾಮುಲು ಹೇಳಿದರು.

# ಪಶುವೈದ್ಯಾಧಿಕಾರಿ ಆಯ್ಕೆಪಟ್ಟಿಗೆ ತಾತ್ಕಾಲಿಕ ತಡೆ

**ಬೆಂಗಳೂರು, ಜು.27:** ಪಶುವೈದ್ಯಾಧಿಕಾರಿಗಳ ನೇಮಕಾತಿಗೆ ಸಂಬಂಧಿಸಿದಂತೆ ವಿವಿಧ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ವರದಿ ಹಾಗೂ ದೂರಿನ ಹಿನ್ನೆಲೆಯನ್ನು ಗಂಭೀರವಾಗಿ ಪರಿಗಣಿಸಿರುವ ಕರ್ನಾಟಕ ಲೋಕಸೇವಾ ಆಯೋಗವು ನಿನ್ನೆ ತುರ್ತು ಸಭೆ ನಡೆಸಿ, ಪಶುವೈದ್ಯಾಧಿಕಾರಿಗಳ ನೇಮಕಾತಿಯ ಅಂತಿಮ ಆಯ್ಕೆ ಪಟ್ಟಿಗೆ ತಾತ್ಕಾಲಿಕ ತಡೆ ನೀಡಿದೆ.

ಸಾರ್ವಜನಿಕರ ವಿಶ್ವಾಸವನ್ನು ಕಾಪಾಡುವ ಉದ್ದೇಶದಿಂದ ಹಾಗೂ ಆರೋಪಗಳ ಗಂಭೀರತೆಯನ್ನು ಮನಗಂಡು ಆಯೋಗವು ಮಹತ್ವದ ನಿರ್ಧಾರ ಕೈಗೊಂಡಿದೆ ಎಂದು ಆಯೋಗದ ಕಾರ್ಯದರ್ಶಿ ಕೆ. ಜ್ಯೋತಿ ತಿಳಿಸಿದ್ದಾರೆ

## ಪತ್ರಿಕಾ ದಿನಾಚರಣೆ – ಪ್ರಶಸ್ತಿ ಪ್ರದಾನ ಸಮಾರಂಭ

# ಪತ್ರಿಕೋದ್ಯಮ ಜನರ ಧ್ವನಿಯಾಗಲಿ: ಇಕ್ರಮ್ ಶರೀಫ್ ಅಭಿಮತ




**ಕಲಬುರಗಿ, ಜು.27:** ಪ್ರಜಾಪ್ರಭುತ್ವದ ಯಶಸ್ವಿಗೆ ಪತ್ರಿಕೋದ್ಯಮವು ಭದ್ರಬುನಾದಿಯಾಗಿದ್ದು ಪತ್ರಕರ್ತರು ಸರಕಾರ ಮತ್ತು ಜನರ ಮಧ್ಯೆ ಧ್ವನಿಯಾಗಿ ಪತ್ರಿಕೋದ್ಯಮ ರಂಗವು ಸದೃಢವಾಗಿ ಬೆಳೆಯಲಿ ಎಂದು ಕಲಬುರಗಿ ಜಿಲ್ಲಾಧಿಕಾರಿಗಳಾದ ಇಕ್ರಮ್ ಶರೀಫ್ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಲ್ಬುರಗಿ ಜಿಲ್ಲಾ ಘಟಕದ ವತಿಯಿಂದ ಸೋಮವಾರ (ಜುಲೈ 27ರಂದು) ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆ ಹಾಗೂ ವಿ. ಎನ್ ಕಾಗಲಕರ್ ಪ್ರಶಸ್ತಿ ಹಾಗೂ ವಾರ್ಷಿಕ ಪ್ರಶಸ್ತಿ ಪುರಸ್ಕೃತರನ್ನು ಸನ್ಮಾನಿಸಿ ಮಾತನಾಡಿ ಪತ್ರಕರ್ತರು ಸರಕಾರಕ್ಕೆ ನೀತಿ ನಿರೂಪಣೆ ಮಾಡಲು ಸಾರ್ವಜನಿಕರ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲುತ್ತಾರೆ. ಸಾಂಪ್ರದಾಯಿಕ ಪತ್ರಿಕೋದ್ಯಮವು ಇಂದಿನ ಸಾಮಾಜಿಕ ಮಾಧ್ಯಮಗಳ ಭರಾಟೆಯ ನಡುವೆ ಸುದ್ದಿಯ ಪಾವಿತ್ರ್ಯತೆ ಯನ್ನು ತಿಳಿಯಲು ಅತ್ಯಂತ ಸಹಕಾರಿ ಯಾಗಿದೆ ಹಾಗೂ ನಾಯಕತ್ವ ನಿರ್ಮಾಣಕ್ಕೆ ಪ್ರೇರಣೆ ನೀಡುತ್ತದೆ. ಪಾರದರ್ಶಕ ಮತ್ತು ವಿಶ್ವಾಸಾರ್ಹ ಸುದ್ದಿಯನ್ನು ಜನರಿಗೆ ಮುಟ್ಟಿಸುವ ಪತ್ರಕರ್ತರ ಸೇವೆ ಅತ್ಯಂತ ಪವಿತ್ರ ವಾಗಿದೆ. ಪತ್ರಕರ್ತರು ಕೇವಲ ಪ್ರಶಂಸೆಗೆ ಮಾತ್ರ ಮೀಸಲಾಗದೆ ಕ್ರಿಯಾತ್ಮಕ ವಿಮರ್ಶೆ ಮತ್ತು ಟೀಕೆ ಟಿಪ್ಪಣಿಗಳನ್ನು ಮಾಡಿ ಜಿಲ್ಲಾಡಳಿತಕ್ಕೆ ಮಾರ್ಗದರ್ಶನ ನೀಡುವಂತಾದರೆ ಪತ್ರಿಕೋದ್ಯಮ ಸದೃಢವಾಗಿ ಬೆಳೆಯಲು ಸಾಧ್ಯ. ಪತ್ರಕರ್ತರು ಹಾಗೂ ಜಿಲ್ಲಾಡಳಿತ ಪೂರಕವಾಗಿ ಕೆಲಸ ಮಾಡಿದರೆ ಕ್ಷಿಪ್ರವಾಗಿ ಪ್ರಗತಿ ಹೊಂದಲು ಸಾಧ್ಯವಾಗುತ್ತದೆ. ಅದಕ್ಕಾಗಿ ಪತ್ರಿಕೋದ್ಯಮ ಸದೃಢವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ನಗರ ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್ ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಅಧ್ಯಕ್ಷರಾದ ಶಿವಾನಂದ ತಗಡೂರು ಮಾತನಾಡಿ ಶುಭ ಕೋರಿದರು.

ಕಾರ್ಯಕ್ರಮದಲ್ಲಿ ಕಾರ್ಯ ನಿರ್ವಹಿತ ಪತ್ರಕರ್ತರ ಸಂಘದ ಮಾಜಿ ಉಪಾಧ್ಯಕ್ಷರಾದ ಭವಾನಿಸಿಂಗ್ ಠಾಕೂರ್, ಪತ್ರಕರ್ತರಾದ ಸತೀಶ್ ಜೇವರ್ಗಿ, ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷರಾದ ಅರುಣ್ ಕುಮಾರ್ ಕದಂ, ಕಾರ್ಯನಿರತ ಪತ್ರಕರ್ತರ ರಾಜ್ಯ ಸಮಿತಿಯ ಮಾಜಿ ಸದಸ್ಯ ದೇವೇಂದ್ರಪ್ಪ ಕಪನೂರ ಉಪಸ್ಥಿತರಿದ್ದರು. ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಬಾಬುರಾವ್ ಯಡ್ರಾಮಿ ಅಧ್ಯಕ್ಷತೆ ವಹಿಸಿದ್ದರು. ಸಂಘದ ಪ್ರಧಾನ ಕಾರ್ಯದರ್ಶಿ ಭೀಮಾಶಂಕರ ಫಿರೋಜಾಬಾದ್ ಸ್ವಾಗತಿಸಿದರು. ರಾಜಕುಮಾರ ಉದನೂರು ನಿರೂಪಣೆ ಮಾಡಿದರು.

ರಾಚಪ್ಪ ಜಂಬಗಿ ಪ್ರಶಸ್ತಿ ಪುರಸ್ಕೃತರ ಪರಿಚಯ ಮಾಡಿದರು. ಬಾಬುರಾವ್ ಕೋಬಾಳ ಮತ್ತು ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ದೇವೇಂದ್ರಪ್ಪ ಅವಂಟಿ ಧನ್ಯವಾದವಿತ್ತರು. ಕಾರ್ಯಕ್ರಮದಲ್ಲಿ ಗಣ್ಯರು ಹಾಗೂ ಪತ್ರಕರ್ತರ ಕುಟುಂಬ ಸದಸ್ಯರು ಪಾಲ್ಗೊಂಡಿದ್ದರು. ಪತ್ರಕರ್ತರಾದ ಪ್ರಭಾಕರ ಜೋಶಿ, ಚಂದ್ರಕಾಂತ ಹುಣಸಗಿ ಪ್ರವೀಣ ರೆಡ್ಡಿ, ದೇವೇಂದ್ರಪ್ಪ ಅವಂಟಿ, ಚಂದ್ರಶೇಖರ

> ಆಧುನಿಕ ತಂತ್ರಜ್ಞಾನ ಮತ್ತು ಸಾಮಾಜಿಕ ಜಾಲತಾಣಗಳ ಬೆಳವಣಿಗೆಗಳಿಂದ ಅತ್ಯಂತ ವೇಗವಾಗಿ ಎಲ್ಲ ಮಾಹಿತಿ ಎಲ್ಲ ಜನರಿಗೆ ಹರಡುತ್ತಿರುವುದರಿಂದ ಪತ್ರಕರ್ತರು ಹಾಗೂ ಪೊಲೀಸರಿಗೆ ದೊಡ್ಡ ಸವಾಲಾಗಿದೆ. ಯಾವುದು ಸತ್ಯ, ಯಾವುದು ಸುಳ್ಳು, ಯಾವುದು ತಿರುಚಿದ ಸುದ್ದಿ,ಯಾವುದು ಡೀಪ್ ಫೇಕ್ ಸುದ್ದಿ ಎಂಬುದನ್ನು ವರ್ಗೀಕರಣ ಮಾಡಲು ಕಷ್ಟವಾದ ಸಂದರ್ಭದಲ್ಲಿ ಸತ್ಯ ಮತ್ತು ನಂಬಿಕೆಯಿಂದ ಕೆಲಸ ಮಾಡುವ ಹೊಣೆಗಾರಿಕೆ ಇಬ್ಬರ ಮೇಲಿದ್ದು ಅಂತಹ ಸವಾಲನ್ನು ಮೆಟ್ಟಿ ನಿಲ್ಲಬೇಕಾಗಿದೆ. ಸುಳ್ಳು ಸುದ್ದಿ ವಿರುದ್ಧ ಹಾಗೂ ಸತ್ಯಕ್ಕಾಗಿ ಒಟ್ಟಾಗಿ ಕೆಲಸ ಮಾಡುವ ಜವಾಬ್ದಾರಿ ಪತ್ರಕರ್ತರು ಹಾಗೂ ಪೊಲೀಸರು ನಿರ್ವಹಿಸಬೇಕಾಗಿದೆ.
>
> **– ಡಾ. ಶರಣಪ್ಪ ಎಸ್. ಡಿ**
> ನಗರ ಪೊಲೀಸ್ ಆಯುಕ್ತರು, ಕಲಬುರಗಿ.

> ಪತ್ರಕರ್ತರ ಮತ್ತು ಪೊಲೀಸರ ಕರ್ತವ್ಯ ಸಮಾನವಾಗಿದ್ದು ರಾಷ್ಟ್ರ ಕಟ್ಟುವ ಕೆಲಸದಲ್ಲಿ ಬಲು ದೊಡ್ಡ ಜವಾಬ್ದಾರಿಯನ್ನು ನಿರ್ವಹಿಸುತ್ತಿದ್ದಾರೆ. ಸಾಮಾಜಿಕ ಮಾಧ್ಯಮಗಳ ಪ್ರಸ್ತುತ ಸಂದರ್ಭದಲ್ಲಿ ಸತ್ಯ ತಿಳಿಯಲು ಪತ್ರಿಕೆ ಮಹತ್ವದ ಮಾಧ್ಯಮವಾಗಿದ್ದು ಪತ್ರಿಕೆಗಳು ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡು ಬೆಳೆಯುತ್ತಿರುವುದು ಶ್ಲಾಘನೀಯ.
>
> **– ಅಡ್ಡೂರು ಶ್ರೀನಿವಾಸಲು**
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಕಲಬುರಗಿ.

> ಪತ್ರಕರ್ತರಾಗಲು ಬದ್ಧತೆ ಮುಖ್ಯವಾಗಿದ್ದು ಘನತೆ ಗೌರವದಿಂದ ಕೆಲಸ ಮಾಡಿ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಲು ಸಾಧ್ಯ. ನಾಡಿನ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಪತ್ರಕರ್ತರು ಹಗಲಿರುಳು ಶ್ರಮಿಸುತ್ತಿದ್ದು ಅವರ ಸೇವೆ ಅನನ್ಯವಾದದು. ಕಲಬುರಗಿ ಜಿಲ್ಲೆ ಈಗ ರಾಜಕೀಯ ಶಕ್ತಿ ಕೇಂದ್ರವಾಗಿದ್ದು ಮುಖ್ಯಮಂತ್ರಿಗಳು, ಮಂತ್ರಿಗಳ ಆಯ್ಕೆ ಹಾಗೂ ಇತರ ರಾಜ್ಯಗಳ ರಾಜಕೀಯ ಭವಿಷ್ಯವನ್ನು ನಿರ್ಣಯಿಸುವ ಕೇಂದ್ರವಾಗಿ ಭವಿಷ್ಯವನ್ನು ನಿರ್ಣಯಿಸುವ ಪ್ರಮುಖ ಜವಾಬ್ದಾರಿ ವಹಿಸುತ್ತಿರುವ ನಾಯಕರನ್ನು ಹೊಂದಿರುವುದರಿಂದ ಎಲ್ಲವೂ ಅಭಿವೃದ್ಧಿಗೆ ಪೂರಕವಾಗಿ ಬಳಕೆಯಾಗಬೇಕು.
>
> **– ಶಿವಾನಂದ ತಗಡೂರು**
> ರಾಜ್ಯಾಧ್ಯಕ್ಷರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ

# ಗುರು ತೇಗ್ ಬಹಾದ್ದೂರ್ ಬಲಿದಾನ ಸಾಹಸ, ಸೇವೆ, ಕರುಣೆಯ ಪ್ರತೀಕ: ಥಾವರಚಂದ್ ಗೆಹ್ಲೋತ್



**ಬೀದರ್, ಜು. 27:** ಗುರು ತೇಗ್ ಬಹಾದ್ದೂರ್ ಅವರ ಬಲಿದಾನವೂ ಸಾಹಸ, ಸೇವೆ ಮತ್ತು ಕರುಣೆಯ ಪ್ರತೀಕವಾಗಿದ್ದು, ಅವರ ಜೀವನ ಎಲ್ಲರಿಗೂ ಸ್ಫೂರ್ತಿ ನೀಡುವಂಥದ್ದು ಎಂದು ರಾಜ್ಯಪಾಲ ಥಾವರಚಂದ್ ಗೆಹಲೋತ್ ಹೇಳಿದರು. ಕೇಂದ್ರ ಸಂಸ್ಕೃತಿ ಸಚಿವಾಲಯ, ಸಾಹಿತ್ಯ ಅಕಾಡೆಮಿ ಹಾಗೂ ಗುರುದ್ವಾರ ನಾನಕ್ ಝೀರಾ ಸಾಹೀಬ್ ವ್ಯವಸ್ಥಾಪನಾ ಮಂಡಳಿ ಸಹಯೋಗದಲ್ಲಿ ನಗರದ ಮೈಲೂರಿನ ಗುರುನಾನಕ್ ದೇವ್ ಎಂಜಿನಿಯರಿಂಗ್ ಕಾಲೇಜಿನ ಸಭಾಂಗಣದಲ್ಲಿ ಏರ್ಪಡಿಸಿದ್ದ ಗುರು ತೇಗ್ ಬಹಾದ್ದೂರ್ ಅವರ 350ನೇ ಹುತಾತ್ಮ ದಿನಾಚರಣೆ ಹಾಗೂ ಸಿಖ್ ಪರಂಪರೆಯಲ್ಲಿ ಹುತಾತ್ಮರು ಕುರಿತ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಗುರು ತೇಗ್ ಬಹಾದ್ದೂರ್ ಅವರು ಅದ್ವಿತೀಯವಾದ ಕೆಲಸ ಮಾಡಿದ್ದಾರೆ. ಅವರು ಧರ್ಮ ಹಾಗೂ ಅದರ ಶ್ರದ್ಧಾಳುಗಳ ರಕ್ಷಣೆಗೆ ತಮ್ಮ ಬಲಿದಾನ ನೀಡಿದ್ದಾರೆ. ಈ ಕಾರಣಕ್ಕಾಗಿಯೇ ಅವರಿಗೆ 'ಹಿಂದವಿ ಚಾದರ್' ಎಂಬ ಹೆಸರಿನಿಂದಲೂ ಕರೆಯಲಾಗುತ್ತದೆ ಎಂದು ನೆನಪಿಸಿದರು. ತೇಗ್ ಬಹಾದ್ದೂರ್ ಅವರು ಸಾಹಸ, ಸೇವೆ, ತ್ಯಾಗಕ್ಕೆ ಅದ್ಭುತ ಉದಾಹರಣೆ. ಅವರ ಬಲಿದಾನವೂ ಭಾರತದ ಆಧ್ಯಾತ್ಮ ವಲಯದ ಅತಿದೊಡ್ಡ ಜೀವಂತ ಸಾಕ್ಷಿ. ಇಡೀ ವಿಶ್ವ ಅನೇಕ ಪ್ರಕಾರದ ಹಿಂಸೆ, ಅಸಹಿಷ್ಣುತೆ ನಡುವೆ ತೊಳಲಾಡುತ್ತಿದೆ. ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದೆ. ಇಂಥ ಸಂದರ್ಭದಲ್ಲಿ ಗುರು ತೇಗ್ ಬಹಾದ್ದೂರ್ ಅವರ ಸಂದೇಶಗಳು ಹೆಚ್ಚು ಪ್ರಸ್ತುತ ಎನಿಸುತ್ತವೆ ಎಂದು ತಿಳಿಸಿದರು.

ಸಿಖ್ ಧರ್ಮದಲ್ಲಿ ತ್ಯಾಗಕ್ಕೆ ವಿಶೇಷ ಸ್ಥಾನವಿದೆ. ಅನ್ಯಾಯ, ಅತ್ಯಾಚಾರ, ಅಧರ್ಮದ ವಿರುದ್ಧ ಸಿಡಿದೇಳುವಂತೆ ಹೇಳುತ್ತದೆ. ಸೇವೆ, ಕರುಣೆ, ಲೋಕಕಲ್ಯಾಣವೇ ಸಾಧನೆಯ ಮಾರ್ಗವೆಂದು ಸಿಖ್ಖರು ನಂಬಿದ್ದಾರೆ. ಸಿಖ್ ಪರಂಪರೆಯಲ್ಲಿ ಸೇವೆಗೆ ವಿಶೇಷ ಸ್ಥಾನ ಹಾಗೂ ಅದು ಇಡೀ ವಿಶ್ವಕ್ಕೆ ಅನುಕರಣೀಯವಾಗಿದೆ ಎಂದು ಹೇಳಿದರು.

ಇಡೀ ರಾಷ್ಟ್ರ ಗುರು ತೇಗ್ ಬಹಾದ್ದೂರ್ ಅವರ 350ನೇ ಹುತಾತ್ಮ ದಿನ ಆಚರಿಸುತ್ತಿರುವ ಸಂದರ್ಭದಲ್ಲಿ ಈ ಕಾರ್ಯಕ್ರಮ ಏರ್ಪಡಿಸಿರುವುದು ಶ್ಲಾಘನಾರ್ಹ. ಧಾರ್ಮಿಕ ಸ್ವಾತಂತ್ರ್ಯ, ಮನುಷ್ಯತ್ವದ ಶ್ರೇಷ್ಠತೆ ಎತ್ತಿ ಹಿಡಿಯುವುದು, ಸಾಂವಿಧಾನಿಕ ಮೌಲ್ಯಗಳ ಪುನರ್ ಮನನಕ್ಕೂ ಇದು ವೇದಿಕೆಯಾಗಿದೆ. ಇದಕ್ಕಾಗಿ ಭಾರತ ಸರ್ಕಾರದ ಸಂಸ್ಕೃತಿ ಸಚಿವಾಲಯವು ಅಭಿನಂದನಾರ್ಹ ಕೆಲಸ ಮಾಡಿದೆ ಎಂದರು.

ಭಾರತದ ಸಮೃದ್ಧ ಸಂಸ್ಕೃತಿ, ಪರಂಪರೆಯ ಕುರಿತು ಅಕಾಡೆಮಿಕ್ ಚರ್ಚೆಗಳಿಗೆ ಈ ರೀತಿಯ ಕಾರ್ಯಕ್ರಮಗಳ ಮೂಲಕ ಪ್ರೋತ್ಸಾಹ ಕೊಟ್ಟಿರುವುದು ಸ್ತುತ್ಯಾರ್ಹ. ಸಾಹಿತ್ಯ ಅಕಾಡೆಮಿ ವಿವಿಧ ವಿಷಯಗಳ ತಜ್ಞರನ್ನು ಒಂದೇ ವೇದಿಕೆಗೆ ಕರೆಸಿ, ಪ್ರೇರಣಾದಾಯಕ ವಿಷಯಗಳ ಕುರಿತು ಚರ್ಚೆಗೆ ಅವಕಾಶ ಕಲ್ಪಿಸಿರುವುದು ಸ್ವಾಗತಾರ್ಹ ಎಂದು ಮೆಚ್ಚುಗೆ ಸೂಚಿಸಿದರು.

ಧರ್ಮದ ನಿಜವಾದ ಅರ್ಥ ಮಾನವೀಯತೆಯ ರಕ್ಷಣೆವಾಗಿದೆ. ತ್ಯಾಗ ಸರ್ವಶ್ರೇಷ್ಠವಾದುದು. ಸಾಮಾಜಿಕ ಸಾಮರಸ್ಯದ ಕುರಿತು ಮಾತನಾಡುವಾಗ ಗುರುದ್ವಾರಗಳ 'ಲಂಗರ್' ಪರಂಪರೆ ದೊಡ್ಡ ನಿದರ್ಶನ. ಸಂವಿಧಾನದ ಮೌಲ್ಯಗಳು, ಧಾರ್ಮಿಕ ನಂಬುಗೆಗಳು, ಸಾಮಾಜಿಕ ಸಾಮರಸ್ಯ, ರಾಷ್ಟ್ರೀಯ ಏಕತೆ, ಸೇವಾ ಮನೋಭಾವದೊಂದಿಗೆ ದೇಶ ಕಟ್ಟಲು ಕಟಿಬದ್ಧರಾಗಬೇಕು ಎಂದು ಸಲಹೆ ನೀಡಿದರು.

ಶ್ರೀ ನಾನಕ್ ಝೀರಾ ಸಾಹೇಬ್ ಫೌಂಡೇಶನ್ ಅಧ್ಯಕ್ಷ ಸರ್ದಾರ್ ಬಲಬೀರ್ ಸಿಂಗ್, ಲೇಖಕ ಸರ್ದಾರ್ ಮನಮೋಹನ್ ಸಿಂಗ್ ಉಪಸ್ಥಿತರಿದ್ದರು. ಕೇಂದ್ರ ಸಾಹಿತ್ಯ ಅಕಾಡೆಮಿಯ ಕಾರ್ಯದರ್ಶಿ ವರುಣ್ ಗುಲಾಟಿ ಸ್ವಾಗತಿಸಿದರು. ಸಾಹಿತ್ಯ ಅಕಾಡೆಮಿ ಪಂಜಾಬಿ ಸಲಹಾ ಮಂಡಳಿಯ ಸಂಚಾಲಕ ರವೇಲ್ ಸಿಂಗ್ ಕಾರ್ಯಕ್ರಮ ನಡೆಸಿಕೊಟ್ಟರು. ಗುರುನಾನಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ರೇಷ್ಮಾ ಕೌರ್ ವಂದಿಸಿದರು. ಕಾರ್ಯಕ್ರಮಕ್ಕೂ ಮುನ್ನ ರಾಜ್ಯಪಾಲರು ನಗರದ ಗುರುದ್ವಾರಕ್ಕೆ ಭೇಟಿ ಕೊಟ್ಟು, ದರ್ಶನ ಪಡೆದರು.

ಬೀದರ್ ನಗರ ಆಧ್ಯಾತ್ಮದ ಪ್ರತೀಕ: ಕರ್ನಾಟಕವು ಸಂತರು, ಮಹಾಪುರುಷರ ನಾಡು. ಬಸವೇಶ್ವರರು, ಕನಕದಾಸರು, ಪುರಂದರದಾಸರು ಸೇರಿದಂತೆ ಅನೇಕ ಸಂತರು ಸೇವೆ, ಸಾಮಾಜಿಕ ಸಮಾನತೆಯ ಸಂದೇಶಗಳನ್ನು ಕೊಟ್ಟಿದ್ದಾರೆ. ಬೀದರ್ ಕರ್ನಾಟಕದ ಐತಿಹಾಸಿಕ ನಗರದ ಜೊತೆಗೆ ಭಾರತದ ಆಧ್ಯಾತ್ಮದ ಪ್ರತೀಕವಾಗಿದೆ. ಇದೇ ಪವಿತ್ರ ಸ್ಥಳದಲ್ಲಿ ಗುರುನಾನಕರು ತಮ್ಮ ಅದ್ಭುತ ಶಕ್ತಿಯಿಂದ ಬರದಲ್ಲಿ ನೀರಿನ ಬವಣೆ ನೀಗಿಸಿ, ಜನೋಪಕಾರದ ಕೆಲಸ ಮಾಡಿದ್ದರು' ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋತ್ ನೆನೆದರು.

# ಬಿನ್ನವತ್ತಳೆ ಕೃತಿಯ ಮರು ಪ್ರಕಟಣೆಗೆ ಕ್ರಮ ಮುದ್ರಣ ವೆಚ್ಚಕ್ಕೆ ದಾನಿಗಳ ನೆರವಿಗೆ ಮನವಿ

> 1997ರಲ್ಲಿ ಪ್ರಕಟಗೊಂಡ ರಾಮಕ್ಷತ್ರಿಯ ಸಮಾಜದ ಪ್ರಕಟಿತ ಬರಹಗಳನ್ನೊಳಗೊಂಡ ಸಂಪಾದಿತ ಕೃತಿ "ಬಿನ್ನವತ್ತಳೆ" ಹಾಗೂ ಕುಟುಂಬ ದೇವಸ್ಥಾನ, ಕುಲದೇವರು ಮತ್ತು ಸಂಘಟನೆಗಳ ವಿಳಾಸದ ಡೈರೆಕ್ಟರಿ – 2026 ಪುನರ್ ಮುದ್ರಣಕ್ಕೆ ರೂ 10ಲಕ್ಷ ವೆಚ್ಚ– ಸಂಘ ಸಂಸ್ಥೆಗಳು, ಬಂಧು ಮಿತ್ರರು, ದಾನಿಗಳ ನೆರವು. ರಾಮಕ್ಷತ್ರಿಯ ಇತಿಹಾಸ ಮ್ಯೂಸಿಯಂ ಸ್ಥಾಪನೆಗೆ ಶಿವರಾಮ ಕಾಸರಗೋಡು ಸಮಾನ ಮನಸ್ಕರ ತೀರ್ಮಾನ

ರಾಮಕ್ಷತ್ರಿಯ ಸಮಾಜದ ಸಾಹಿತ್ಯ, ಸಾಂಸ್ಕೃತಿಕ ಮತ್ತು ಇತಿಹಾಸದ ಚಾರಿತ್ರಿಕ ಹಿನ್ನೆಲೆಯ ಕುರಿತು ಮಹತ್ವದ ದಾಖಲೆಗಳನ್ನೊಳಗೊಂಡ ಸಂಪಾದಿತ ಕೃತಿಯಲ್ಲಿ ಸರಕಾರದ ದಾಖಲೆ ಪತ್ರಗಳು, ಸಂಶೋಧನಾ ಲೇಖನಗಳು, ರಾಮಕ್ಷತ್ರಿಯ ಸಮುದಾಯದ ಬಗ್ಗೆ ಜನಾಂಗೀಯ ಅಧ್ಯಯನ ಬರಹ, ಸಾಹಿತ್ಯವನ್ನೊಳ ಗೊಂಡು 1997ರ ವರೆಗಿನ ವಿವಿಧ ಪ್ರಕಟಣಾ ಕೃತಿಗಳ ಸಮಗ್ರ ಬರಹಗಳನ್ನು ಸಂಪಾದಿಸಿರುವ "ಬಿನ್ನವತ್ತಳೆ" ಕೃತಿಯು ಶಿವರಾಮ ಕಾಸರಗೋಡು ಸಂಪಾದಕತ್ವದಲ್ಲಿ 1997 ನವಂಬರ್ 9 ರಂದು ಬಿಡುಗಡೆಗೊಂಡಿತ್ತು. ಈ ಬಿನ್ನವತ್ತಳೆ ಸಂಪಾದಿತ ಕೃತಿಯ ಪ್ರಕಟಣಾ ಖರ್ಚು ಸುಮಾರು 10ಲಕ್ಷ ರೂಪಾಯಿ ವೆಚ್ಚದಲ್ಲಿ ಪುನರ್ ಮುದ್ರಣವನ್ನು ಕೈಗೊಳ್ಳಲಾಗಿದೆ.

ರಾಮಕ್ಷತ್ರಿಯ ಸಮಾಜದ ಕುಟುಂಬ ದೇವಸ್ಥಾನ, ಕುಲದೇವರು ಮತ್ತು ಸಂಘಟನೆಗಳ ನಡುವಣ ಸಂಪರ್ಕ ಸಂವಹನಕ್ಕೆ ಮಾತ್ರವಲ್ಲದೇ, ಸಮುದಾಯದವರು ವಿವಿಧ ಕ್ಷೇತ್ರಗಳಲ್ಲಿ ರಚನಾತ್ಮಕವಾಗಿ ಸೇವೆ ಸಲ್ಲಿಸುತ್ತಿರುವವರ ಸಹಯೋಗ,ಸಹಕಾರ ಸಮನ್ವಯ ಸಾದಿಸಲು 2026 ಅಕ್ಟೋಬರ್/ ನವಂಬರ್ ತಿಂಗಳಲ್ಲಿ ದುಬೈ,ಶಾರ್ಜಾ, ಕುವೈಟ್ ಹಾಗೂ ಕೇರಳ ಕರ್ನಾಟಕ ಮಹಾರಾಷ್ಟ್ರ ರಾಜ್ಯದ ಅಲ್ಲಿನ ಸಮಾಜ ಸೇವಾ ಸಂಘಟನೆಗಳು ದಾನಿಗಳು ಪೋಷಕರು ಉದ್ಯಮಿಗಳ ನೆರವಿನಿಂದ ಬಿನ್ನವತ್ತಳೆ ಕೃತಿ ಮತ್ತು ವಿಳಾಸದ ಡೈರೆಕ್ಟರಿಯ ಕುರಿತು ಪ್ರಕಟಣಾ ವೆಚ್ಚದ ಧನ ಸಂಗ್ರಹದ ಬಗ್ಗೆ ಹಾಗೂ ಈ ಎರಡು ಕೃತಿಗಳ ಬಿಡುಗಡೆಗೆ ಆಯಾಯಾ ಪ್ರದೇಶಗಳಲ್ಲಿ ಸ್ಥಳ ಮತ್ತು ದಿನಾಂಕವನ್ನು ನಿಗದಿ ಪಡಿಸಲು ದುಂಡು ಮೇಜಿನ ಪರಿಷತ್ತು ಸಭೆಯನ್ನು ಕರೆಯಲಾಗುದು. ಎಂದು ಕಾಸರಗೋಡು ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ಕಾಸರಗೋಡು ಕನ್ನಡ ಗ್ರಾಮದ ಸಂಸ್ಥಾಪಕ ಅಧ್ಯಕ್ಷ ಶಿವರಾಮ ಕಾಸರಗೋಡು ಸರ್ವಜನರ ಸಹಕಾರವನ್ನು ವಿನಂತಿಸಿಕೊಂಡಿದ್ದಾರೆ.ಈ ಪ್ರಕಟಣಾ ಯೋಜನೆಯಿಂದ ಉಳಿಕೆಯಾದ ಹಣದಿಂದ ರಾಮಕ್ಷತ್ರಿಯ ಇತಿಹಾಸ ಮ್ಯೂಸಿಯಂ ಇದರ ನಿರ್ಮಾಣದ ಕಾರ್ಯ ಯೋಜನೆಗಳಿಗೆ ವಿನಿಯೋಗಿಸಲಾಗುವುದು.

ಶಿವರಾಮ ಕಾಸರಗೋಡು ಸಂಪಾದ ಕತ್ವದಲ್ಲಿ 1997, 1998, 2004 ರಲ್ಲಿ ವಿಳಾಸದ ಡೈರೆಕ್ಟರಿಯ ಮೂರು ಆವೃತ್ತಿಯಾಗಿ ಪ್ರಕಟಗೊಂಡಿದ್ದು, ಇದೀಗ 4ನೇ ಆವೃತ್ತಿಯಾಗಿ ಪ್ರಕಟವಾಗುವ ರಾಮಕ್ಷತ್ರಿಯ ಕುಟುಂಬ ದೇವಸ್ಥಾನ,ಕುಲದೇವರು ಮತ್ತು ಸಂಘಟನೆಗಳ ವಿಳಾಸದ ಡೈರೆಕ್ಟರಿ –2026 ಹಾಗೂ ಬಿನ್ನವತ್ತಳೆ ಪರಿಸ್ಕೃತ ಆವೃತ್ತಿಯು ಈ ಸಂದರ್ಭದಲ್ಲಿ ಲೋಕಾರ್ಪಣೆಗೊಳ್ಳಲಿದೆ.

ಸಮಾಜದ ಅಭಿವೃದ್ಧಿಯಾಗಬೇಕಾದರೆ ಪ್ರಧಾನವಾಗಿ ನಾವು ಆರಾಧಿಸಿಕೊಂಡು ಬರುತ್ತಿರುವ ಕುಟುಂಬ ದೇವಸ್ಥಾನ,ಕುಲದೇವರ ಮನೆಗಳ ಪುನರುಸ್ಥಾನವಾಗಬೇಕು. ಇದಕ್ಕಾಗಿ ಶ್ರದ್ದೆ,ಭಕ್ತಿಯಿಂದ ಸೇವೆ ಸಲ್ಲಿಸಿದಾಗ ಮಾತ್ರ ಸಮಾಜವು ಉತ್ತುಂಗ ಸ್ಥಿತಿಗೆ ಬರುತ್ತದೆ. ಈ ನಿಟ್ಟಿನಲ್ಲಿ ಸಮುದಾಯ ಸೇವೆ ಮತ್ತು ಕುಟುಂಬ ದೇವಸ್ಥಾನಗಳಲ್ಲಿ ಕ್ರಿಯಾತ್ಮಕವಾಗಿ ಶ್ರದ್ದೆಯಿಂದ ತೊಡಗಿಸಿಕೊಂಡು ಸಮಾಜದ ಒಗ್ಗಟ್ಟು,ಐಕ್ಯತೆ ಹಾಗೂ ಸಮಗ್ರ ಅಭಿವೃದ್ಧಿಯ ಹಿತದೃಷ್ಟಿಯಿಂದ ಸಮಾಜದ ಸಂಘಟನೆಗಳನ್ನು ಒಗ್ಗೂಡಿಸುವುದು ಮತ್ತು ಪರಸ್ಪರ ಸಂಪರ್ಕವಿರಿಸಿಕೊಳ್ಳುವ ಉದ್ದೇಶದಿಂದ ಅಂತರ ರಾಷ್ಟ್ರ,ಅಂತರರಾಜ್ಯ ಜಿಲ್ಲಾ, ತಾಲೂಕು, ಗ್ರಾಮಮಟ್ಟದಲ್ಲಿ ಕಾರ್ಯವೆಸಗುತ್ತಿರುವ ಕುಟುಂಬ ದೇವಸ್ಥಾನ, ಕುಲದೇವರು ಮತ್ತು ಸಂಘಟನೆಗಳ ಸಮಗ್ರ ಹೆಸರು,ವಿಳಾಸಗಳು, ಪದಾಧಿಕಾರಿಗಳ ಮೊಬೈಲ್ ಸಂಖ್ಯೆಗಳು ಹಾಗೂ ಅನುವಂಶಿಕ ಮೊಕ್ತೇಸರರು, ಆಡಳಿತ ಮೊಕ್ತೇಸರರು, ಧರ್ಮದರ್ಶಿಗಳು, ಆಡಳಿತೆದಾರರು, ಕುಟುಂಬ ದೇವಸ್ಥಾನ,ಕುಲದೇವರ ಮನೆಯ ಮುಖ್ಯಸ್ಥರು ಅಥವಾ ಅಧ್ಯಕ್ಷ ಕಾರ್ಯದರ್ಶಿ ಕೋಶಾಧಿಕಾರಿಯ ಹೆಸರು, ಮನೆ ಮತ್ತು ಕಚೇರಿಯ ವಿಳಾಸ, (ಪರವೂರಿನಲ್ಲಿ ನೆಲೆಸಿದ್ದರೆ ಅವರ ಸಂಪರ್ಕ ವಿಳಾಸ,ವಾಟ್ಸ್ ಪ್, ಮೊಬೈಲ್, ಇ–ಮೇಲ್ ಸಂಖ್ಯೆಯನ್ನು ಸಂಗ್ರಹಿಸಲಾಗುತ್ತಿದೆ. ರಾಮಕ್ಷತ್ರಿಯ ಸಮಾಜದ ಕುಟುಂಬ ದೇವಸ್ಥಾನಗಳು, ಕುಲದೇವರು ಮತ್ತು ಸಂಘಟನೆಗಳ ಸಹಭಾಗಿತ್ವದಲ್ಲಿ ಸಮಾಜದ ಆರ್ಥಿಕ,ಸಾಮಾಜಿಕ, ರಾಜಕೀಯ, ಧಾರ್ಮಿಕ, ಶಿಕ್ಷಣ,ಉದ್ಯಮ ವ್ಯವಹಾರ, ಸಹಕಾರ ಸೇವೆ, ಸರಕಾರ ಸೇವೆ, ಸಾಹಿತ್ಯ, ಸಾಂಸ್ಕೃತಿಕ,ಮಾಧ್ಯಮ ಕ್ಷೇತ್ರಗಳಲ್ಲಿ ಕ್ರಿಯಾತ್ಮಕವಾಗಿ ತೊಡಗಿಸಿಕೊಂಡಿರುವ ಮಹನೀಯರೊಂದಿಗೆ ಚಿಂತನಾ ಮಂಥನ ನಡೆಸುವ ಉದ್ದೇಶದಿಂದ ಸಮಾನ ಮನಸ್ಕರ ಒಗ್ಗೂಡುವಿಕೆಯಿಂದ ರಾಮಕ್ಷತ್ರಿಯ ಇತಿಹಾಸ, ಮ್ಯೂಸಿಯಂನ್ನು ಸ್ಥಾಪಿಸಲಾಗುವುದು. ರಾಮಕ್ಷತ್ರಿಯ ಇತಿಹಾಸ ಸಾಂಸ್ಕೃತಿಗೆ ಸಂಬಂಧ ಪಟ್ಟ ದಾಖಲೆ ಪತ್ರಗಳು, ಮುದ್ರಣ ಕೃತಿಗಳು,ಸ್ಮರಣ ಸಂಚಿಕೆ, ಸಮಗ್ರ ಕೃತಿ ಸಂಪುಟಗಳು, ವಿವಿಧ ಲೇಖಕರು, ಬರಹಗಾರರ ಪ್ರಕಟಿಸಿದ ಕೃತಿಗಳನ್ನು ಸಮಗ್ರವಾಗಿ ಸಂಗ್ರಹಿಸಲಾಗುವುದು. ಈ ಎಲ್ಲಾ ಪ್ರಮುಖ ದಾಖಲೆ ಪತ್ರಗಳನ್ನು ಡಿಜಿಟಲೀಕರಣ ಗೊಳಿಸುವ ಉದ್ದೇಶವನ್ನು ಹೊಂದಲಾಗಿದೆ.

# ಸಮಾಜ ಕಾರ್ಯ ಸಂಶೋಧನೆ–ಉತ್ತಮ ಆಡಳಿತಕ್ಕೆ ಬಲ: ಪ್ರೊ.ಬಿ.ಸತ್ಯನಾರಾಯಣ

**ಕಲಬುರಗಿ, ಜು. 27:** ಸಾಮಾಜಿಕ ಕಾರ್ಯ ಕ್ಷೇತ್ರದಲ್ಲಿ ನಡೆಯುವ ಸಂಶೋಧನೆಗಳು ಮತ್ತು ಸಂಶೋಧನಾ ವರದಿಗಳು ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಕಲ್ಯಾಣ ಕಾರ್ಯಕ್ರಮಗಳು ಮತ್ತು ಅಭಿವೃದ್ಧಿ ನೀತಿಗಳನ್ನು ರೂಪಿಸಲು ಅಮೂಲ್ಯ ಮಾಹಿತಿಗಳನ್ನು ಒದಗಿಸುತ್ತವೆ. ಇದರಿಂದ ಉತ್ತಮ ಆಡಳಿತಕ್ಕೆ ಬಲ ಬರುತ್ತದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.



**ಕಲಬುರಗಿ ನಗರದ ಕೇಂದ್ರೀಯ ವಿಶ್ವವಿದ್ಯಾಲಯದ ಆವರಣದಲ್ಲಿ ಸಮಾಜ ಕಾರ್ಯ ವಿಭಾಗದ ವತಿಯಿಂದ ಸಂಶೋಧನೆ, ಬರವಣಿಗೆ ಮತ್ತು ಪ್ರಕಟಣೆ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟನೆಯ ಅಧ್ಯಕ್ಷತೆ ವಹಿಸಿ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ ಅವರು ಮಾತನಾಡಿದರು.**

ನಗರದ ಕೇಂದ್ರೀಯ ವಿಶ್ವವಿದ್ಯಾಲಯದ ಆವರಣದಲ್ಲಿ ಸಮಾಜ ಕಾರ್ಯ ವಿಭಾಗದ ವತಿಯಿಂದ ಸಂಶೋಧನೆ, ಬರವಣಿಗೆ ಮತ್ತು ಪ್ರಕಟಣೆ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟನೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಸರ್ಕಾರಿ ಯೋಜನೆಗಳ ಪ್ರಯೋಜನಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಹಾಗೂ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರುವಲ್ಲಿ ಸಮಾಜ ಕಾರ್ಯ ಸಂಶೋಧಕರು ಮತ್ತು ವೃತ್ತಿಪರರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಇಂತಹ ಸಂಶೋಧನೆಗಳು ಸರ್ಕಾರದ ಉತ್ತಮ ಆಡಳಿತಕ್ಕೆ ಬಲ ತುಂಬುತ್ತವೆ ಎಂದರು.

ಸಮಾಜ ಕಾರ್ಯ ಕ್ಷೇತ್ರದ ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವೃತ್ತಿಪರರು ಗ್ರಾಮ ಸಮೀಕ್ಷೆಗಳು, ಕ್ಷೇತ್ರ ಭೇಟಿ, ದತ್ತಾಂಶ ಸಂಗ್ರಹಣೆ, ಸಮುದಾಯಗಳೊಂದಿಗೆ ಸಂವಹನ ಹಾಗೂ ಸಮುದಾಯ ಆಧಾಯಿರಿತ ಸಂಶೋಧನೆಗಳ ಮೂಲಕ ತಳಮಟ್ಟದ ವಾಸ್ತವಾಂಶ ಗಳನ್ನು ಅರ್ಥಮಾಡಿಕೊಳ್ಳುವಲ್ಲಿ ಅವರು ಪ್ರಮುಖ ಪಾತ್ರ ವಹಿಸುತ್ತಾರೆ. ಹೀಗಾಗಿ ಸಮಾಜ ಕಾರ್ಯ ವಿಭಾಗದ ವಿದ್ಯಾರ್ಥಿಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಸಮಾಜದ ಅಗತ್ಯಗಳಿಗೆ ಸ್ಪಂದಿಸುವ, ನೈತಿಕ ಮೌಲ್ಯಗಳನ್ನು ಒಳಗೊಂಡ ಹಾಗೂ ಸಮಾಜ ಮತ್ತು ರಾಷ್ಟ್ರನಿರ್ಮಾಣಯಿಕ್ಕೆ ಸಹಕಾರಿಯಾಗುವ ಗುಣಮಟ್ಟದ ಸಂಶೋಧನೆಗಳನ್ನು ಕೈಗೊಳ್ಳುವಂತೆ ಅವರು ಕರೆ ನೀಡಿದರು.

ಆಸ್ಟ್ರೇಲಿಯಾದ ಚಾರ್ಲ್ಸ್ ಸ್ಟರ್ಟ್ ವಿಶ್ವವಿದ್ಯಾಲಯದ ಸಮಾಜ ಕಾರ್ಯ ವಿಭಾಗದ ಪ್ರಾಧ್ಯಾಪಕರೂ, ಸಿಯುಕೆಯ ಸಂದರ್ಶಕ ಪ್ರಾಧ್ಯಾಪಕರೂ ಆಗಿರುವ ಪ್ರೊ. ಮನೋಹರ್ ಪವಾರ್ ಅವರು ವಿಶೇಷ ಉಪನ್ಯಾಸ ನೀಡಿದರು. ಸಂಶೋಧನಾ ವಿಧಾನ, ಶೈಕ್ಷಣಿಕ ಬರವಣಿಗೆ, ಪ್ರಕಟಣಾ ನೀತಿಶಾಸ್ತ್ರ ಹಾಗೂ ಪ್ರತಿಷ್ಠಿತ ಸಂಶೋಧನಾ ನಿಯತಕಾಲಿಕೆಗಳಲ್ಲಿ ಗುಣಮಟ್ಟದ ಸಂಶೋಧನಾ ಲೇಖನಗಳನ್ನು ಪ್ರಕಟಿಸುವ ಮಹತ್ವದ ಕುರಿತು ಅವರು ಉಪನ್ಯಾಸ ನೀಡಿದರು. ಸಂಶೋಧನಾ ಸಮಗ್ರತೆಯನ್ನು ಕಾಪಾಡಿಕೊಂಡು ಸಮಾಜಕ್ಕೆ ಉಪಯುಕ್ತವಾಗುವ ಪರಿಣಾಮಕಾರಿ ಶೈಕ್ಷಣಿಕ ಕೃತಿಗಳನ್ನು ರಚಿಸುವಂತೆ ಅವರು ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

ಕಾರ್ಯಕ್ರಮದಲ್ಲಿ ಸಮಾಜ ಹಾಗೂ ವರ್ತನಾ ವಿಜ್ಞಾನ ನಿಕಾಯದ ಡೀನ್ ಪ್ರೊ. ಪವಿತ್ರಾ ಆರ್. ಆಲೂರ್, ಪ್ರೊ. ಚನ್ನವೀರ್ ಆರ್. ಎಂ., ಡಾ. ಚಿತ್ಕಲಾ ವೆಂಕರೆಡ್ಡಿ, ಡಾ. ಎಂ. ಶಿವಮೂರ್ತಿ, ಡಾ. ಹರೀಶ್, ಡಾ. ರವೀಂದರ್ ಕುಮಾರ್ ಹಾಗೂ ಡಾ. ಶ್ರೀನಿವಾಸ್ ಡಿ. ಸೇರಿದಂತೆ ಅಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಉಪಸ್ಥಿತಯಿರಿದ್ದರು. ಡಾ. ಲಕ್ಷ್ಮಣ ಜಿ ಸ್ವಾಗತಿಸಿದರು. ಡಾ. ಎಂ. ಶಿವಮೂರ್ತಿ ವಂದಿಸಿದರು. ಸಮಾಜ ಕಾರ್ಯ ವಿಭಾಗದ ವಿದ್ಯಾರ್ಥಿಗಳಿಂದ ವಂದೇ ಮಾತರಂ ಗಾಯನದೊಂದಿಗೆ ಕಾರ್ಯಕ್ರಮ ಆರಂಭಗೊಂಡು ರಾಷ್ಟ್ರಗೀತೆಯೊಂದಿಗೆ ಸಮಾರೋಪ ಗೊಂಡಿತು.

# 95 ಕೋಟಿ ಕ್ರೈಸ್ತರ ಶಿಕ್ಷಣಕ್ಕೆ 45 ಕೋಟಿ ಮೀಸಲು

**ಕಲಬುರಗಿ, ಜು. 27:** ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿಗೆ ಒಗ್ಗಟ್ಟು ಅಗತ್ಯವಿದ್ದು, ಸರ್ಕಾರದಿಂದ ಬಿಡುಗಡೆಯಾಗಿರುವ 95 ಕೋಟಿ ಅನುದಾನದಲ್ಲಿ 45 ಕೋಟಿ ಶಿಕ್ಷಣಕ್ಕೆ ಮೀಸಲಿಡಲಾಗಿದೆ ಎಂದು ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂಜಯ ಜಾಗಿರದಾರ್ ಹೇಳಿದರು. ನಗರದ ಐವಾನ್–ಎ–ಶಾಹಿ ಹೊಸ ಅಥಿತಿ ಗೃಹ ಸಭಾಂಗಣದಲ್ಲಿ ನಡೆದ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕ್ರಿಶ್ಚಿಯನ್ ಸಮುದಾಯ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಜಾರಿಗೆ ತಂದಿರುವ ವಿವಿಧ ಕ್ಷೇಮಾಭಿವೃದ್ಧಿ ಯೋಜನೆಗಳು ಮತ್ತು ಅನುದಾನಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೆ ತಲುಪಬೇಕು ಎಂದು ತಿಳಿಸಿದರು.




**ಕಲಬುರಗಿಯಲ್ಲಿ ಕ್ರೈಸ್ತ ಸಮುದಾಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂಜಯ ಜಾಗೀರ್‌ದಾರ್ ಅವರು, ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು.**


ಸಮುದಾಯದ ಮಕ್ಕಳು ಉನ್ನತ ಶಿಕ್ಷಣ ಪಡೆದು ಐ.ಎ.ಎಸ್, ಐ.ಪಿ.ಎಸ್ ಹಾಗೂ ಕೆ.ಎ.ಎಸ್ ನಂತಹ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು ಎಂಬ ಉದ್ದೇಶದಿಂದ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಬೆಂಗಳೂರಿನಲ್ಲಿ ಆರು ತಿಂಗಳ ಉಚಿತ ಸ್ಪರ್ಧಾತ್ಮಕ ಪರೀಕ್ಷೆಗಳ ಕೋಚಿಂಗ್ ವ್ಯವಸ್ಥೆ ಮಾಡಲಾಗಿದ್ದು, ವಿದ್ಯಾರ್ಥಿಗಳು ಇದರ ಲಾಭ ಪಡೆಯಬೇಕು. ಉಳಿದ 50 ಕೋಟಿ ಅನುದಾನವನ್ನು ಸಮುದಾಯ ಭವನ, ಚರ್ಚ್‌ಗಳ ನವೀಕರಣ ಹಾಗೂ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ವಿನಿಯೋಗಿಸಲಾಗುವುದು ಎಂದು ಸಮಾಜದ ಮುಖಂಡರಿಗೆ ತಿಳಿಸಿದರು.

ವಿದೇಶದಲ್ಲಿ ವ್ಯಾಸಂಗ ಮಾಡುವ ಕ್ರೈಸ್ತ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದ್ದ ಧನಸಹಾಯವನ್ನು 20 ಲಕ್ಷದಿಂದ 30 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಮಹಿಳೆಯರ ಸ್ವಯಂ ಉದ್ಯೋಗಕ್ಕೆ 2 ಲಕ್ಷ ಅನುದಾನ ಸಿಗಲಿದ್ದು, ಸ್ವಯಂ ಉದ್ಯೋಗಕ್ಕಾಗಿ 'ಆಹಾರ ವಾಹನ' ಖರೀದಿಸಲು 2 ರಿಂದ 8 ಲಕ್ಷದವರೆಗೆ ನೆರವು ನೀಡಲಾಗುತ್ತಿದೆ. ಸ್ವಂತ ಜಾಗ ಹೊಂದಿರುವವರಿಗೆ ಮನೆ ನಿರ್ಮಾಣಕ್ಕೆ 2.70 ಲಕ್ಷದಿಂದ 3. ಲಕ್ಷದವರೆಗೆ ನೆರವು ಸಿಗಲಿದೆ ಎಂದರು.ಚರ್ಚ್ ನವೀಕರಣಕ್ಕೆ ಡಿಜಿಟಲ್ ಖಾತೆ ಕೊರತೆಯಿದ್ದರೆ, ನಿಗದಿಪಡಿಸಿದ 5 ಪ್ರಮಾಣಪತ್ರಗಳಲ್ಲಿ ಒಂದನ್ನು ನೀಡಬಹುದು. ಅರ್ಜಿದಾರರು ಕೇವಲ ಅರ್ಜಿ ಹಾಕಿ ಸುಮ್ಮನಾಗದೆ ಕಚೇರಿಯಿಂದ ಸ್ವೀಕೃತಿ ಪತ್ರ ಪಡೆದು, ಅರ್ಜಿಯ ಸ್ಥಿತಿಗತಿ ತಿಳಿದುಕೊಳ್ಳಬೇಕು. ಮಾಹಿತಿ ಅಭಾವ ನೀಗಿಸಲು ಮುಂದಿನ ಭಾನುವಾರದಿಂದ ಚರ್ಚ್‌ಗಳಲ್ಲಿ ಪ್ರಾರ್ಥನೆಯ ನಂತರ ಕರಪತ್ರ ಹಂಚಿ ಜಾಗೃತಿ ಮೂಡಿಸಲು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ವೇದಿಕೆ ಮೇಲೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ಸಂಗಮೇಶ್ವರ, ಜಿಲ್ಲಾ ವ್ಯವಸ್ಥಾಪಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧಿಕಾರಿ ಹಜರತ್ ಅಲಿ, ಕಲಬುರಗಿ ಧರ್ಮಕ್ಷೇತ್ರದ ಚಾನ್ಸೆಲರ್ ಫಾದರ್ ಸ್ಟಾನಿ ಲೋಬೋ ಅಖಿಲ ಭಾರತ ಕ್ರೈಸ್ತ ಮಹಾಸಭಾದ ಉಪಾಧ್ಯಕ್ಷ ಸಂಧ್ಯಾರಾಜ ಸ್ಯಾಮ್ಯುಯೆಲ್, ಸಿಮಿಯೋನ್ ಶಿರೋಮಣಿ, ಕಲ್ಬುರ್ಗಿ ಜಿಲ್ಲೆಯ ಕ್ರೈಸ್ತ ಚರ್ಚಿನ್ ಮುಖ್ಯಗುರುಗಳು ಪಾದ್ರಿಗಳು ಸೇರಿದಂತೆ ಅನೇಕ ಚರ್ಚಿನ ಸದಸ್ಯರುಗಳು ಭಾಗವಹಿಸಿದ್ದರು.

# ಬಸರಕೋಡು ಗ್ರಾಮಕ್ಕೆ ಬಳ್ಳಾರಿ ಆರೋಗ್ಯ ಅಧಿಕಾರಿ ಡಾ. ಅಲಕಾನಂದ ಮಳಗಿ ಭೇಟಿ: ಡೆಂಗ್ಯೂ, ಜ್ವರ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ

**ಬಳ್ಳಾರಿ, ಜು.27:** ತಾಲೂಕಿನ ಯರಗುಡಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಬಸರಕೋಡು ಗ್ರಾಮದಲ್ಲಿ ಇತ್ತೀಚೆಗೆ ಜ್ವರದ ಪ್ರಕರಣಗಳು ಹೆಚ್ಚಾದ ಹಿನ್ನೆಲೆಯಲ್ಲಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಅಲಕಾನಂದ ಡಿ. ಮಳಗಿ ಅವರು ಸೋಮವಾರ ಗ್ರಾಮಕ್ಕೆ ಭೇಟಿ ನೀಡಿ ಸ್ಥಿತಿಗತಿಗಳನ್ನು ಪರಿಶೀಲಿಸಿದರು.




ಗ್ರಾಮದ ಪ್ರತಿಯೊಂದು ಓಣಿಯಲ್ಲಿ ಸ್ವಚ್ಛತೆಯನ್ನು ಪರಿಶೀಲಿಸಿದ ಡಿಎಚ್‌ಓ, ಸಾರ್ವಜನಿಕರ ಆರೋಗ್ಯ ವಿಚಾರಿಸಿದರು. ನಂತರ ಮಾತನಾಡಿದ ಅವರು, "ಇದು ಮಳೆಗಾಲವಾಗಿರುವುದರಿಂದ ವೈರಲ್ ಫೀವರ್ ಮತ್ತು ಡೆಂಗ್ಯೂ ಜ್ವರ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ.

ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ, ಸೂಕ್ತ ಚಿಕಿತ್ಸೆಯಿಂದ ಜ್ವರ ಸಂಪೂರ್ಣವಾಗಿ ಗುಣಮುಖವಾಗುತ್ತದೆ, ಎಂದು ಧೈರ್ಯ ತುಂಬಿದರು. ಅಲ್ಲದೆ "ಯಾರಿಗಾದರೂ 3 ದಿನಗಳಿಗಿಂತ ಹೆಚ್ಚು ಕಾಲ ಬಿಡದೆ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು ಹಾಗೂ ಕೀಲು ನೋವು ಕಂಡುಬಂದರೆ ನಿರ್ಲಕ್ಷಿಸದೆ ತಕ್ಷಣವೇ ಚಿಕಿತ್ಸೆ ಪಡೆಯಬೇಕು.

ಬಸರಕೋಡು ಗ್ರಾಮದ ಆಯುಷ್ಮಾನ್ ಆರೋಗ್ಯ ಕೇಂದ್ರದಲ್ಲಿ ತಾತ್ಕಾಲಿಕ ಚಿಕಿತ್ಸಾ ಕೇಂದ್ರ ತೆರೆಯಲಾಗಿದ್ದು, ಗ್ರಾಮಸ್ಥರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

**ಕೈಗೊಂಡ ಮುಂಜಾಗ್ರತಾ ಕ್ರಮ:**

ಮನೆ ಮನೆ ಸಮೀಕ್ಷೆ: ಈಗಾಗಲೇ ವಿಶೇಷ ಆರೋಗ್ಯ ಸಿಬ್ಬಂದಿಯ ತಂಡಗಳು ಪ್ರತಿಯೊಂದು ಮನೆಗೆ ಭೇಟಿ ನೀಡಿ ಜ್ವರದ ಸಮೀಕ್ಷೆ ನಡೆಸುತ್ತಿದ್ದು, ರಕ್ತದ ಮಾದರಿ ಸಂಗ್ರಹಿಸಿ ಚಿಕಿತ್ಸೆ ನೀಡಲಾಗುತ್ತಿದೆ.

# ಬದುಕಿನಲ್ಲಿ ಶಿಸ್ತು ರೂಢಿಸಿಕೊಂಡರೆ ಸಾಧನೆ ಸಾಧ್ಯ: ನ್ಯಾ.ಲಕ್ಷ್ಮಿನಾರಾಯಣ



**ಕಲಬುರಗಿ, ಜು. 27:** ವಿದ್ಯಾರ್ಥಿಗಳು ಶಿಸ್ತು, ಸಂಯಮ, ನಿರಂತರ ಅಧ್ಯಯನ, ಸತತ ಪ್ರಯತ್ನ, ಕಠಿಣ ಪರಿಶ್ರಮ, ಗುರಿಮುಟ್ಟುವ ಛಲ ರೂಢಿಸಿಕೊಂಡಲ್ಲಿ ಸಾಧನೆ ಸಾಧ್ಯವಾಗಲಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿ.ಎಲ್.ಲಕ್ಷ್ಮಿನಾರಾಯಣ ಅವರು ಹೇಳಿದರು.

ನಗರದ ಸರ್ವಜ್ಞ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯಲ್ಲಿ ನ್ಯಾ.ಶಿವರಾಜ ಪಾಟೀಲ್ ಪ್ರತಿಷ್ಠಾನ, ಸರ್ವಜ್ಞ ಮತ್ತು ಜಸ್ಟಿಸ್ ಪಾಟೀಲ್ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದಿಂದ ಆಯೋಜಿಸಿದ್ದ ನ್ಯಾ.ಡಾ.ಶಿವರಾಜ ಪಾಟೀಲ್ ಅವರು ರಚಿಸಿದ ಮುಂಜಾವಿಗೊಂದು ನುಡಿಕಿರಣಗಳ ದರ್ಶನ ಪ್ರವಚನ ಮಾಲಿಕೆ, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕಾಗಿ 9 ದಿನಗಳ ವಿಶೇಷ ಉಪನ್ಯಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿ, ನ್ಯಾ.ಶಿವರಾಜ ಪಾಟೀಲ್ ಅವರ ನುಡಿಮುತ್ತುಗಳನ್ನು ನಿತ್ಯ ವೀಕ್ಷಿಸಿ ಪಾಲನೆ ಮಾಡಿದರೆ ಉತ್ತಮ ಸಂಸ್ಕಾರದೊಂದಿಗೆ ಒಳ್ಳೆಯ ಅಂಕಗಳು ಬರುತ್ತವೆ.

> “ಪಿಯು ಎರಡು ವರ್ಷ ಪರಿಶ್ರಮಪಟ್ಟು ಅಧ್ಯಯನ ಮಾಡಿದರೆ ಭವಿಷ್ಯ ಉಜ್ವಲವಾಗಲಿದೆ. ಸರ್ವಜ್ಞ ಸಮೂಹ ಸಂಸ್ಥೆಯಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ಉತ್ತಮ ಸಾಧನೆ ಮಾಡುವ ಪಣ ತೊಡಬೇಕು.
> – ಡಾ.ವಿಶ್ವನಾಥ ರಡ್ಡಿ, ಖ್ಯಾತ ನೇತ್ರ ತಜ್ಞರು.

ಉತ್ತಮ ಪರಿಸರವಿದ್ದ ಶಾಲೆ, ಶಿಕ್ಷಕರ ಉತ್ತಮ ಮಾರ್ಗದರ್ಶನ, ಮೌಲ್ಯಾಧಾರಿತ ಶಿಕ್ಷಣವಿದ್ದಲ್ಲಿ ಸಾಧನೆ ಸುಲಭ. ವಿದ್ಯಾರ್ಥಿಗಳು ಪಾಲಕರ ಆಸೆ ಈಡೇರಿಸಬೇಕು ಎಂದರು. ಮುದಗಲ್ ಕಲ್ಯಾಣ ಆಶ್ರಮದ ಶ್ರೀ ಮಹಾಂತ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ, ಡಾ.ಶಿವರಾಜ ಪಾಟೀಲ್ ಅವರು ಕಷ್ಟಗಳ ಮಧ್ಯೆಯೂ ಛಲ ಬಿಡದೆ ಕಠಿಣ ಪರಿಶ್ರಮದಿಂದ ಅಧ್ಯಯನ ಮಾಡಿ ದೇಶದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ಎಲ್ಲರಿಗೂ ಆದರ್ಶವಾಗಿದ್ದಾರೆ ಎಂದರು.

ಇವರ ಮುಂಜಾವಿಗೊಂದು ನುಡಿ ಕಿರಣ–365 ಕೃತಿ ಇವರ ಅಮೂಲ್ಯವಾದ ಅನುಭವದಿಂದ ಹೊರಹೊಮ್ಮಿದ ನುಡಿಮುತ್ತುಗಳ ಸಂಗಮ. ಆರೋಗ್ಯಕರ ದೇಹ, ಆರೋಗ್ಯಕರ ಮನಸ್ಸನ್ನು ಹೊಂದಿದ್ದು, ಸನ್ಮಾರ್ಗದಲ್ಲಿ ನಡೆದು ಉತ್ತಮರಾಗಿ ಹೊರಹೊಮ್ಮಬೇಕೆಂಬುದೆ ಈ ಪ್ರವಚನದ ಆಶಯ ಎಂದು ಹೇಳಿದರು.

ಖ್ಯಾತ ನೇತ್ರ ತಜ್ಞ ಡಾ.ವಿಶ್ವನಾಥರೆಡ್ಡಿ ಮಾತನಾಡಿದರು. ಸಂಸ್ಥೆ ಸಂಸ್ಥಾಪಕ ಪ್ರೊ.ಚನ್ನಾರೆಡ್ಡಿ ಪಾಟೀಲ್ ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿ, ನ್ಯಾಯಮೂರ್ತಿ ಶಿವರಾಜ ಪಾಟೀಲ್ ಅವರ ನುಡಿಕಿರಣಗಳು ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕೆ ಬೆಳಕಾಗಿವೆ. ಆದ್ದರಿಂದ ಇಂಥ ನುಡಿಕಿರಣಗಳ ಪ್ರವಚನ ಎಲ್ಲರೂ ಆಲಿಸಿ, ಪಾಲಿಸಬೇಕು ಎಂದರು.

ನೇತ್ರ ತಜ್ಞೆ ಡಾ.ರಾಜಶ್ರೀ ರೆಡ್ಡಿ, ಸಂಸ್ಥೆ ಮುಖ್ಯ ಶೈಕ್ಷಣಿಕ ನಿರ್ದೇಶಕ ಅಭಿಷೇಕ್ ಪಾಟೀಲ್, ಪ್ರಾಚಾರ್ಯ ವಿನೂತಾ ಆರ್.ಬಿ, ಪ್ರಮುಖರಾದ ಅನಿತಾ ಕುಲಕರ್ಣಿ, ಕರುಣೇಶ ಹಿರೇಮಠ, ಗುರುರಾಜ ಕುಲಕರ್ಣಿ ಇತರರಿದ್ದರು. ಸಂಸತಿ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಡಾ.ವಿದ್ಯಾವತಿ ನಿರೂಪಣೆ ಮಾಡಿದರು.

# ಸಮೃದ್ಧ ಮಳೆಗಾಗಿ ಮೀನಳ್ಳಿ ತಾಯಣ್ಣ ನೇತೃತ್ವದಲ್ಲಿ ವರುಣ ಯಾಗ, ಹೋಮ, ಹವನ, ಸಪ್ತ ಭಜನ



**ಪ್ರಸಕ್ತ ವರ್ಷ ಮುಂಗಾರು ಕೈಕೊಟ್ಟ ಹಿನ್ನೆಲೆ ಜಿಲ್ಲೆ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳಲ್ಲಿ ಭೀಕರ ಬರ ಆವರಿಸಿದೆ. ಸರ್ಕಾರ ಕೂಡಲೇ ಬರ ಜಿಲ್ಲೆ ಎಂದು ಘೋಷಿಸಬೇಕು, ರೈತರಿಗೆ ಸೂಕ್ತ ಪರಿಹಾರ ವಿತರಿಸಬೇಕು.**
**– ಮೀನಳ್ಳಿ ತಾಯಣ್ಣ**
**ಜೆಡಿಎಸ್ ಜಿಲ್ಲಾಧ್ಯಕ್ಷರು ಬಳ್ಳಾರಿ.**

**ಬಳ್ಳಾರಿ ಜು 27:** ಸಮೃದ್ಧ ಮಳೆ, ಬೆಳೆಗಾಗಿ ಪ್ರಾರ್ಥಿಸಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಮೀನಳ್ಳಿ ತಾಯಣ್ಣ ಅವರ ನೇತೃತ್ವದಲ್ಲಿ ನಗರದ ಪಟೇಲ್ ನಗರ ಶ್ರೀ ಸಣ್ಣ ದುರ್ಗಮ್ಮ ದೇವಿ ದೇವಾಲಯದಲ್ಲಿ, ವಿಶೇಷ ಪೂಜೆ, ವರುಣ ಯಾಗ, ಹೋಮ, ಹವನ, 101 ಕಳಸ ಪೂಜೆ, ಸಪ್ತ ಭಜನೆ ಕಾರ್ಯಕ್ರಮವನ್ನು ಸೋಮವಾರ ಹಮ್ಮಿಕೊಳ್ಳಲಾಗಿತ್ತು. ವಿವಿಧ ಪಂಡಿತರಿಂದ ವರುಣ ಯಾಗ, ಹೋಮ ಹವನ, ಕಳಸ ಪೂಜೆ, ಶ್ರೀ ಸಣ್ಣ ದುರ್ಗಮ್ಮ ದೇವಿಗೆ ವಿಶೇಷ ಅಲಂಕಾರ, ವಿವಿಧ ಪೂಜೆಗಳು ನೆರವೇರಿದವು. ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರ ಹಿರಿಯ ಪುತ್ರ ರಮೇಶ್ ಮೀನಳ್ಳಿ ಹಾಗೂ ದಂಪತಿಗಳು ಹೋಮ, ಹವನದಲ್ಲಿ ಭಾಗವಹಿಸಿ ಪೂರ್ಣಾಹುತಿ ನೆರವೇರಿಸಿದರು. ನಗರ ಸೇರಿ ಜಿಲ್ಲೆಯ ನಾನಾ ಭಾಗಗಳಿಂದ ಆಗಮಿಸಿದ ನೂರಾರು ರೈತ ಸಮೂಹ, ಭಕ್ತರಿಗೆ ವಿಶೇಷ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಮೀನಳ್ಳಿ ತಾಯಣ್ಣ ಅವರು ಮಾತನಾಡಿ,ಚಿ ಪ್ರಸಕ್ತ ವರ್ಷ ಮುಂಗಾರು ಮುನಿಸಿಕೊಂಡ ಹಿನ್ನೆಲೆ ದೇಶಕ್ಕೆ ಅಣ್ಣ ನೀಡುವ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಲಕ್ಷಾಂತರ ರೂ.ಖರ್ಚು ಮಾಡಿ ರೈತರು ಬಿತ್ತಿದ ಬೀಜ ಮೊಳಕೆಯೊಡೆದಿಲ್ಲ, ಸಮೃದ್ಧ ಮಳೆ, ಬೆಳೆಗಾಗಿ, ರೈತರ ಜೀವನ ಸಮೃದ್ಧಿಯಿಂದ ಕೂಡಿರಲಿ ನಾಡಿಗೆ ಒಳಿತಾಗಲಿ ಎಂದು ಪ್ರಾರ್ಥಿಸಿ ಜೆಡಿಎಸ್ ಜಿಲ್ಲಾ ಘಟಕದ ಆಶ್ರಯದಲ್ಲಿ ದೇಗುಲದಲ್ಲಿ ವಿಶೇಷ ವರುಣ ಯಾಗ, ಹೋಮ ಹವನ, ಸಪ2ತ ಭಜನೆ ಸೇರಿದಂತೆ ವಿವಿಧ ಪೂಜೆಗಳನ್ನು ಹಮ್ಮಿಕೊಳ್ಳಲಾಗಿದೆ. ರೈತರು ಆರ್ಥಿಕವಾಗಿ ಸ್ಥಿತಿವಂತರಾದರೆ ನಾಡು ಸುಭಿಕ್ಷೆಯಾಗಿರಲಿದೆ. ರೈತರೇ ಉಸಿರು, ದೇವರ ಕೃಪೆ, ಆಶೀರ್ವಾದದಿಂದ ಸಮೃದ್ಧ ಮಳೆಯಾಗಲಿ, ನಾಡು ಸಮೃದ್ಧಿಯಿಂದ ಕೂಡಿರಲಿ ಎಂದು ಪ್ರಾರ್ಥಿಸುವೆ ಎಂದರು.

ಈ ಸಂದರ್ಭದಲ್ಲಿ ಸಂಡೂರು ವಿಧಾನಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಕುರೆಕೊಪ್ಪ ಸೋಮಪ್ಪ, ನಗರ ಘಟಕದ ಅಧ್ಯಕ್ಷ ಹೊನ್ನೂರು ಸ್ವಾಮಿ,

ರೈತ ಘಟಕದ ಜಿಲ್ಲಾಧ್ಯಕ್ಷ ಲಕ್ಷ್ಮೀಕಾಂತ ರೆಡ್ಡಿ, ಎಸ್ಟಿ ಘಟಕದ ಜಿಲ್ಲಾಧ್ಯಕ್ಷ ಅಧ್ಧಿಗೇರಿ ರಾಮಣ್ಣ, ಎಸ್ಸಿ ಘಟಕದ ಜಿಲ್ಲಾಧ್ಯಕ್ಷ ವಸಂತಕುಮಾರ್,

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಜೆ.ಪುಷ್ಪಾ, ಕಾರ್ಮಿಕ ಘಟಕ ಅಧ್ಯಕ್ಷ ಭಾವಿ ಶಿವಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮದಿರೆ ವಿಜಯಕುಮಾರ್, ಕಿರಣ್ ಕುಮಾರ್, ಕಂಪ್ಲಿ ವಿಧಾನಸಭೆ ಕ್ಷೇತ್ರದ ಅಧ್ಯಕ್ಷ ಏಳ್ಕೆ ಮೇಘರಾಜ್, ಸಂಡೂರು ಅಧ್ಯಕ್ಷ ಹೊಸಗೇರಪ್ಪ, ಅವಾಂಬವಿ ಬಸವ, ದಿವಾಕರ, ಸೇರಿದಂತೆ ನೂರಾರು ಕಾರ್ಯಕರ್ತರು, ವಿವಿಧ ಮುಖಂಡರು ಭಾಗವಹಿಸಿದ್ದರು.

# ಜ್ಞಾನಕ್ಕೆ ಸಂಸ್ಕಾರದ ಬೆಸುಗೆ ಅಗತ್ಯ: ಸಿ.ಎಸ್. ಷಡಕ್ಷರಿ

## ಪ್ರತಿಭೆಗೆ ಪ್ರೋತ್ಸಾಹವೇ ರಾಷ್ಟ್ರ ನಿರ್ಮಾಣದ ಅಡಿಪಾಯ; ಬಳ್ಳಾರಿ-ರಾಯಚೂರಿನ 350 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ




ಬಳ್ಳಾರಿ, ಜು. 27: ವಿದ್ಯಾರ್ಥಿಗಳು ಕೇವಲ ಅಂಕಗಳ ಹಿಂದೆ ಓಡುವುದಷ್ಟೇ ಸಾಕಾಗುವುದಿಲ್ಲ. ಜ್ಞಾನದೊಂದಿಗೆ ಉತ್ತಮ ಸಂಸ್ಕಾರ, ಮಾನವೀಯ ಮೌಲ್ಯಗಳು ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಂಡಾಗ ಮಾತ್ರ ಅವರು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಲು ಸಾಧ್ಯ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅಭಿಪ್ರಾಯಪಟ್ಟರು.




ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕ ಆಯೋಜಿಸಿದ್ದ 2026ನೇ ಸಾಲಿನ ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.90 ಮತ್ತು ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ಬಳ್ಳಾರಿ ಹಾಗೂ ರಾಯಚೂರು ಜಿಲ್ಲೆಗಳ ಸರ್ಕಾರಿ ನೌಕರರ ಪ್ರತಿಭಾನ್ವಿತ ಮಕ್ಕಳ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಹಣದಿಂದ ಎಲ್ಲವನ್ನೂ ಖರೀದಿಸಲು ಸಾಧ್ಯವಾದರೂ ವಿವೇಕ ಮತ್ತು ಸಂಸ್ಕಾರವನ್ನು ಖರೀದಿಸಲು ಸಾಧ್ಯವಿಲ್ಲ. ಆದ್ದರಿಂದ ಪೋಷಕರು ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳನ್ನು ಬೆಳೆಸುವ ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ಜಿಲ್ಲೆಯ ಸರ್ಕಾರಿ ನೌಕರರು ತಮ್ಮ ಕರ್ತವ್ಯವನ್ನು ದಕ್ಷತೆಯಿಂದ ನಿರ್ವಹಿಸುತ್ತಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಯಶಸ್ವಿಯಾಗಿ ನಡೆದಿರುವುದು ಇದಕ್ಕೆ ಉತ್ತಮ ಉದಾಹರಣೆಯಾಗಿದೆ. ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರದ ಛಾಯೆ ಆವರಿಸುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರದ ವಿವಿಧ ಯೋಜನೆಗಳನ್ನು ಜನರಿಗೆ ಸಮರ್ಪಕವಾಗಿ ತಲುಪಿಸುವ ಜವಾಬ್ದಾರಿ ನೌಕರರ ಮೇಲಿದೆ ಎಂದು ಅವರು ತಿಳಿಸಿದರು.

**ಭಾರತದ ಜ್ಞಾನ ಪರಂಪರೆ ವಿಶ್ವಕ್ಕೆ ಮಾದರಿ**

ಖ್ಯಾತ ವಾಗ್ಮಿ ಕುಮಾರಿ ಹರಿಕ ಮಂಜುನಾಥ್ ಮಾತನಾಡಿ, ಭಾರತೀಯ ಸಂಸ್ಕೃತಿ, ವೇದ–ಉಪನಿಷತ್ತುಗಳ ಜ್ಞಾನ ಪರಂಪರೆ ಇಡೀ ವಿಶ್ವಕ್ಕೆ ದಾರಿದೀಪವಾಗಿದೆ. ನಮ್ಮಲ್ಲಿರುವ ಅಪಾರ ಸಾಮರ್ಥ್ಯವನ್ನು ಪ್ರತಿಯೊಬ್ಬ ಭಾರತೀಯನು ಅರಿತುಕೊಂಡಾಗ ಮಾತ್ರ ಭಾರತ ವಿಶ್ವಗುರುವಾಗಲು ಸಾಧ್ಯ ಎಂದು ಹೇಳಿದರು.

ಇಚ್ಛಾಶಕ್ತಿ ಮತ್ತು ಸಾಧಿಸುವ ಛಲ ಇದ್ದರೆ ಯಾವುದೇ ಅಡೆತಡೆಗಳು ಯಶಸ್ಸಿಗೆ ಅಡ್ಡಿಯಾಗುವುದಿಲ್ಲ ಎಂದು ಹೇಳಿದ ಅವರು, ಬಾಲ್ಯದಲ್ಲೇ ಪೋಲಿಯೊದಿಂದ ಕಾಲುಗಳ ಶಕ್ತಿ ಕಳೆದುಕೊಂಡರೂ ಒಲಿಂಪಿಕ್ಸ್‌ನಲ್ಲಿ ಚಿನ್ನದ ಪದಕ ಗೆದ್ದ ವಿಲ್ಮಾ ರುಡಾಲ್ಫ್ ಹಾಗೂ ಕೈ–ಕಾಲುಗಳಿಲ್ಲದಿದ್ದರೂ ಪ್ಯಾರಾಲಿಂಪಿಕ್ಸ್‌ನಲ್ಲಿ ಈಜು ಮತ್ತು ಡಿಸ್ಕಸ್ ಥ್ರೋ ಸ್ಪರ್ಧೆಗಳಲ್ಲಿ ಸಾಧನೆ ಮಾಡಿ ಪದ್ಮಶ್ರೀ ಪುರಸ್ಕಾರ ಪಡೆದ ಕರ್ನಾಟಕದ ಕೆ.ಎಸ್. ರಾಜಣ್ಣ ಅವರ ಜೀವನ ಸಾಧನೆಯನ್ನು ವಿದ್ಯಾರ್ಥಿಗಳಿಗೆ ಮಾದರಿಯಾಗಿ ಉಲ್ಲೇಖಿಸಿದರು.

"ನಾವು ಹುಟ್ಟಿದಾಗ ತಾಯಿ ಸಂತೋಷಪಡಬೇಕು, ಬೆಳೆದಾಗ ತಂದೆ ಹೆಮ್ಮೆಪಡಬೇಕು, ಬದುಕಿದಾಗ ಸಮಾಜ ಸಂಭ್ರಮಿಸಬೇಕು ಹಾಗೂ ನಮ್ಮ ಅಗಲಿಕೆಯಲ್ಲಿಯೂ ಸಮಾಜ ಕಣ್ಣೀರು ಹಾಕುವಂತಹ ಅರ್ಥಪೂರ್ಣ ಜೀವನವನ್ನು ಕಟ್ಟಿಕೊಳ್ಳಬೇಕು" ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

**350 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಗೌರವ**

ಕಾರ್ಯಕ್ರಮದಲ್ಲಿ ಬಳ್ಳಾರಿ ಮತ್ತು ರಾಯಚೂರು ಜಿಲ್ಲೆಗಳ 350 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ತಲಾ 2,000 ನಗದು, ಶಾಲು, ಬ್ಯಾಗ್ ಹಾಗೂ ಪ್ರಶಸ್ತಿ ಪತ್ರ ನೀಡಿ ಸನ್ಮಾನಿಸಲಾಯಿತು. ವಿದ್ಯಾರ್ಥಿಗಳ ಸಾಧನೆಯನ್ನು ಪೋಷಕರು ಹಾಗೂ ಸಂಘದ ಪದಾಧಿಕಾರಿಗಳು ಅಭಿನಂದಿಸಿದರು.

**ಗಣ್ಯರ ಉಪಸ್ಥಿತಿ**

ಸಮಾರಂಭದಲ್ಲಿ ರಾಜನಹಳ್ಳಿ ಹರಿಹರದ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಡಾ. ಪ್ರಸನ್ನಾನಂದ ಸ್ವಾಮೀಜಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ನೆಲ್ಕುದ್ರಿ ಸದಾನಂದ, ರಾಜ್ಯ ಹಾಗೂ ಜಿಲ್ಲಾ ಸಂಘದ ಪದಾಧಿಕಾರಿಗಳು, ಬಳ್ಳಾರಿ ಮತ್ತು ರಾಯಚೂರು ಜಿಲ್ಲೆಗಳ ಎಲ್ಲ ತಾಲೂಕುಗಳ ಅಧ್ಯಕ್ಷರು, ಸರ್ಕಾರಿ ನೌಕರರು, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

# ಸಿರಿಧಾನ್ಯ ಬಳಕೆಯಿಂದ ರೈತರಿಗೆ ಆರ್ಥಿಕ ಬಲ: ಡಾ.ಸತೀಶಕುಮಾರ್

**ರಾಯಚೂರು, ಜು. 27:** ಇತ್ತೀಚೆಗೆ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುತ್ತಿರುವ ಸಾರ್ವಜನಿಕರು ಸಿರಿಧಾನ್ಯಗಳನ್ನು ಹೆಚ್ಚಾಗಿ ಬಳಕೆ ಮಾಡುತ್ತಿದ್ದಾರೆ. ಹೀಗಾಗಿ ಬೇಡಿಕೆ ಹೆಚ್ಚಾಗುತ್ತಿದೆ. ಆದ್ದರಿಂದ ಸಿರಿಧಾನ್ಯಗಳನ್ನು ಹೆಚ್ಚು ಹೆಚ್ಚಗಿ ಬೆಳೆಯುವ ಮೂಲಕ ರೈತರು ಆರ್ಥಿಕವಾಗಿ ಸದೃಢರಾಗಬೇಕು ಎಂದು ಕೃಷಿ ವಿಶ್ವವಿದ್ಯಾಲಯದ ಉಪನ್ಯಾಸಕ ಡಾ.ಸತೀಶಕುಮಾರ್ ಹೇಳಿದರು.





ರಾಯಚೂರು ಜಿಲ್ಲೆಯ ಅಮೀನಗಡದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಮಹಾವಿದ್ಯಾಲಯದ ಬಿ.ಎಸ್ಸಿ ಅಂತಿಮ ವರ್ಷದ ವಿದ್ಯಾರ್ಥಿಗಳ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಹಮ್ಮಿಕೊಂಡಿದ್ದ ಸಿರಿ ಧಾನ್ಯಗಳ ಮಹತ್ವ ಹಾಗೂ ಆರೋಗ್ಯಕರ ಆಹಾರ ಪದ್ಧತಿ ಕುರಿತ ಜಾಗೃತಿ ಜಾಥಾ ಜರುಗಿತು.

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಮಹಾ ವಿದ್ಯಾಲಯದ ಬಿ.ಎಸ್ಸಿ ಅಂತಿಮ ವರ್ಷದ ವಿದ್ಯಾರ್ಥಿಗಳ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಜಿಲ್ಲೆಯ ಅಮೀನಗಡ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಸಿರಿ ಧಾನ್ಯಗಳ ಮಹತ್ವ ಹಾಗೂ ಆರೋಗ್ಯಕರ ಆಹಾರ ಪದ್ಧತಿ ಕುರಿತ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಿರಿಧಾನ್ಯ ಬೆಳೆಸಿ, ಆರೋಗ್ಯ ಕಾಪಾಡಿ, ಸಿರಿಧಾನ್ಯ ಉಳಿಸಿ ಆರೋಗ್ಯ ಬೆಳೆಸಿ ಮತ್ತು ಸಿರಿಧಾನ್ಯವೇ ಶಕ್ತಿ, ಆರೋಗ್ಯವೇ ಸಂಪತ್ತು ಎಂದು ವಿದ್ಯಾರ್ಥಿಗಳು ಘೋಷಣೆ ಕೂಗಿದರು.

ಗ್ರಾಮದ ಮುಖಂಡರು, ರೈತರು ಮತ್ತು ಸ್ಥಳೀಯ ಶಾಲೆಯ ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

# ಗಣೇಶ ಚತುರ್ಥಿ ಪರಿಸರಸ್ನೇಹಿಯಾಗಿ ಆಚರಿಸಿ: ರಾಯಚೂರು ಡಿ.ಸಿ ಸೂಚನೆ



ರಾಯಚೂರು, ಜು. 27: ಜಿಲ್ಲೆಯಲ್ಲಿ ಗಣೇಶ ಚತುರ್ಥಿಯನ್ನು ಪರಿಸರಸ್ನೇಹಿಯಾಗಿ ಹಾಗೂ ಸೌಹಾರ್ದತೆಯಿಂದ ಆಚರಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಕರೆ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪರಿಸರಸ್ನೇಹಿ ಮಣ್ಣಿನ ಗಣಪತಿ ಮೂರ್ತಿ ಪ್ರತಿಷ್ಠಾಪನೆ ಮಾಡುವುದರಿಂದ ಮಾಲಿನ್ಯವನ್ನು ತಪ್ಪಿಸಬಹುದು. ಪಿಒಪಿ ಹಾಗೂ ಬಣ್ಣಲೇಪಿತ ಗಣೇಶ ಮೂರ್ತಿಗಳನ್ನು ನೀರಿನಲ್ಲಿ ವಿಸರ್ಜಿಸಿದಾಗ ರಾಸಾಯನಿಕಗಳು ಜಲಮೂಲಗಳಾದ ಕೆರೆ, ಬಾವಿ, ಹಳ್ಳ ಸೇರಿ ನೀರು ಕಲುಷಿತಗೊಳ್ಳುತ್ತದೆ. ಇದು ಜಲಚರಗಳಿಗೆ ಹಾಗೂ ಮಾನವನಿಗೆ ಅತ್ಯಂತ ಹಾನಿಕರ ಎಂದರು.

ಪಿಒಪಿ ಮೂರ್ತಿಗಳ ಸಾಗಣೆ, ದಾಸ್ತಾನು ಹಾಗೂ ಮಾರಾಟವನ್ನು ತಡೆಗಟ್ಟಬೇಕು. ವಿಗ್ರಹ ತಯಾರಿಕಾ ಘಟಕ, ಮಾರಾಟ ಸ್ಥಳಗಳಿಗೆ ಅನಿರೀಕ್ಷಿತವಾಗಿ ಭೇಟಿ ನೀಡಿ, ತಪಾಸಣೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿಯ ಆದೇಶದ ಪ್ರಕಾರ ನಮ್ಮ ಜಲಮೂಲಗಳನ್ನು ನಾವು ರಕ್ಷಿಸಿಕೊಳ್ಳಬೇಕು. ರಾಸಾಯನಿಕ ಸಹಿತ ಪಿಒಪಿ ವಿಗ್ರಹಗಳನ್ನು ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ ಎಂದು ತಿಳಿಸಿದರು.

ಗಣೇಶ ಮೂರ್ತಿಗಳ ವಿಸರ್ಜನೆಗೆ ಅನುಕೂಲವಾಗುವಂತೆ ಸ್ಥಳೀಯ ಸಂಸ್ಥೆಗಳು ಕೆರೆ, ನದಿ ಪಾತ್ರಗಳಲ್ಲಿ ಸ್ಥಳಗಳನ್ನು ನಿಗದಿಪಡಿಸಬೇಕು. ಸಮಿತಿಯವರು ಕಡ್ಡಾಯವಾಗಿ ಪೊಲೀಸ್ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳ ಅನುಮತಿ ಪಡೆದು ಮೂರ್ತಿ ಪ್ರತಿಷ್ಠಾಪಿಸಬೇಕು ಎಂದು ಹೇಳಿದರು. ಜಿಲ್ಲೆಗೆ ಹೊರ ರಾಜ್ಯಗಳಿಂದ ಬರುವ ಪಿಒಪಿ ಗಣೇಶ ಮೂರ್ತಿಗಳ ಮೇಲೆ ಸೂಕ್ತ ನಿಗಾ ವಹಿಸಬೇಕು. ಅದಕ್ಕಾಗಿ ಜಿಲ್ಲೆಯ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಸಿಬ್ಬಂದಿ ನಿಯೋಜಿಸಿ, ಪಿಒಪಿ ಗಣೇಶ ಮೂರ್ತಿಗಳು ಜಿಲ್ಲೆಗೆ ಬರದಂತೆ ನೋಡಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಈ ಬಾರಿ ಪಿಒಪಿ ಗಣೇಶ ಮೂರ್ತಿಗಳು ಜಿಲ್ಲೆಯಲ್ಲಿ ಕಂಡುಬಂದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಪರಸರ ಮಾಲಿನ್ಯ ನಿಯಂತ್ರಣಾಧಿಕಾರಿ ಸಂತೋಷ, ಸಿಪಿಐ ಉಮೇಶ ಕಾಂಬಳೆ, ಮಹಾನಗರ ಪಾಲಿಕೆಯ ಪರಿಸರ ಅಧಿಕಾರಿ ಜೈಪಾಲ್ ರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಅಧಿಕಾರಿ, ಸಿಬ್ಬಂದಿ ಸಭೆಯಲ್ಲಿ ಹಾಜರಿದ್ದರು.

# ಮುಂಗಾರು ಹಂಗಾಮು ಆರಂಭವಾದರೂ ರಚನೆಯಾಗದ ಕೃಷ್ಣಾ ನೀರಾವರಿ ಸಲಹಾ ಸಮಿತಿ

**ವಿಜಯಪುರ, ಜು. 27:** ಕೃಷ್ಣಾ ನದಿ ನೀರಿನ ಮೇಲೆ ಅವಲಂಬಿತವಾಗಿರುವ ವಿಜಯಪುರ, ಬಾಗಲಕೋಟೆ, ಯಾದಗಿರಿ, ರಾಯಚೂರು, ಕಲಬುರಗಿ ಜಿಲ್ಲೆಗಳೂ ಸೇರಿ ಅಚ್ಚುಕಟ್ಟು ಪ್ರದೇಶದ ರೈತರು ಮುಂಗಾರು ಹಂಗಾಮಿನ ಬೆಳೆಗಳಿಗೆ ಕಾಲುವೆ ನೀರಿನ ನಿರೀಕ್ಷೆಯಲ್ಲಿದ್ದಾರೆ.

ಆದರೆ, ಮುಂಗಾರು ಹಂಗಮು ಆರಂಭವಾಗಿ ಆಗಲೇ ಎರಡು ತಿಂಗಳು ಸಮೀಪಿಸುತ್ತಿದ್ದರೂ ಕೃಷ್ಣಾ ನೀರಾವರಿ ಸಲಹಾ ಸಮಿತಿ (ಐಸಿಸಿ) ಇನ್ನೂ ರಚನೆಯಾಗದಿರುವುದು ಹಾಗೂ ಕಾಲುವೆಗಳಿಗೆ ನೀರು ಹರಿಸುವ ಕುರಿತು ಸಭೆ ನಡೆಯದಿರುವು ದರಿಂದ ನೀರು ಬಿಡುಗಡೆ ಕುರಿತು ಸ್ಪಷ್ಟ ನಿರ್ಧಾರ ಇನ್ನೂ ಹೊರಬಿದ್ದಿಲ್ಲ. ಇದರಿಂದ ರೈತರಲ್ಲಿ ಆತಂಕ ಹೆಚ್ಚಾಗಿದೆ.

ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳಿಗೆ ಇಲ್ಲಿ ಮಳೆಯಾಗದಿದ್ದರೂ, ಮೇಲ್ಭಾಗದ ಮಹಾರಾಷ್ಟ್ರ ಸೇರಿ ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ವ್ಯಾಪಕ ಮಳೆಯಿಂದಾಗಿ ಉತ್ತಮ ಪ್ರಮಾಣದಲ್ಲಿ ಒಳಹರಿವು ಬರುತ್ತಿದ್ದು, ಜಲಾಶಯದಲ್ಲಿ ನೀರಿನ ಸಂಗ್ರಹ ಪ್ರಮಾಣ ಗಣನೀಯವಾಗಿ ಏರಿಕೆಯಾಗಿದೆ. ಪ್ರಸ್ತುತ ಆಲಮಟ್ಟಿ ಜಲಾಶಯದಲ್ಲಿ ಶೇ. 92ರಷ್ಟು ನೀರು ಸಂಗ್ರಹವಾಗಿದ್ದು, ನೀರಾವರಿ ಚಟುವಟಿಕೆಗಳಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಆದರೂ ಕಾಲುವೆಗಳಿಗೆ ನೀರು ಹರಿಸುವ ಕುರಿತು ಅಧಿಕೃತ ವೇಳಾಪಟ್ಟಿ ಪ್ರಕಟವಾಗಿಲ್ಲ.

ಪ್ರತಿ ವರ್ಷ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಜಲಾಶಯದಲ್ಲಿನ ನೀರಿನ ಲಭ್ಯತೆ, ಕುಡಿಯುವ ನೀರಿನ ಅಗತ್ಯ, ಬೆಳೆಗಳ ಅವಧಿ ಹಾಗೂ ರೈತರ ಬೇಡಿಕೆಗಳನ್ನು ಪರಿಗಣಿಸಿ ಕಾಲುವೆಗಳಿಗೆ ನೀರು ಬಿಡುವ ದಿನಾಂಕ ನಿಗದಿಪಡಿಸಲಾಗುತ್ತದೆ. ಆದರೆ ಈ ಬಾರಿ ಸಮಿತಿ ರಚನೆ ವಿಳಂಬವಾಗಿರುವುದರಿಂದ ಸಭೆಯೂ ನಿಗದಿಯಾಗಿಲ್ಲ. ಇದರಿಂದ ರೈತರು ಯಾವ ಬೆಳೆ ಬೆಳೆಯಬೇಕು, ಬಿತ್ತನೆ ಕಾರ್ಯವನ್ನು ಯಾವಾಗ ಆರಂಭಿಸಬೇಕು ಎಂಬ ಗೊಂದಲದಲ್ಲಿದ್ದಾರೆ.

ಬೆಳೆ ಯೋಜನೆಗೆ ತೊಂದರೆ: ಆಲಮಟ್ಟಿ ಜಲಾಶಯದ ನೀರಿನ ಮೇಲೆ ಅವಲಂಬಿತವಾಗಿರುವ ಬಸವನ ಬಾಗೇವಾಡಿ, ನಿಡಗುಂದಿ, ಕೊಲ್ಹಾರ, ಮುದ್ದೇಬಿಹಾಳ ಸೇರಿ ವಿವಿಧ ಭಾಗಗಳ ರೈತರು ಕಾಲುವೆ ನೀರಿನ ನಿರೀಕ್ಷೆಯಲ್ಲಿದ್ದಾರೆ. ಈಗಾಗಲೇ ಕೆಲವೆಡೆ ಮುಂಗಾರು ಬಿತ್ತನೆ ಕಾರ್ಯ ಆರಂಭವಾಗಿದ್ದು, ನೀರಾವರಿ ಬೆಳೆಗಳಾದ ಕಬ್ಬು, ಭತ್ತ, ತೋಟಗಾರಿಕಾ ಬೆಳೆಗಳಿಗೆ ನೀರಿನ ಲಭ್ಯತೆ ಕುರಿತು ರೈತರು ಚಿಂತಿತರಾಗಿದ್ದಾರೆ.

# ಬೀದರ್ ಆಸ್ಪತ್ರೆ, ಬಸ್, ರೈಲು ನಿಲ್ದಾಣಗಳಲ್ಲಿ

## ಮಮತೆಯ ತೊಟ್ಟಿಲು ಸ್ಥಾಪನೆ: ಡಿ.ಸಿ ಶಿಲ್ಪಾ ಶರ್ಮಾ



ಬೀದರ ನಗರದ ಬ್ರಿಮ್ಸ್ ಆಸ್ಪತ್ರೆ ಆವರಣದಲ್ಲಿ ಬೇಡವಾದ ಮಕ್ಕಳನ್ನು ಬಿಡಲು ಮಮತೆಯ ತೊಟ್ಟಿಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಉದ್ಘಾಟಿಸಿದರು. ಭಾಲ್ಕಿ ಹಿರೇಮಠ ಸಂಸ್ಥಾನದ ಮಕ್ಕಳ ಪೋಷಕರೂ ಅದ ಗುರುಬಸವ ಪಟ್ಟದ್ದೇವರು, ಬ್ರಿಮ್ಸ್ ನಿರ್ದೇಶಕ ಡಾ.ಶಾಂತಲಾ ಕೌಜಲಗಿ ಮತ್ತಿತರರಿದ್ದರು.

ಬೀದರ್, ಜು. 27: ಪ್ರತಿ ಸರ್ಕಾರಿ ಆಸ್ಪತ್ರೆ, ಬಸ್ ನಿಲ್ದಾಣ ಹಾಗೂ ರೈಲು ನಿಲ್ದಾಣಗಳಲ್ಲಿ ಮಮತೆಯ ತೊಟ್ಟಿಲು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಹೇಳಿದರು.

ನಗರದ ಬ್ರಿಮ್ಸ್ ಆಸ್ಪತ್ರೆಯಲ್ಲಿ ಮಮತೆಯ ತೊಟ್ಟಿಲು ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳು ದೇಶದ ಸಂಪತ್ತು, ಮಕ್ಕಳ ಸೇವೆಯೇ ದೇಶಸೇವೆ. ಬೇಡವಾದ ಮಕ್ಕಳನ್ನು ಕಸದ ತೊಟ್ಟಿಯಲ್ಲಿ, ಹೊಲದಲ್ಲಿ, ಆಸ್ಪತ್ರೆಯ ಆವರಣದಲ್ಲಿ ಬಿಸಾಡಿದ ಮಕ್ಕಳು ಸಾವಿಗಿಡಾಗುತ್ತಿದ್ದವು. ಹುಲಸೂರು ಮತ್ತು ಹುಮನಾಬಾದ ತಾಲ್ಲೂಕಿನಲ್ಲಿ ಇಂತಹ ಅಮಾನವೀಯ ಘಟನೆಗಳು ಜರುಗಿವೆ. ಇಂತಹ ಮಕ್ಕಳ ಪೋಷಣೆಗಾಗಿ ಮಮತೆಯ ತೊಟ್ಟಿಲು ಸ್ಥಾಪಿಸಲಾಗಿದೆ ಎಂದರು. ಮಗುವನ್ನು ಬಿಸಾಡದೇ ಮಗುವಿಗೆ ಬದುಕುವ ಹಕ್ಕನ್ನು ಕೊಡಬೇಕು. ಪ್ರತಿಯೊಂದು ಮಗು ಕುಟುಂಬದ ವಾತಾವರಣ ಕಲ್ಪಿಸುವುದೇ ಮಮತೆಯ ತೊಟ್ಟಿಲಿನ ಕಾರ್ಯಕ್ರಮದ ಉದ್ದೇಶ ಎಂದರು.

ಭಾಲ್ಕಿ ಮಠದ ಗುರುಬಸವ ಪಟ್ಟದ್ದೇವರು ಮಾತನಾಡಿ, ಭಾಲ್ಕಿ ಹಿರೇಮಠ ಸಂಸ್ಥಾನ ವಿದ್ಯಾಪೀಠ 2010 ರಿಂದ ವಿಶೇಷ ದತ್ತು ಕೇಂದ್ರ ನಡೆಸುತ್ತಿದೆ. ಪ್ರತಿಯೊಂದು ಮಗುವಿಗೂ ಬದುಕುವ ಹಕ್ಕಿದೆ. ಯಾರು ಕೂಡ ತಮಗೆ ಬೇಡವಾದ ಮಗುವನ್ನು ಬಿಸಾಡದೇ ಮಕ್ಕಳನ್ನು ತೊಟ್ಟಿಲಲ್ಲಿ ಹಾಕಿ ಕುಟುಂಬದ ವಾತಾವರಣ ಕಲ್ಪಿಸಬೇಕು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶಾರದಾ ಎನ್. ಕಲ್ಮಲಕರ್ ಮಾತನಾಡಿ, ಒಂದು ವಾರದೊಳಗಾಗಿ ಜಿಲ್ಲೆಯ ಎಲ್ಲ ತಾಲ್ಲೂಕಾ ಆಸ್ಪತ್ರೆಗಳಲ್ಲಿ, ಬಸ್ ನಿಲ್ದಾಣಗಳಲ್ಲಿ, ರೈಲು ನಿಲ್ದಾಣಗಳಲ್ಲಿ ಮಮತೆಯ ತೊಟ್ಟಿಲುಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದರು.

ಬ್ರಿಮ್ಸ್ ನಿರ್ದೇಶಕರು ಡಾ.ಶಾಂತಲಾ ಕೌಜಲಗಿ, ಡಾ.ಶಿವಯೋಗಿ ಬಾಳಿ, ಡಾ. ಅಹಮ್ಮದ್, ಡಾ.ಉಮಾ ದೇಶಮುಖ, ಡಾ.ಸಂಜುಕುಮಾರ ಬಿರಾದಾರ ಇದ್ದರು.

## ಪಾಕ್ ಮಿಲಿಟರಿ ಹಸ್ತಕ್ಷೇಪ: ವಿರೋಧ ಪಕ್ಷಗಳ ಆರೋಪ | 45 ಸ್ಥಾನಗಳಿಗೆ 3 ಹಂತದಲ್ಲಿ ಚುನಾವಣೆ

# ಪ್ರತಿಭಟನೆ, ಬಹಿಷ್ಕಾರಗಳ ನಡುವೆ ಪಿಓಕೆಯಲ್ಲಿ ಮೊದಲ ಹಂತದ ಮತದಾನ

**ಇಸ್ಲಾಮಾಬಾದ್, ಜು.27:** ಬಿಗಿ ಭದ್ರತೆಯ ನಡುವೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ (ಪಿಓಕೆ) ಶಾಸನಸಭೆ ಚುನಾವಣೆಯ ಮೊದಲ ಹಂತದ ಮತದಾನ ಸೋಮವಾರ ಪ್ರಾರಂಭವಾಗಿದೆ. ಸರ್ಕಾರದ ವಿರುದ್ಧದ ತಿಂಗಳುಗಳ ಸುದೀರ್ಘ ಪ್ರತಿಭಟನೆ, ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪಕ್ಷದ ಬಹಿಷ್ಕಾರ ಮತ್ತು ಸೇನೆಯ ಬೆಂಬಲದೊಂದಿಗೆ "ಚುನಾವಣಾ ಅಕ್ರಮ/ಹಸ್ತಕ್ಷೇಪ" ನಡೆಸಲಾಗುತ್ತಿದೆ ಎಂಬ ವಿರೋಧ ಪಕ್ಷಗಳ ಆರೋಪಗಳ ಹಿನ್ನೆಲೆಯಲ್ಲಿ ಈ ಚುನಾವಣೆ ನಡೆಯುತ್ತಿದೆ.

53 ಸದಸ್ಯರ ಅಸೆಂಬ್ಲಿಯಲ್ಲಿ ನೇರವಾಗಿ ಆಯ್ಕೆಯಾಗುವ 45 ಸ್ಥಾನಗಳಿಗೆ ಮೂರು ಹಂತಗಳಲ್ಲಿ ಚುನಾವಣೆ ನಡೆಯುತ್ತಿದ್ದು, ಮೊದಲ ಹಂತವಾಗಿ ಮಿರ್‌ಪುರ್ ವಿಭಾಗದ 13 ಕ್ಷೇತ್ರಗಳಲ್ಲಿ ಮತದಾನ ಆರಂಭವಾಗಿದೆ. ಬಾಕಿ ಉಳಿದ ಕ್ಷೇತ್ರಗಳಿಗೆ ಆಗಸ್ಟ್ 2 ಮತ್ತು ಆಗಸ್ಟ್ 10 ರಂದು ಮತದಾನ ನಡೆಯಲಿದೆ.

ಮೊದಲ ಹಂತದಲ್ಲಿ 14 ಲಕ್ಷಕ್ಕೂ ಹೆಚ್ಚು ನೋಂದಾಯಿತ ಮತದಾರರು ಹಕ್ಕು ಚಲಾಯಿಸಲು ಅರ್ಹರಾಗಿದ್ದು, ಮಿರ್‌ಪುರ್, ಭಿಂಬರ್ ಮತ್ತು ಕೋಟ್ಲಿ ಜಿಲ್ಲೆಗಳಲ್ಲಿ 2,500 ಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಈ 13 ಸ್ಥಾನಗಳಿಗೆ ಸುಮಾರು 300 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ.



ಪಿಓಕೇಯ ಮುಖ್ಯ ಚುನಾವಣಾ ಆಯುಕ್ತ ಗುಲಾಮ್ ಮುಸ್ತಫಾ ಮುಘಲ್ ಪ್ರಕಾರ, ಮಿರ್‌ಪುರ್ ವಿಭಾಗದ 13 ಕ್ಷೇತ್ರಗಳಿಗೆ ಜುಲೈ 27 ರಂದು, ಮುಜಫರಾಬಾದ್ ವಿಭಾಗದ ಒಂಬತ್ತು ಕ್ಷೇತ್ರಗಳು ಹಾಗೂ 12 ನಿರಾಶ್ರಿತರ ಕ್ಷೇತ್ರಗಳಿಗೆ ಆಗಸ್ಟ್ 2 ರಂದು ಮತ್ತು ಪೂಂಚ್ ವಿಭಾಗದ 11 ಕ್ಷೇತ್ರಗಳಿಗೆ ಆಗಸ್ಟ್ 10 ರಂದು ಮತದಾನ ನಡೆಯಲಿದೆ.

ಹಲವು ಜನರ ಸಾವು ಮತ್ತು ನೂರಾರು ಜನರು ಗಾಯಗೊಳ್ಳಲು ಕಾರಣವಾದ ವಾರಗಳ ಕಾಲದ ಅಶಾಂತಿಯ ನಂತರ, ಭದ್ರತೆಯನ್ನು ಕಾಯ್ದುಕೊಳ್ಳಲು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯವು ಸುಮಾರು 14,000 ಪೊಲೀಸ್ ಸಿಬ್ಬಂದಿಯನ್ನು ಈ ಪ್ರದೇಶಕ್ಕೆ ನಿಯೋಜಿಸಿದೆ.

ಈ ಸ್ಪರ್ಧೆಯು ಮುಖ್ಯವಾಗಿ ಪಾಕಿಸ್ತಾನದ ಪ್ರಮುಖ ರಾಜಕೀಯ ಪಕ್ಷಗಳಾದ ಪಾಕಿಸ್ತಾನ್ ಮುಸ್ಲಿಂ ಲೀಗ್–ನವಾಜ್ , ಪಾಕಿಸ್ತಾನ್ ಪೀಪಲ್ಸ್ ಪಾರ್ಟಿ , ಮತ್ತು ಇಸ್ತೆಹ್ಕಮ್–ಎ–ಪಾಕಿಸ್ತಾನ್ ಪಾರ್ಟಿ ನಡುವೆ ನಡೆಯುತ್ತಿದೆ. ಮೊದಲ ಹಂತದ ಮತದಾನದಲ್ಲಿ 13 ಸ್ಥಾನಗಳಿಗೆ ಸುಮಾರು 300 ಅಭ್ಯರ್ಥಿಗಳು ಪೈಪೋಟಿ ನಡೆಸುತ್ತಿದ್ದಾರೆ. ಕೋಟ್ಲಿ ಜಿಲ್ಲೆಯ ಆರು ಕ್ಷೇತ್ರಗಳಲ್ಲಿ 135 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದರೆ, ಮೀರ್‌ಪುರ್ ಮತ್ತು ಭಿಂಬರ್ ಜಿಲ್ಲೆಗಳ 7.5 ಲಕ್ಷಕ್ಕೂ ಹೆಚ್ಚು ಮತದಾರರು ಬಾಕಿ ಉಳಿದ ಏಳು ಸ್ಥಾನಗಳ ಭವಿಷ್ಯ ನಿರ್ಧರಿಸಲಿದ್ದಾರೆ.

ಸಬ್ಸಿಡಿ ದರದ ಗೋಧಿ ಹಿಟ್ಟು, ಕಡಿಮೆ ವಿದ್ಯುತ್ ದರ, ಹೆಚ್ಚಿನ ರಾಜಕೀಯ ಹಕ್ಕುಗಳು ಮತ್ತು 1947 ರ ನಂತರ ಪಾಕಿಸ್ತಾನದಲ್ಲಿ ನೆಲೆಸಿದ ನಿರಾಶ್ರಿತರಿಗೆ ಕಾಯ್ದಿರಿಸಲಾದ 12 ಅಸೆಂಬ್ಲಿ ಸ್ಥಾನಗಳನ್ನು ರದ್ದುಗೊಳಿಸುವಂತೆ ಆಗ್ರಹಿಸಿ 'ಜಮ್ಮು ಕಾಶ್ಮೀರ ಜಾಯಿಂಟ್ ಅವಾಮಿ ಆಕ್ಷನ್ ಕಮಿಟಿ' ನಡೆಸಿದ ಪ್ರತಿಭಟನೆಗಳ ನಂತರ ಈ ಚುನಾವಣೆಗಳು ನಡೆಯುತ್ತಿವೆ. ಈ ಶಾಸನಸಭೆಯು 45 ನೇರ ಆಯ್ಕೆಯ ಶಾಸಕರು ಮತ್ತು ಮಹಿಳೆಯರು, ತಂತ್ರಜ್ಞರು ಹಾಗೂ ಧಾರ್ಮಿಕ ಪಂಡಿತರಿಗೆ ಕಾಯ್ದಿರಿಸಲಾದ 8 ಸ್ಥಾನಗಳು ಸೇರಿದಂತೆ ಒಟ್ಟು 53 ಸದಸ್ಯರನ್ನು ಹೊಂದಿದೆ. ಆಯ್ಕೆಯಾಗುವ ಸ್ಥಾನಗಳಲ್ಲಿ 12 ಸ್ಥಾನಗಳನ್ನು 1947 ರ ನಂತರ ಪಾಕಿಸ್ತಾನದಲ್ಲಿ ನೆಲೆಸಿದ ಜಮ್ಮು ಮತ್ತು ಕಾಶ್ಮೀರದ ನಿರಾಶ್ರಿತರಿಗೆ ಕಾಯ್ದಿರಿಸಲಾಗಿದ್ದು, ಈ ವ್ಯವಸ್ಥೆಯು ಪ್ರಸ್ತುತ ನಡೆಯುತ್ತಿರುವ ರಾಜಕೀಯ ವಿವಾದದ ಪ್ರಮುಖ ಕೇಂದ್ರಬಿಂದುವಾಗಿದೆ.

# ಕಾಕ್ರೋಚ್ ಹೋರಾಟಕ್ಕೆ ವಿದೇಶಿ ಸಂಪರ್ಕ ಸ್ಪಷ್ಟ: ಗ್ರೇಟಾ ಥನ್‌ಬರ್ನ್ ಬೆಂಬಲ

**ನವದೆಹಲಿ, ಜು.27:** ನೀಟ್ ಪ್ರಕರಣ ವಿರುದ್ಧ ಹೋರಾಟ ಸಂಘಟಿಸಿದ ಕಾಕ್ರೋಚ್ ಜನತಾ ಪಕ್ಷಕ್ಕೆ ವಿದೇಶಿ ನಂಟು ಇರುವುದು ಸ್ಪಷ್ಟವಾಗಿದೆಈಲ್. ಈ ಹಿಂದೆ ಕೇಂದ್ರದ ಕೃಷಿ ನೀತಿಗಳ ವಿರುದ್ಧ ದೆಹಲಿಯಲ್ಲಿ ಚಳವಳಿ ನಡೆಸಿದ್ದ ರೈತ ಸಂಘಟನೆಗಳಿಗೆ ಬೆಂಬಲ ನೀಡಿದ್ದ ಸ್ವೀಡನ್ ನ ಪರಿಸರ ಹೋರಾಟಗಾರ್ತಿ ಗ್ರೇಟಾ ಥನ್‌ಬರ್ನ್ ನೇತೃತ್ವದ ಟೂಲ್ ಕಿಟ್ ಮತ್ತೆ ಸಕ್ರಿಯವಾಗಿದೆ. ಲಂಡನ್‌ನ ಟ್ರಾಫಲ್‌ಗರ್ ಸ್ಕ್ವೇರ್‌ನಲ್ಲಿ ನಡೆದ ರ‍್ಯಾಲಿಯಲ್ಲಿ ಭಾಗವಹಿಸಿದ್ದ ಥನ್ ಬರ್ನ್, ಭಾರತದಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆಗಳನ್ನು ಶ್ಲಾಘಿಸಿದ್ದು, ಈ ಚಳವಳಿ ಜನಶಕ್ತಿಯ ನಿಜವಾದ ಅರ್ಥವನ್ನು ತೋರಿಸಿದೆ ಎಂದು ಹೇಳಿದ್ದಾರೆ. ಭಾರತದ ವಿದ್ಯಾರ್ಥಿ ಪ್ರತಿಭಟನೆ ನಮ್ಮೆಲ್ಲರನ್ನೂ ಹೆಮ್ಮೆಪಡಿಸಿದೆ. ಅವರು ನಮಗೆ ಆಶೆ ನೀಡಿದ್ದಾರೆ. ಜನರು ಒಗ್ಗೂಡಿ ಪ್ರತಿರೋಧಿಸಿದಾಗ ಏನು ಸಾಧಿಸಬಹುದು ಎಂಬುದನ್ನು ಅವರು ತೋರಿಸಿದ್ದಾರೆ. ಜನಶಕ್ತಿಯ ನಿಜವಾದ ಅರ್ಥವನ್ನು ಅವರು ಪ್ರದರ್ಶಿಸಿದ್ದಾರೆ ಎಂದು



ಥನ್ ಬರ್ನ್ ಹೇಳಿದ್ದು ಸುದ್ದಿಯಾಗಿದೆ. ಈ ಹಿಂದೆ ರೈತರ ಹೋರಾಟ ಕುರಿತು ತಪ್ಪು ಮಾಹಿತಿ ಮತ್ತು ಚಿತ್ರಗಳನ್ನು ವಿಶ್ವಾದ್ಯಂತ ಹಂಚಿಕೊಂಡು ಭಾರತೀಯರ ಕೆಂಗಣ್ಣಿಗೆ ಗುರಿಯಾಗಿದ್ದ ಈ ಸ್ವೀಡಿಶ್ ಹೋರಾಟಗಾರ್ತಿ ಮತ್ತೆ ಮೋದಿ ಸರ್ಕಾರದ ವಿರುದ್ಧ ಅಪಪ್ರಚಾರಕ್ಕೆ ಮುಂದಾಗಿರುವುದು ಸ್ಪಷ್ಟವಾಗಿದೆ. ಈ ಮೂಲಕ ಸಿಜೆಪಿಗೆ ವಿದೇಶಿ ಶಕ್ತಿಗಳ ಬೆಂಬಲ ಇರುವುದು ನಿಚ್ಚಳವಾಗಿದೆ.

ಸ್ಥಾಪನೆ : 04–11–1990

36ನೇ ಸಂಸ್ಥಾಪನಾ ವರ್ಷಾಚರಣೆ : 04–11–2026

ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ (ರಿ.), ಕಾಸರಗೋಡು

(ಕೇರಳ ರಾಜ್ಯ ಕನ್ನಡ ಭಾಷಾ ಅಲ್ಪಸಂಖ್ಯಾತರ ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಸಂಘಟನೆ)

ಕನ್ನಡ ಗ್ರಾಮ, ಕನ್ನಡ ಗ್ರಾಮ ರಸ್ತೆ, ಕಾಸರಗೋಡು–671121

करावली संस्कृतिक प्रतिष्ठान (री.), कासरगोड

KARAVALI SAMSKRITIKA PRATHISTANA (R.), KASARAGOD

(A Kannada Linguistic Minority Cultural & Literary Organisation in Kerala State)

KANNADA GRAMA, KANNADA GRAMA, ROAD, KASARAGOD - 671121

Mobile : 9448572016

email : Shivaramakasaragod@gmail.com

MANGALURU OFFICE :



ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ (ರಿ.), ಕನ್ನಡ ಗ್ರಾಮ, ಕಾಸರಗೋಡು

KARAVALI SAMSKRITIKA PRATHISTANA (R.), KANNADA GRAMA, KASARAGOD

SHRI MAHAMAYA, DOOR NO. 4-42/3/1,VAIDYANATH NAGAR 1st MAIN CROSS ROAD, MADOOR, POST KOTEKAR, ULLAL TALUK, MANGALURU-575022

Mobile : 9448572016, 9901951965 Email: karavalisamskritikaprathistana@gmail.com

# ಇರಾನ್‌ನ ಸಂಭಾವ್ಯ ದಾಳಿ ಬೆನ್ನಲ್ಲೇ ವಾಷಿಂಗ್ಟನ್‌ಗೆ ದೌಡಾಯಿಸಿದ ಇಸ್ರೇಲ್ ಪ್ರಧಾನಿ ನೆತನ್ಯಾಹು

**ಜೆರುಸಲೇಮ್, ಜು.27:** ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಗೌಪ್ಯವಾಗಿ ಇಸ್ರೇಲ್‌ನಿಂದ ನಿರ್ಗಮಿಸಿದ್ದು, ಹಲವರ ಹುಬ್ಬೇರಿಸುವಂತೆ ಮಾಡಿದೆ. ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗಿನ ಎಂಟನೇ ಭೇಟಿಗಾಗಿ ವಾಷಿಂಗ್ಟನ್‌ಗೆ ತೆರಳುತ್ತಿರುವ ಅವರು, ಬೆನ್ ಗುರಿಯನ್ ವಿಮಾನ ನಿಲ್ದಾಣದ ಬದಲಾಗಿ ನೆವಾಟಿಮ್ ವಾಯುಪಡೆ ನೆಲೆಯಿಂದ ಪ್ರಯಾಣಿಸಿದ್ದು, ಅಚ್ಚರಿಗೆ ಕಾರಣವಾಗಿದ್ದು, ಈ ಬಗ್ಗೆ ಇಸ್ರೇಲ್ ಪ್ರಧಾನಿ ಕಚೇರಿ ಯಾವುದೇ ಸ್ಪಷ್ಟನೆ ನೀಡಿಲ್ಲ.



ವರದಿಯ ಪ್ರಕಾರ, ಇರಾನ್‌ನಿಂದ ಎದುರಾಗಬಹುದಾದ ಸಂಭಾವ್ಯ ಬೆದರಿಕೆಯ ಸುರಕ್ಷತೆಯ ದೃಷ್ಟಿಯಿಂದ ಮಿಲಿಟರಿ ನೆಲೆಯಿಂದ ತೆರಳುವ ನಿರ್ಧಾರ ತೆಗೆದುಕೊಳ್ಳಲಾಗಿದೆ. ಭಾನುವಾರ ನಡೆಯಬೇಕಿದ್ದ ನೆತನ್ಯಾಹು ಅವರ ಸಚಿವ ಸಂಪುಟ ಸಭೆಯನ್ನು ಸಹ ಅವರ ಕಚೇರಿಯಿಂದ ರಹಸ್ಯ ಸ್ಥಳಕ್ಕೆ ಸ್ಥಳಾಂತರಿಸಲಾಗಿತ್ತು.

ಸರ್ಕಾರದ ಅನುದಾನಿತ 'ವಿಂಗ್ ಆಫ್ ಝಿಯಾನ್' ವಿಮಾನದಲ್ಲಿ ಪ್ರಯಾಣಿಸಲು ಇಸ್ರೇಲ್‌ನ ರಾಜತಾಂತ್ರಿಕ ಮಾಧ್ಯಮ ಬಳಗಕ್ಕೆ ಪ್ರಧಾನಿ ಕಚೇರಿ ಅನುಮತಿ ನಿರಾಕರಿಸಿದ್ದು, ಇದಕ್ಕೂ ಯಾವುದೇ ವಿವರಣೆ ನೀಡಲಾಗಿಲ್ಲ. ನೆತನ್ಯಾಹು ಅವರು ಮಾಧ್ಯಮಗಳೊಂದಿಗೆ ಹೊಂದಿರುವ ದೀರ್ಘಕಾಲದ ಉದ್ವಿಗ್ನ ಸಂಬಂಧವನ್ನು ಬಿಂಬಿಸುವಂತೆ, ಹಿಂದೆಂದೂ ಪತ್ರಕರ್ತರನ್ನು ಅಧಿಕೃತ ವಿಮಾನಗಳಲ್ಲಿ ಸೇರಿಸಿಕೊಳ್ಳುವುದನ್ನು ತಡೆದಿದ್ದರು.


ವಿಮಾನವೇರುವ ಮೊದಲು ಮಾತನಾಡಿದ ನೆತನ್ಯಾಹು, ಟ್ರಂಪ್ ಅವರೊಂದಿಗಿನ ಭೇಟಿಯಲ್ಲಿ ಇರಾನ್ ವಿಷಯವೇ ಪ್ರಮುಖ ಚರ್ಚೆಯಾಗಲಿದೆ ಎಂದು ಹೇಳಿದರು. ಈ ಸಂಕೀರ್ಣ ಸಮಯದಲ್ಲಿ ಅತ್ಯಂತ ದೃಢನಿಶ್ಚಯ ಮತ್ತು ಉತ್ತಮ ಬುದ್ಧಿವಂತಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ನೆತನ್ಯಾಹು ತಮ್ಮ ಪತ್ನಿ ಸಾರಾ ಅವರೊಂದಿಗೆ ಹೀಬ್ರೂ ಭಾಷೆಯಲ್ಲಿ ನೀಡಿದ ವೀಡಿಯೊ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇಸ್ರೇಲ್‌ನ ಭದ್ರತೆ, ಶಕ್ತಿ ಮತ್ತು ಭವಿಷ್ಯವನ್ನು ಖಚಿತಪಡಿಸಿಕೊಳ್ಳುವ ಒಂದೇ ಒಂದು ಸ್ಪಷ್ಟ ಉದ್ದೇಶದೊಂದಿಗೆ ವಾಷಿಂಗ್ಟನ್‌ಗೆ ಪ್ರಯಾಣಿಸುತ್ತಿದ್ದೇನೆ ಎಂದು ಹೇಳಿದ್ದಾರೆ.

ನೆತನ್ಯಾಹು ಅವರು ಮಂಗಳವಾರ ಸ್ಥಳೀಯ ಸಮಯ ಬೆಳಿಗ್ಗೆ 11 ಗಂಟೆಗೆ ಟ್ರಂಪ್ ಅವರನ್ನು ಭೇಟಿಯಾಗಲಿದ್ದಾರೆ. ಅವರು ಇಸ್ರೇಲ್‌ನ ಅತ್ಯಂತ ಆಪ್ತ ಸ್ನೇಹಿತ ಎಂದು ಬಣ್ಣಿಸಿದ ದಿವಂಗತ ರಿಪಬ್ಲಿಕನ್ ಸೆನೆಟರ್ ಲಿಂಡ್ಸೆ ಗ್ರಹಾಂ ಅವರ ಸಂಸ್ಮರಣಾ ಸಭೆಯಲ್ಲೂ ಭಾಗವಹಿಸಲಿದ್ದಾರೆ.

# ಕಾಮನ್‌ವೆಲ್ತ್ ಗೇಮ್ಸ್: ವೇಟ್ ಲಿಫ್ಟಿಂಗ್‌ನಲ್ಲಿ ಜ್ಞಾನೇಶ್ವರಿ ಯಾದವ್‌ಗೆ ಬೆಳ್ಳಿ ಪದಕ

**ಗ್ಲ್ಯಾಸ್ಗೋ, ಜು.27:** ಕಾಮನ್‌ವೆಲ್ತ್ ಗೇಮ್ಸ್ 2026ರಲ್ಲಿ ಭಾರತೀಯ ವೇಟ್‌ಲಿಫ್ಟಿಂಗ್ ಪದಕ ಬೇಟೆಯ ಪ್ರದರ್ಶನವನ್ನು ಮುಂದುವರಿಸಿದ್ದು, ಮಹಿಳೆಯರ 53 ಕೆಜಿ ವಿಭಾಗದಲ್ಲಿ ಜ್ಞಾನೇಶ್ವರಿ ಯಾದವ್ ಅದ್ಭುತ ಪ್ರದರ್ಶನ ನೀಡಿ ಬೆಳ್ಳಿ ಪದಕ ಗೆದ್ದಿದ್ದಾರೆ. ಇದರೊಂದಿಗೆ ಭಾರತದ ಪದಕಗಳ ಸಂಖ್ಯೆಗೆ ಮತ್ತೊಂದು ಸೇರ್ಪಡೆಯಾಗಿದೆ.

ಜ್ಞಾನೇಶ್ವರಿ ಫೈನಲ್‌ನಲ್ಲಿ ಸ್ನ್ಯಾಚ್‌ನಲ್ಲಿ 88 ಕೆಜಿ ಹಾಗೂ ಕ್ಲೀನ್ ಅಂಡ್ ಜರ್ಕ್‌ನಲ್ಲಿ 111 ಕೆಜಿ ಎತ್ತುವ ಮೂಲಕ ಒಟ್ಟು 199 ಕೆಜಿ ಭಾರ ಎತ್ತಿದರು. ಅವರ ಕ್ಲೀನ್ ಅಂಡ್ ಜರ್ಕ್ ಪ್ರಯತ್ನವು ಹೊಸ ಕಾಮನ್‌ವೆಲ್ತ್ ಗೇಮ್ಸ್ ದಾಖಲೆಯನ್ನು ನಿರ್ಮಿಸಿ ಕ್ಷಣಕಾಲ ಇತಿಹಾಸ ಪುಸ್ತಕ ಸೇರಿತ್ತು. ಆದರೆ ನೈಜೀರಿಯಾದ ದಿದಿಹ್ ಒನೊಮೆ ಒಮೊಲೊಲಾ 113 ಕೆಜಿ ಎತ್ತುವ ಮೂಲಕ ಆ ದಾಖಲೆಯನ್ನು ತಮ್ಮದಾಗಿಸಿಕೊಂಡು ಚಿನ್ನದ ಪದಕವನ್ನು ಗೆದ್ದುಕೊಂಡರು. ಭಾರತೀಯ ಲಿಫ್ಟರ್ ಪಡೆದ ಬೆಳ್ಳಿ ಪದಕವು ಗ್ಲ್ಯಾಸ್ಗೋ ಗೇಮ್ಸ್‌ನ ವೇಟ್‌ಲಿಫ್ಟಿಂಗ್‌ನಲ್ಲಿ ಭಾರತಕ್ಕೆ ಸಿಕ್ಕ ನಾಲ್ಕನೇ ಪದಕವಾಗಿದೆ. ಕ್ರೀಡಾಕೂಟದಲ್ಲಿ ವೇಟ್‌ಲಿಫ್ಟಿಂಗ್ ಮತ್ತೊಮ್ಮೆ ಭಾರತದ ಅತ್ಯಂತ ವಿಶ್ವಾಸಾರ್ಹ ಪದಕ ಗೆಲ್ಲುವ ಕ್ರೀಡೆಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಜ್ಞಾನೇಶ್ವರಿ ತೀವ್ರ ಸ್ಪರ್ಧಾತ್ಮಕ ವಾತಾವರಣದಲ್ಲೂ ಅತ್ಯಂತ ಒತ್ತಡದ ನಡುವೆ ಅದ್ಭುತ ಸಂಯಮ ಪ್ರದರ್ಶಿಸಿದರು. ಅಂತಿಮ ಕ್ಲೀನ್ ಅಂಡ್ ಜರ್ಕ್ ಸುತ್ತಿನಲ್ಲಿ ಮಹತ್ವದ ಪ್ರದರ್ಶನ ನೀಡಿದರು. ಅವರ ಈ ಸಾಧನೆಯು ಸ್ಪರ್ಧೆಯ ನಾಲ್ಕನೇ ದಿನದಂದು ಭಾರತದ




ಪದಕಗಳ ವೇಗವನ್ನು ಇನ್ನಷ್ಟು ಹೆಚ್ಚಿಸಿತು. ಇದಕ್ಕೂ ಮುನ್ನ, ಭಾರತದ ವೇಟ್‌ಲಿಫ್ಟಿಂಗ್ ಅಭಿಯಾನವು ಈಗಾಗಲೇ ಪ್ರಬಲ ಫಲಿತಾಂಶಗಳನ್ನು ನೀಡಿದ್ದು, ದೇಶದ ಪ್ರಮುಖ ಲಿಫ್ಟರ್‌ಗಳು ವಿವಿಧ ವಿಭಾಗಗಳಲ್ಲಿ ತಮ್ಮ ಉಪಸ್ಥಿತಿಯನ್ನು ಸಾರಿದ್ದರು. ಈ ಇತ್ತೀಚಿನ ಪದಕದ ಗೆಲುವು ಗ್ಲ್ಯಾಸ್ಗೋದಲ್ಲಿ ಭಾರತದ ಒಟ್ಟಾರೆ ಪದಕಗಳ ನಿರೀಕ್ಷೆಯನ್ನು ಮತ್ತಷ್ಟು ಬಲಪಡಿಸಿದೆ. ಅಥ್ಲೆಟಿಕ್ಸ್ ಅಖಾಡವೂ ಭಾರತಕ್ಕೆ ಸಂತಸ ತಂದಿದ್ದು, ಪುರುಷರ ಹರ್ಡಲ್ಸ್ ಸ್ಪರ್ಧೆಯ ಫೈನಲ್‌ಗೆ ತೇಜಸ್ ಶಿರ್ಸೆ ಪ್ರವೇಶಿಸುವ ಮೂಲಕ ಟ್ರ್ಯಾಕ್‌ನಲ್ಲಿ ಭಾರತದ ಪದಕದ ನಿರೀಕ್ಷೆಯನ್ನು ಜೀವಂತವಾಗಿರಿಸಿದ್ದಾರೆ. ಯುವ ಹರ್ಡಲ್ಸ್ ಪಟುವಿನ ಈ ಪ್ರಗತಿಯು ಭಾರತದ ಅಥ್ಲೆಟಿಕ್ಸ್ ಅಭಿಯಾನಕ್ಕೆ ಹೊಸ ಆಶಾವಾದವನ್ನು ತಂದಿದೆ, ಇದರಲ್ಲಿ ಹಲವು ಪದಕದ ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ.

ಭಾರತವು ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಒಂಬತ್ತು ಕ್ರೀಡೆಗಳಲ್ಲಿ ಸ್ಪರ್ಧಿಸುತ್ತಿದ್ದು, ಅಥ್ಲೆಟಿಕ್ಸ್, ವೇಟ್‌ಲಿಫ್ಟಿಂಗ್, ಬಾಕ್ಸಿಂಗ್ ಮತ್ತು ಜಿಮ್ನಾಸ್ಟಿಕ್ಸ್‌ನಲ್ಲಿ ಬಲವಾದ ಪದಕದ ನಿರೀಕ್ಷೆಗಳನ್ನು ಹೊಂದಿದೆ. ಹಲವು ಪ್ರಮುಖ ಕ್ರೀಡಾಪಟುಗಳು ಇನ್ನೂ ಪದಕದ ಸುತ್ತುಗಳನ್ನು ತಲುಪಬೇಕಿದ್ದು, ಭಾರತೀಯ ತಂಡವು ಗ್ಲ್ಯಾಸ್ಗೋದಲ್ಲಿ ಬಲವಾದ ಅಂತ್ಯವನ್ನು ಕಾಣುವ ಗುರಿಯನ್ನು ಹೊಂದಿದೆ.

ಜ್ಞಾನೇಶ್ವರಿ ಅವರ ಬೆಳ್ಳಿ ಪದಕವು ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ವೇಟ್‌ಲಿಫ್ಟಿಂಗ್ ಶಕ್ತಿ ಕೇಂದ್ರವಾಗಿ ಭಾರತಕ್ಕಿರುವ ಹೆಸರನ್ನು ಮತ್ತಷ್ಟು ದೃಢಪಡಿಸಿದೆ ಮತ್ತು ದೇಶದ 2026 ರ ಅಭಿಯಾನದಲ್ಲಿ ಮತ್ತೊಂದು ನೆನಪಿನಲ್ಲಿ ಉಳಿಯುವ ಕ್ಷಣವನ್ನು ಒದಗಿಸಿದೆ.

# ಕಾಮನ್‌ವೆಲ್ತ್ ಗೇಮ್ಸ್ 4ನೇ ದಿನವೂ ಭಾರತದ ಪದಕಗಳ ಬೇಟೆ

**ಗ್ಲ್ಯಾಸ್ಗೋ, ಜು.27:** ಕಾಮನ್‌ವೆಲ್ತ್ ಗೇಮ್ಸ್ 2026 ರಲ್ಲಿ ಭಾರತಕ್ಕೆ ಮತ್ತೊಂದು ಪ್ರೋತ್ಸಾಹದಾಯಕ ದಿನವಾಗಿ ಮೂಡಿಬಂದಿದೆ. ಲಾಂಗ್‌ಜಂಪ್‌ನಲ್ಲಿ ಪಟು ಮುರಳಿ ಶ್ರೀಶಂಕರ್ ಮತ್ತು ಹರ್ಡಲ್ಸ್ ಪಟು ತೇಜಸ್ ಶಿರ್ಸೆ ತಮ್ಮ ತಮ್ಮ ವಿಭಾಗಗಳ ಫೈನಲ್ ತಲುಪಿದ್ದಾರೆ. ಇದೇ ವೇಳೆ ಭಾರತದ ಬಾಕ್ಸರ್‌ಗಳಾದ ಅಂಕುಶ್ ಮತ್ತು ಸಚಿನ್ ಸಿವಾಚ್ ಕ್ವಾರ್ಟರ್‌ಫೈನಲ್ ಪ್ರವೇಶಿಸುವ ಮೂಲಕ ತಮ್ಮ ಅದ್ಭುತ ಪ್ರದರ್ಶನವನ್ನು ಮುಂದುವರಿಸಿದ್ದಾರೆ.


ಕಾಮನ್‌ವೆಲ್ತ್ ಗೇಮ್ಸ್ ಬೆಳ್ಳಿ ಪದಕ ವಿಜೇತ ಶ್ರೀಶಂಕರ್, ತಮ್ಮ ಮೊದಲ ಯತ್ನದಲ್ಲೇ 8.01 ಮೀಟರ್ ದೂರ ಜಿಗಿಯುವ ಮೂಲಕ ನೇರ ಅರ್ಹತಾ ಮಾರ್ಕ್ (8.00 ಮೀಟರ್) ದಾಟಿ ಪುರುಷರ ಲಾಂಗ್ ಜಂಪ್ ಫೈನಲ್‌ಗೆ ಸುಲಭವಾಗಿ ಅರ್ಹತೆ ಪಡೆದರು. ಮತ್ತೊಬ್ಬ ಭಾರತೀಯ ಅಥ್ಲೀಟ್ ಲೋಕೇಶ್ ಸತ್ಯನಾಥನ್ ಕೂಡ 7.77 ಮೀಟರ್ ಅತ್ಯುತ್ತಮ ಸಾಧನೆಯೊಂದಿಗೆ ಒಟ್ಟಾರೆ ಏಳನೇ ಸ್ಥಾನ ಪಡೆದು ಫೈನಲ್ ಪ್ರವೇಶಿಸಿದ್ದಾರೆ.

ತೇಜಸ್ ಶಿರ್ಸೆ ಪುರುಷರ 110 ಮೀಟರ್ ಹರ್ಡಲ್ಸ್‌ನ ಹೀಟ್ಸ್‌ನಲ್ಲಿ 13.76 ಸೆಕೆಂಡುಗಳಲ್ಲಿ ಗುರಿ ತಲುಪಿ ಮೂರನೇ ಸ್ಥಾನ ಪಡೆಯುವ ಮೂಲಕ ಫೈನಲ್‌ನಲ್ಲಿ ತಮ್ಮ ಸ್ಥಾನವನ್ನು ಕಾಯ್ದಿರಿಸಿಕೊಂಡರು. ಒಟ್ಟಾರೆ ಏಳನೇ ಸ್ಥಾನದಲ್ಲಿರುವ ಅವರು ಇಂದು ಪದಕಕ್ಕಾಗಿ ಸ್ಪರ್ಧಿಸಲಿದ್ದಾರೆ.

ಬಾಕ್ಸಿಂಗ್‌ನಲ್ಲಿ, ಕಾಮನ್‌ವೆಲ್ತ್ ಗೇಮ್ಸ್‌ಗೆ ಪದಾರ್ಪಣೆ ಮಾಡಿದ ಅಂಕುಶ್, ಪುರುಷರ 80 ಕೆಜಿ ವಿಭಾಗದಲ್ಲಿ ಆಂಟಿಗುವಾ ಮತ್ತು ಬಾರ್ಬುಡಾದ ಝುಲನ್ ಜಾನ್ ಅವರನ್ನು 5–0 ಅಂತರದಿಂದ ಸಂಪೂರ್ಣವಾಗಿ ಮಣಿಸಿ ಕ್ವಾರ್ಟರ್‌ಫೈನಲ್‌ಗೆ ಲಗ್ಗೆಯಿಟ್ಟಿದ್ದಾರೆ.

ಸಚಿನ್ ಸಿವಾಚ್ ಸಹ ಪುರುಷರ 60






- ಲಾಂಗ್‌ಜಂಪ್‌ನಲ್ಲಿ ಮುರಳಿ ಶ್ರೀಶಂಕರ್, ಹರ್ಡಲ್ಸ್‌ನಲ್ಲಿ ತೇಜಸ್ ಶಿರ್ಸೆ ಫೈನಲ್‌ಗೆ
- ಬಾಕ್ಸಿಂಗ್‌ನಲ್ಲಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ ಅಂಕುಶ್, ಸಚಿನ್ ಸಿವಾಚ್

ಕೆಜಿ ವಿಭಾಗದಲ್ಲಿ ಇಂಗ್ಲೆಂಡ್‌ನ ವಿಲಿಯಂ ಹೆವಿಟ್ ವಿರುದ್ಧ 4–1 ಅಂತರದ ಕಠಿಣ ಹೋರಾಟದ ಗೆಲುವು ಸಾಧಿಸಿ ಮುನ್ನಡೆದಿದ್ದಾರೆ. ಅವರು ಬುಧವಾರ ನಡೆಯಲಿರುವ ಕ್ವಾರ್ಟರ್‌ಫೈನಲ್‌ನಲ್ಲಿ ಬೋಟ್ಸ್ವಾನಾದ ಟ್ರೆಷರ್ ಮೊರೆಮಿ ಅವರನ್ನು ಎದುರಿಸಲಿದ್ದಾರೆ.

ಸ್ವಿಮ್ಮಿಂಗ್‌ನಲ್ಲಿ, ಒಲಿಂಪಿಯನ್ ಸಾಜನ್ ಪ್ರಕಾಶ್ ಪುರುಷರ 200 ಮೀಟರ್ ಬಟರ್‌ಫ್ಲೈ ಹೀಟ್ಸ್‌ನಲ್ಲಿ 1:58.59 ಸಮಯದೊಂದಿಗೆ ಎರಡನೇ ಸ್ಥಾನ ಪಡೆದು, ಒಟ್ಟಾರೆ ಆರನೇ ವೇಗದ ಈಜುಗಾರನಾಗಿ ಫೈನಲ್‌ಗೆ ಅರ್ಹತೆ ಪಡೆದರು.

ಪ್ಯಾರಾ ಈಜುಗಾರ ಸ್ವಾತಿಕ್ ಪಾಟೀಲ್ ಕೂಡ ಪುರುಷರ 100 ಮೀಟರ್ ಬ್ರೆಸ್ಟ್‌ಸ್ಟ್ರೋಕ್ SB9 ವಿಭಾಗದ ಹೀಟ್ಸ್‌ನಲ್ಲಿ 1:15.85 ಸಮಯ ದಾಖಲಿಸಿ ನಾಲ್ಕನೇ ಸ್ಥಾನ ಪಡೆದು, ಒಟ್ಟಾರೆ ಆರನೇ ಸ್ಥಾನದೊಂದಿಗೆ ಫೈನಲ್ ಪ್ರವೇಶಿಸಿದರು.

ವೇಟ್‌ಲಿಫ್ಟಿಂಗ್‌ನಲ್ಲಿ, ಭಾನುವಾರ ಒಂದು ಚಿನ್ನ ಮತ್ತು ಎರಡು ಬೆಳ್ಳಿ ಪದಕಗಳನ್ನು ಗೆದ್ದ ನಂತರ ಭಾರತವು ಪದಕಗಳ ಸಂಖ್ಯೆಯನ್ನು ಹೆಚ್ಚಿಸಲು ಎದುರು ನೋಡುತ್ತಿದ್ದು, ಮಹಿಳೆಯರ 53 ಕೆಜಿ ಫೈನಲ್‌ನಲ್ಲಿ ಜ್ಞಾನೇಶ್ವರಿ ಯಾದವ್ ಸ್ಪರ್ಧೆಯಲ್ಲಿದ್ದರು.

ಆದಾಗ್ಯೂ, ಸ್ಪ್ರಿಂಟರ್ ಗುರುಂದರ್‌ವೀರ್ ಸಿಂಗ್ ಅವರಿಗೆ ನಿರಾಶೆಯಾಯಿತು. ಪುರುಷರ 100 ಮೀಟರ್ ಸ್ಪರ್ಧೆಯಲ್ಲಿ ಅವರು 10.39 ಸೆಕೆಂಡುಗಳ ಸಾಧನೆ ಮಾಡಿದರೂ, ಸೆಮಿಫೈನಲ್‌ಗೆ ಅರ್ಹತೆ ಪಡೆಯುವ ಪ್ರಮುಖ 17 ಓಟಗಾರರಲ್ಲಿ ಸ್ಥಾನ ಪಡೆಯಲು ಸಾಧ್ಯವಾಗಲಿಲ್ಲ.

ಅಥ್ಲೆಟಿಕ್ಸ್, ಬಾಕ್ಸಿಂಗ್, ವೇಟ್‌ಲಿಫ್ಟಿಂಗ್ ಮತ್ತು ಈಜು ವಿಭಾಗಗಳಲ್ಲಿ ಪದಕದ ನಿರೀಕ್ಷೆಗಳನ್ನು ಜೀವಂತವಾಗಿರಿಸಿಕೊಂಡು ಭಾರತವು ನಾಲ್ಕನೇ ದಿನದ ಸ್ಪರ್ಧೆಗಳನ್ನು ಮುಂದುವರಿಸಿದೆ.

# ರಾಷ್ಟ್ರೀಯ ಚಾಂಪಿಯನ್ ಆದಿತ್ಯಗೆ ಅಂ.ರಾ.ರೇಸಿಂಗ್‌ನಲ್ಲಿ ಮೊದಲ ಜಯ!

**ಬೆಂಗಳೂರು, ಜು.27:** ಭಾರತದ ಯುವ ಕಾರು ರೇಸರ್ ಆದಿತ್ಯ ಪಟ್ನಾಯಕ್ ಸೆಪಾಂಗ್ ಅಂತಾರಾಷ್ಟ್ರೀಯ ಸರ್ಕ್ಯೂಟ್‌ನಲ್ಲಿ ನಡೆದ ಗೋಲ್ಡ್ ವಿಯೊಸ್ ಚಾಂಪಿಯನ್‌ಶಿಪ್ ಮಲೇಷ್ಯಾದ ಮೂರನೇ ಸುತ್ತಿನ ಸ್ಪೋರ್ಟಿಂಗ್ ಕ್ಲಾಸ್ ವಿಭಾಗದಲ್ಲಿ ಚಾಂಪಿಯನ್ ಆಗುವ ಮೂಲಕ ಮೊದಲ ಅಂತಾರಾಷ್ಟ್ರೀಯ ಕಾರು ರೇಸ್ ಪ್ರಶಸ್ತಿಯನ್ನು ಗೆದ್ದಿದ್ದಾರೆ. ಈ ಸಾಧನೆಗಾಗಿ ಅವರಿಗೆ 15000 ಮಲೇಷ್ಯನ್ ರಿಂಗೆಟ್ (ಅಂದಾಜು 3.5 ಲಕ್ಷ ರುಪಾಯಿ) ಬಹುಮಾನ ಲಭಿಸಿದೆ.

ಮುಂಬೈನ ಆದಿತ್ಯ ಮೊದಲ ರೇಸ್‌ನಲ್ಲಿ ಮೂರನೇ ಸ್ಥಾನ ಪಡೆದಿದ್ದರು. ಬಳಿಕ ನಡೆದ ಎರಡನೇ ರೇಸ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿ ಗೆಲುವು ಸಾಧಿಸುವ ಮೂಲಕ ಒಟ್ಟಾರೆ ಮೂರನೇ ಸುತ್ತಿನ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡರು. ಪೋಲೊ ಕಪ್ ಇಂಡಿಯಾದಲ್ಲಿ ಸತತ ಎರಡು ವರ್ಷ ರಾಷ್ಟ್ರೀಯ ರನ್ನರ್–ಅಪ್ ಆಗಿದ್ದ ಆದಿತ್ಯ, ಅಂತಾರಾಷ್ಟ್ರೀಯ ಕಾರು ರೇಸಿಂಗ್‌ಗೆ ಕಾಲಿಟ್ಟ ಮೊದಲ ವರ್ಷದಲ್ಲೇ ಈ ಸಾಧನೆ ಮಾಡಿದ್ದಾರೆ. ರಾಯೊ ರೇಸಿಂಗ್ ಪರ ಮಾಜಿ ಫಾರ್ಮುಲಾ–1 ಚಾಲಕ ಅಲೆಕ್ಸ್ ಯಂಗ್ ಅವರ ಆ್ಯಕ್ಸಲ್ ಸ್ಪೋರ್ಟ್ಸ್ ತಂಡಕ್ಕಾಗಿ ಸ್ಪರ್ಧಿಸಿದ ಆದಿತ್ಯ, ಮಳೆ ಹಾಗೂ ಬದಲಾಗುತ್ತಿದ್ದ ಹವಾಮಾನದ ಕಾರಣ ಕಠಿಣವಾಗಿದ್ದ ಅರ್ಹತಾ ಸುತ್ತಿನಲ್ಲಿ ನಾಲ್ಕನೇ ಸ್ಥಾನಕ್ಕೆ ತೃಪ್ತಿಪಟ್ಟರು. 21 ಚಾಲಕರ ಸ್ಪರ್ಧೆಯಲ್ಲಿ ಮೊದಲ ರೇಸ್ ಆರಂಭದಲ್ಲೇ ಕೆಲ ಸ್ಥಾನಗಳನ್ನು ಕಳೆದುಕೊಂಡರೂ, ಮಲೇಷ್ಯಾದ ತಾಜ್ ಐಮಾನ್ ವಿರುದ್ಧ ರೋಚಕ ಪೈಪೋಟಿ ನಡೆಸಿ ಮೂರನೇ ಸ್ಥಾನ ಗಳಿಸಿದರು. ಲ್ಯೂ ಝುವಾನ್ ಯಾನ್ ಮೊದಲ ಹಾಗೂ ತಾಜ್ ಐಮಾನ್ ಎರಡನೇ ಸ್ಥಾನ ಪಡೆದರು.

ಮೊದಲ ರೇಸ್‌ನ ಅಗ್ರ ಎಂಟು ಚಾಲಕರ ಆರಂಭಿಕ ಕ್ರಮವನ್ನು ಎರಡನೇ ರೇಸ್‌ಗೆ ತಲೆಕೆಳಗಾಗಿಸಿದ್ದರಿಂದ ಆದಿತ್ಯ ಆರನೇ ಸ್ಥಾನದಿಂದ ಆರಂಭಿಸಿದರು. ಉತ್ತಮ ಆರಂಭದೊಂದಿಗೆ ಮೂರನೇ ಲ್ಯಾಪ್‌ನಲ್ಲೇ ಮೂರನೇ ಸ್ಥಾನಕ್ಕೇರಿದ ಅವರು, ಸೇಫ್ಟಿ ಕಾರ್ ಅವಧಿಯ ನಂತರ ಎರಡನೇ ಸ್ಥಾನಕ್ಕೇರಿದರು. ಬಳಿಕ ಆ್ಯಡಂ ಮೈಕೆಲ್ ಅವರನ್ನು ಹಿಂದಿಕ್ಕಿ ಮುನ್ನಡೆ ಸಾಧಿಸಿದ




ಆದಿತ್ಯ, ಕೊನೆಯವರೆಗೂ ಮುನ್ನಡೆ ಕಾಯ್ದುಕೊಂಡು ಚೊಚ್ಚಲ ಅಂತಾರಾಷ್ಟ್ರೀಯ ಗೆಲುವು ದಾಖಲಿಸಿದರು. ಆ್ಯಡಂ ಮೈಕೆಲ್ ಹಾಗೂ ಅರಿಫ್ ಅಜ್ಮಿ ಕ್ರಮವಾಗಿ ಎರಡನೇ ಮತ್ತು ಮೂರನೇ ಸ್ಥಾನ ಪಡೆದರು. ಮೊದಲ ರೇಸ್ ತೀವ್ರ ಪೈಪೋಟಿಯಿಂದ ಕೂಡಿತ್ತು. ಎರಡನೇ ರೇಸ್‌ನಲ್ಲಿ ಹೋರಾಟ ಬಿಡದೆ ಮುನ್ನಡೆ ಸಾಧಿಸಿ ಗೆದ್ದಿದ್ದು ನನ್ನ ಪಾಲಿಗೆ ಈ ವರ್ಷದ ಅತ್ಯುತ್ತಮ ಅನುಭವ ಎಂದು ಆದಿತ್ಯ ಹೇಳಿದರು.

ಕಾರ್ಟಿಂಗ್‌ನಿಂದ ಫಾರ್ಮುಲಾ ಕಾರುಗಳವರೆಗೆ ಸ್ಪರ್ಧಿಸಿರುವ ಪ್ರತಿಯೊಂದು ವಿಭಾಗದಲ್ಲೂ ಆದಿತ್ಯ ತಮ್ಮ ಸಾಮರ್ಥ್ಯ ಸಾಬೀತುಪಡಿಸಿದ್ದಾರೆ. ಅಂತಾರಾಷ್ಟ್ರೀಯ ರೇಸಿಂಗ್‌ನ ಮೊದಲ ಋತುವಿನಲ್ಲೇ ಈ ಗೆಲುವು ಅವರ ಪ್ರತಿಭೆಗೆ ಸಾಕ್ಷಿ," ಎಂದು ರಾಯೊ ರೇಸಿಂಗ್ ಸಿಇಒ ಹಾಗೂ ಕೋಚ್ ಸೌರವ್ ಬಂಡೋಪಾಧ್ಯಾಯ ಹೇಳಿದರು. ಮಾಜಿ ಮಲೇಷ್ಯನ್ ಫಾರ್ಮುಲಾ–1 ಚಾಲಕ ಅಲೆಕ್ಸ್ ಯಂಗ್, ಮಲೇಷ್ಯಾದಲ್ಲಿ ಮೊದಲ ಬಾರಿಗೆ ಸ್ಪರ್ಧಿಸಿದ್ದರೂ ಆದಿತ್ಯ ಪರಿಸ್ಥಿತಿಗೆ ಅತ್ಯಂತ ವೇಗವಾಗಿ ಹೊಂದಿಕೊಂಡರು. ಅವರ ಪರಿಶ್ರಮಕ್ಕೆ ಈ ಗೆಲುವು ತಕ್ಕ ಪ್ರತಿಫಲ ಎಂದು ಶ್ಲಾಘಿಸಿದರು.

**ಭೀಕರ ಅಪಾಘತದಿಂದ ಚೇತರಿಕೆ:**

2023ರ ಎಫ್‌ಎಂಎಸ್‌ಸಿಐ ರಾಷ್ಟ್ರೀಯ ಕಾರ್ಟಿಂಗ್ ಚಾಂಪಿಯನ್ ಆಗಿರುವ ಆದಿತ್ಯ ಕಳೆದ ವರ್ಷ ಸಿಂಗಲ್ ಸೀಟರ್ ರೇಸ್‌ನಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಕೈ ಮುರಿದುಕೊಂಡು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು. ಎರಡು ತಿಂಗಳು ರೇಸಿಂಗ್‌ನಿಂದ ದೂರ ಉಳಿದಿದ್ದ ಅವರು, ಇದೀಗ ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಭರ್ಜರಿ ಕಮ್‌ಬ್ಯಾಕ್ ಮಾಡಿದ್ದಾರೆ. ಚಾಂಪಿಯನ್‌ಶಿಪ್‌ನಲ್ಲಿ ಇನ್ನೂ ಒಂದು ಸುತ್ತು ಬಾಕಿ ಇದ್ದು, 88 ಅಂಕಗಳೊಂದಿಗೆ ಆದಿತ್ಯ ಸದ್ಯ ಮೂರನೇ ಸ್ಥಾನದಲ್ಲಿದ್ದಾರೆ.

### ಆದಿತ್ಯಗಿದೆ ಬೆಂಗಳೂರಿನ ನಂಟು!

**2023ರಲ್ಲಿ ಬೆಂಗಳೂರಿನ ಮೆಕೊ ಕಾರ್ಟೋಪಿಯಾ ಸರ್ಕ್ಯೂಟ್‌ನಲ್ಲಿ ನಡೆದ ಎಫ್.ಎಂ.ಎಸ್.ಸಿ.ಐ ರಾಷ್ಟ್ರೀಯ ಕಾರ್ಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಆದಿತ್ಯ ಚಾಂಪಿಯನ್ ಆಗಿದ್ದರು. ಇದೇ ಸಾಧನೆಯ ಮೂಲಕ ಅವರು ಭಾರತವನ್ನು ಪ್ರತಿನಿಧಿಸಿ ಅಂತಾರರಾಷ್ಟ್ರೀಯ ಸ್ಪರ್ಧೆಗಳಲ್ಲಿ ಅವಕಾಶ ಪಡೆದಿದ್ದರು.**